# ಡಾ|| ರಾಜ್‌ಕುಮಾರ್ ಅಕಾಡೆಮಿ ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು



**ಮಾರ್ಚ್ ೪ನೇ ವಾರ**

23-03-2026 TO 28-03-2026

## ರಷ್ಯಾದಿಂದ ಎಸ್-400 ಖರೀದಿ: ಭಾರತ ಒಪ್ಪಂದ

- ವೆನೆಜುವೆಲಾ: ತೈಲ ಮಸೂದೆ ಚರ್ಚೆ
- ಭಾರತಕ್ಕೆ ಹೊರ್ಮುಜ್ ಜಲಸಂಧಿ ಮುಕ್ತ
- ನಲ್ಸಾ v/s ಭಾರತ ಸರ್ಕಾರ
- ವಿದೇಶಿ ವಿನಿಮಯ ಸಂಗ್ರಹ ಇಳಿಕೆ


ವಾರದ ಪ್ರಚಲಿತ ಘಟನೆಗಳು - ಪ್ರಜಾವಾಣಿ

**ದಿನಾಂಕ: 23ನೇ ಮಾರ್ಚ್ – 28ನೇ ಮಾರ್ಚ್ 2026**

## ❖ ದಾಖಲೆ ಬರೆದ ಪ್ರಧಾನಿ ಮೋದಿ

**ಸಂದರ್ಭ: ಮುಖ್ಯಮಂತ್ರಿ ಮತ್ತು ಪ್ರಧಾನಿಯಾಗಿ 8931 ದಿನಗಳನ್ನು ಪೂರೈಸುವ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಜೀವನದಲ್ಲಿ ದಾಖಲೆ ಬರೆದಿದ್ದಾರೆ.**

- ಪವನ್ ಕುಮಾರ್ ಚಾಮ್ಲಿಂಗ್ ಅವರು ಸಿಕ್ಕಿಂ ಮುಖ್ಯಮಂತ್ರಿಯಾಗಿ 8930 ದಿನ ಪೂರೈಸುವ ಮೂಲಕ ದೇಶದಲ್ಲಿಯೇ ದೀರ್ಘಾವಧಿಗೆ ಸರ್ಕಾರದ ಮುಖ್ಯಸ್ಥರಾಗಿದ್ದ ಖ್ಯಾತಿ ಹೊಂದಿದ್ದರು. ಇದೀಗ ಮೋದಿ ಅವರು ಚಾಮಿಂಗ್ ದಾಖಲೆಯನ್ನು ಮುರಿದಿದ್ದಾರೆ.




## ❖ ವಿಶ್ವ ಒಳಾಂಗಣ ಅಥ್ಲೆಟಿಕ್ಸ್‌ನಲ್ಲಿ ಸತತ ನಾಲ್ಕನೇ ಚಿನ್ನ: ಪೋಲ್‌ವಾಲ್ಟ್: ಡುಪ್ಲಾಂಟಿಸ್ ದಾಖಲೆ

**ಸಂದರ್ಭ: ಟೊರುನ್ (ಪೋಲೆಂಡ್) ಪೋಲ್ ವಾಲ್ಟ್ ತಾರೆ ಅರ್ಮಾಂಡ್ ಡುಪ್ಲ್ಯಾಂಟಿಸ್ ಅವರು ವಿಶ್ವ ಒಳಾಂಗಣ ಅಥ್ಲೆಟಿಕ್ಸ್‌ನಲ್ಲಿ ಕೂಟ ದಾಖಲೆಯೊಂದಿಗೆ ಚಿನ್ನದ ಪದಕ ಗೆದ್ದರು.**

- ಸ್ವೀಡನ್ ಡುಪ್ಲಾಂಟಿಸ್ 6.25 ಮೀಟರ್ ಎತ್ತರ ಜಿಗಿದರು ವರ್ಷದ ಹಿಂದೆ ನಾನ್‌ಜಿಂಗ್‌ನಲ್ಲಿ ತೋರಿದ ಸಾಧನೆಗಿಂತ 10 ಸೆಂಟಿಮೀಟರ್ ಎತ್ತರ ಜಿಗಿದು, ತನ್ನದೇ ದಾಖಲೆಯನ್ನು ಉತ್ತಮ ಪಡಿಸಿಕೊಂಡರು. ಈ ಮೂಲಕ ವಿಶ್ವ ಒಳಾಂಗಣ ಕೂಟದಲ್ಲಿ ಸತತ ನಾಲ್ಕನೇ ಬಾರಿ ಪ್ರಶಸ್ತಿ ಮುಡಿಗೇರಿಸಿಕೊಂಡರು.
- 26 ವರ್ಷದ ಡುಪ್ಲಾಂಟಿಸ್ ಕ್ರಮವಾಗಿ 6.10, 6.15 ಮತ್ತು 6.25 ಮೀಟರ್ ಎತ್ತರವನ್ನು ಯಶಸ್ವಿಯಾಗಿ ದಾಟಿದರು. ಗ್ರೀಸ್‌ನ ಇಮ್ಯಾನುವಲ್ ಕರಾಲಿಸ್ ಅವರು 6.15 ಮೀಟರ್ ಜಿಗಿದು ಸತತ ಎರಡನೇ ಬಾರಿ ಬೆಳ್ಳಿ ತಮ್ಮದಾಗಿಸಿಕೊಂಡರು.
- ಡುಪ್ಲಾಂಟಿನ್ ಮಾರ್ಚ್ 12ರಂದುಮೊಂಡೊ ಕ್ಲಾಸಿಕ್ ಕೂಟದಲ್ಲಿ 6.31 ಮೀ. ಸಾಧನೆಯೊಂದಿಗೆ ವಿಶ್ವದಾಖಲೆ ನಿರ್ಮಿಸಿದ್ದರು ಅದನ್ನು ಮುರಿಯುವ ಪ್ರಯತ್ನ (6.32 ಮೀ.) ಇಲ್ಲಿ ನಡೆಸಿದರು. ಆದರೆ, ಅದು ಸಾಧ್ಯವಾಲಿಲ್ಲ.

- ಆಸ್ಟ್ರೇಲಿಯಾದ ಕುರ್ಟಿಸ್ ಮಾರ್ಷಲ್ ವೈಯಕ್ತಿಕ ಅತ್ಯುತ್ತಮ 6 ಮೀಟರ್ ಸಾಧನೆಯೊಂದಿಗೆ ಮೂರನೇ ಸ್ಥಾನ ಪಡೆದರು. ಕೂಟದ ಇತಿಹಾಸದಲ್ಲಿ ಮೊದಲ ಬಾರಿಗೆ ಮೂರು ಸ್ಪರ್ಧಿಗಳು ಆರು ಮೀಟರ್ ಗಡಿ ದಾಟಿದರು.
- ಸ್ವಿಟ್ಸರ್ಲೆಂಡ್‌ನ ಸೈಮನ್ ಹ್ಯಾಮರ್ ವಿಶ್ವದಾಖಲೆಯ ಅಂಕ (6,670) ಗಳಿಸಿ ಹೆಪ್ಟಾಥ್ಲಾನ್ ಪ್ರಶಸ್ತಿ ಗೆದ್ದರು. 2012ರಲ್ಲಿ ಅಮೆರಿಕದ ಆತ್ಮನ್ ಈಟನ್ (6645) ನಿರ್ಮಿಸಿದ ದಾಖಲೆಯನ್ನು ಸೈಮನ್ ಮುರಿದರು.

## ❖ 'ತೇಜಸ್ವಿನಿಗೆ 'ಅಕ್ಕ ಪ್ರಶಸ್ತಿ'

**ಸಂದರ್ಭ: ಮಹಾಲಿಂಗಪುರ (ಬಾಗಲಕೋಟೆ ಜಿಲ್ಲೆ) ಸಮೀಪದ ಚಿಮ್ಮಡ ಗ್ರಾಮದ ವಿರಕ್ತಮಠದಿಂದ ಅಕ್ಕ ಮಹಾದೇವಿ ಜಯಂತಿ ಅಂಗವಾಗಿ ಪ್ರತಿ ವರ್ಷ ನೀಡುವ ರಾಜ್ಯಮಟ್ಟದ 'ಅಕ್ಕ ಪ್ರಶಸ್ತಿ'ಗೆ ಕೇಂದ್ರದ ಮಾಜಿ ಸಚಿವ ದಿ.ಅನಂತಕುಮಾರ್ ಅವರ ಪತ್ನಿ ತೇಜಸ್ವಿನಿ ಅನಂತಕುಮಾರ್ ಭಾಜನರಾಗಿದ್ದಾರೆ.**

- ತೇಜಸ್ವಿನಿ ಅನಂತಕುಮಾರ್ ಅವರ ಸಾಮಾಜಿಕ ಸೇವೆ ಪರಿಗಣಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಏ.2ರಂದು ಶ್ರೀಮಠದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ವಿರಕ್ತಮಠದ ಪ್ರಭು ಸ್ವಾಮೀಜಿ ತಿಳಿಸಿದ್ದಾರೆ.




## ❖ ನಿಷೇಧ: ಆರು ವರ್ಷ ಹಲವು ಕಾಯ್ದೆ

**ಮೌಢ್ಯ**

- ರಾಜ್ಯದಲ್ಲಿರುವ ಅಮಾನವೀಯ ಆಚರಣೆಗಳು, ಮಾಟ-ಮಂತ್ರ ಮತ್ತು ವಾಮಾಚಾರ ಇನ್ನಿತರ ಮೌಢ್ಯದ ಆಚರಣೆಗಳನ್ನು ತಡೆಗಟ್ಟುವ ಉದ್ದೇಶದಿಂದ 'ಮೌಢ್ಯ ನಿಷೇಧ ಕಾಯ್ದೆ-2020 (ಮೌಢ್ಯ ನಿರ್ಬಂಧ ಮತ್ತು ನಿರ್ಮೂಲನಾ ಕಾಯ್ದೆ) ಅನ್ನು ರಾಜ್ಯ ಸರ್ಕಾರ ಜಾರಿಗೆ ತಂದಿದೆ. ಇದರ ಪ್ರಕಾರ, ಮಡೆಸ್ನಾನ, ಬೆತ್ತಲೆ ಮೆರವಣಿಗೆ ಮತ್ತು ದೈಹಿಕ ಹಿಂಸೆ ನೀಡುವ ಮೂಢನಂಬಿಕೆಗಳನ್ನು ಪಾಲಿಸುವುದು ಶಿಕ್ಷಾರ್ಹ ಅಪರಾಧ. ಸಮಾಜದಲ್ಲಿ ಶೋಷಣೆಗೆ ಕಾರಣವಾಗುವ ಅನಿಷ್ಟ ಆಚರಣೆಗಳನ್ನು ಮಾತ್ರ ಕಾಯ್ದೆ ನಿಷೇಧಿಸುತ್ತದೆ.
- ದೇವಸ್ಥಾನ, ಮಸೀದಿ, ಚರ್ಚ್ ಇತ್ಯಾದಿಗಳಲ್ಲಿ ನಡೆಯುವ ಸಾಂಪ್ರದಾಯಿಕ ಪೂಜೆಗಳು ಮತ್ತು ಧಾರ್ಮಿಕ ಆಚರಣೆಗಳಿಗೆ ಯಾವುದೇ ಅಡ್ಡಿ ಇಲ್ಲ. ಆದರೆ ದೈಹಿಕ ಹಿಂಸೆ ಇರಬಾರದು. ಸಮಾಜದಲ್ಲಿ ಅಜ್ಞಾನದಿಂದ ನಡೆಯುವ ಶೋಷಣೆಯನ್ನು ತಡೆಯುವುದು ಮತ್ತು ವೈಜ್ಞಾನಿಕ ಮನೋಭಾವವನ್ನು ಮೂಡಿಸುವುದು; ದುರ್ಬಲ ವರ್ಗದವರನ್ನು ಮಹಿಳೆಯರನ್ನು ಮತ್ತು ಹಿಂದುಳಿದವರನ್ನು ಮೌಢ್ಯಾಚರಣೆಗಳ ಹೆಸರಿನಲ್ಲಿ ನಡೆಯುವ ಶೋಷಣೆಯಿಂದ ರಕ್ಷಿಸುವ ಗುರಿಯನ್ನು ಹೊಂದಿದೆ.
- 2017ರಲ್ಲಿ ಕಾಂಗ್ರೆಸ್ ಸರ್ಕಾರ ಈ ಮಸೂದೆಯನ್ನು ರೂಪಿಸಿತ್ತು. ಕಾಯ್ದೆ ಜಾರಿಗೆ ಅಧಿಸೂಚನೆಯನ್ನೂ ಹೊರಡಿಸಿತ್ತು ನಂತರ ತಾಂತ್ರಿಕ ಕಾರಣಕ್ಕಾಗಿ ವಾಪಸ್ ಪಡೆಯಲಾಗಿತ್ತು ನಂತರ ಅಧಿಕಾರಕ್ಕೆ ಬಂದ ಬಿಜೆಪಿ ನೇತೃತ್ವದ ಸರ್ಕಾರ 2020ರ ಜನವರಿಯಲ್ಲಿ ಈ ಕಾಯ್ದೆ ಜಾರಿಗೊಳಿಸಿ ಅಧಿಸೂಚನೆ ಹೊರಡಿಸಿತು.

Dr. Rajkumar IAS/KAS Academy

## ಮತಾಂತರ

- ಹಿಂದಿನ ಬಿಜೆಪಿ ನೇತೃತ್ವದ ಸರ್ಕಾರದಲ್ಲಿ ಜಾರಿಗೆ ತಂದಿರುವ ಪ್ರಮುಖ ಕಾನೂನುಗಳ ಪೈಕಿ ಪ್ರಮುಖವಾದುದು ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ಹಕ್ಕು ಸಂರಕ್ಷಣಾ (ಮತಾಂತರ ನಿಷೇಧ) ಕಾಯ್ದೆ.
- 2021ರ ಡಿಸೆಂಬರ್‌ನಲ್ಲಿ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆದ ವಿಧಾನಮಂಡಲ ಅಧಿವೇಶನದಲ್ಲಿ ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ಹಕ್ಕು ಸಂರಕ್ಷಣಾ (ಮತಾಂತರ ನಿಷೇಧ) ಮಸೂದೆಯನ್ನು ಮಂಡಿಸಲಾಗಿತ್ತು. ವಿಧಾನಸಭೆಯ ಅಂಗೀಕಾರವೂ ದೊರಕಿತ್ತು. ಆದರೆ, ವಿಧಾನ ಪರಿಷತ್‌ನಲ್ಲಿ ಸದಸ್ಯಬಲದ ಕೊರತೆಯಿಂದ ಮಸೂದೆ ಮಂಡಿಸಿರಲಿಲ್ಲ. ಸುಗ್ರೀವಾಜ್ಞೆ ಮೂಲಕ ಮಸೂದೆಯನ್ನು ಜಾರಿಗೊಳಿಸಲಾಗಿತ್ತು.
- ತಿಂಗಳುಗಳ ಬಳಿಕ ಮೇಲ್ಮನೆಯಲ್ಲಿ ಮತ್ತೆ ಅಂಗೀಕಾರ ಪಡೆಯಲಾಗಿತ್ತು. ರಾಜ್ಯಪಾಲ ಥಾವರಚಂದ್ ಗೆಹಲೋತ್ ಅವರು 2022ರ ಸೆಪ್ಟೆಂಬರ್‌ನಲ್ಲಿ ಅಂಕಿತ ಹಾಕಿದ್ದರು.
- ಈ ಕಾಯ್ದೆಗೆ ಕ್ರೈಸ್ತರು ಸೇರಿದಂತೆ ಹಲವು ಸಮುದಾಯಗಳಿಂದ ವಿರೋಧ ವ್ಯಕ್ತವಾಗಿತ್ತು. ಇದು ಸಂವಿಧಾನ ನೀಡುವ ಧಾರ್ಮಿಕ ಸ್ವಾತಂತ್ರ್ಯದ ಹಕ್ಕನ್ನು ಕಸಿದುಕೊಳ್ಳುತ್ತದೆ ಎಂಬ ಆರೋಪವೂ ಕೇಳಿಬಂದಿತ್ತು.
- 'ಕರ್ನಾಟಕವೂ ಸೇರಿದಂತೆ ಕೆಲವು ರಾಜ್ಯಗಳಲ್ಲಿ ಜಾರಿಗೆ ತಂದಿದ್ದ ಈ ಕಾಯ್ದೆಯು ದೇಶದ ವಿವಿಧ ಭಾಗಗಳಲ್ಲಿ ಕ್ರೈಸ್ತರ ಮೇಲೆ ದಾಳಿ ಮಾಡುವಂತೆ ಪ್ರೇರೇಪಿಸಿತ್ತು' ಎಂದು ಕರ್ನಾಟಕ ಪ್ರಾಂತ್ಯ ಕ್ಯಾಥೋಲಿಕ್ ಧರ್ಮಾಧ್ಯಕ್ಷರ ಮಂಡಳಿ, ಅಖಿಲ ಕರ್ನಾಟಕ ಕ್ರೈಸ್ತ ಮಾನವ ಹಕ್ಕುಗಳ ಒಕ್ಕೂಟ ವೇದಿಕೆ ಆರೋಪಿಸಿದವು.
- 2023ರ ಚುನಾವಣೆಗೂ ಮುನ್ನ, ತಾನು ಅಧಿಕಾರಕ್ಕೆ ಬಂದರೆ ಈ ಕಾಯ್ದೆಯನ್ನು ರದ್ದುಪಡಿಸುವುದಾಗಿ ಕಾಂಗ್ರೆಸ್ ಹೇಳಿತ್ತು. ಆದರೆ, ಈವರೆಗೂ ಸರ್ಕಾರ ಕಾಯ್ದೆ ರದ್ದುಗೊಳಿಸಿಲ್ಲ. ಕಾಯ್ದೆ ದುರುಪಯೋಗಪಡಿಸಿಕೊಂಡು ಕ್ರೈಸ್ತರ ಮೇಲೆ ಎಫ್‌ಐಆರ್ ದಾಖಲಿಸಲಾಗುತ್ತಿದೆ ಎಂದು ಕ್ರೈಸ್ತ ಸಂಘಟನೆಗಳು ಆರೋಪಿಸುತ್ತಿವೆ.

## ಜಾನುವಾರು ಹತ್ಯೆ

- ರಾಜ್ಯದಲ್ಲಿ ಜಾನುವಾರುಗಳ ಹತ್ಯೆಯನ್ನು ತಡೆಯುವ ಉದ್ದೇಶದಿಂದ 2020ರಲ್ಲಿ ಹಿಂದಿನ ಬಿಜೆಪಿ ಸರ್ಕಾರ, ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಹಾಗೂ ಸಂರಕ್ಷಣಾ ಕಾಯ್ದೆಯನ್ನು ಜಾರಿಗೆ ತಂದಿತು ಗೋಹತ್ಯೆ ನಿಷೇಧ ಕಾಯ್ದೆ ಎಂದೂ ಇದು ಪ್ರಚಲಿತದಲ್ಲಿದೆ ಜಾನುವಾರಗಳ ಕಳ್ಳಸಾಗಣೆ, ಅವುಗಳ ಹತ್ಯೆಯನ್ನು ತಪ್ಪಿಸುವುದರ ಜೊತೆಗೆ ಅವುಗಳ ಸಂರಕ್ಷಣೆಗೂ ಒತ್ತು ಕೊಡುವ ಅಂಶಗಳು ಕಾಯ್ದೆಯಲ್ಲಿವೆ ಜಾನುವಾರುಗಳ ಸಾಗಣೆಗೆ ಕಠಿಣ ನಿಯಮಗಳನ್ನೂ ಈ ಕಾಯ್ದೆಯಡಿ ರೂಪಿಸಲಾಗಿದೆ ರೈತರು ಅವರ ಜಾನುವಾರುಗಳನ್ನು ಸಾಗಿಸುವುದಕ್ಕೂ ಇದರ ನಿಯಮಗಳು ಅನ್ವಯವಾಗುತ್ತವೆ ರೈತರ ಹಿತದೃಷ್ಟಿಯಿಂದ ಹಾಗೂ ಗೋವುಗಳ ಆರೋಗ್ಯ ಮತ್ತು ಮಾಂಸಕ್ಕಾಗಿ ಅವುಗಳ ಹತ್ಯೆಯನ್ನು ತಡೆಯುವ ಉದ್ದೇಶದಿಂದ ಕಾಯ್ದೆ ರೂಪಿಸಲಾಗಿದೆ ಎಂದು ಹಿಂದಿನ ಸರ್ಕಾರ ಹೇಳಿಕೊಂಡಿತ್ತು.
- ರಾಜ್ಯದಲ್ಲಿ ಪರ ವಿರೋಧ ಚರ್ಚೆಯನ್ನು ಹುಟ್ಟುಹಾಕಿದ್ದ ಈ ಕಾನೂನನ್ನು ಪರಿಣಾ ಮಕಾರಿಯಾಗಿ ಜಾರಿಗೊಳಿಸಲು ಮತ್ತು ಜಾನುವಾರುಗಳ ಮೇಲೆ ನಡೆಯುವ ಕ್ರೌರ್ಯ ಮತ್ತು ಹಿಂಸೆ ತಡೆಗಟ್ಟಲು ಕರ್ನಾಟಕ ಪ್ರಾಣಿ ಕಲ್ಯಾಣ ಮಂಡಳಿ ಸ್ಥಾಪಿಸಲಾಗಿತ್ತು.

- ವಿರೋಧ ಪಕ್ಷದಲ್ಲಿದ್ದಾಗ ಕಾಯ್ದೆಯನ್ನು ತೀವ್ರವಾಗಿ ವಿರೋಧಿಸಿದ್ದ ಕಾಂಗ್ರೆಸ್, ಅಧಿಕಾರಕ್ಕೆ ಬಂದ ನಂತರ ಈ ಕಾಯ್ದೆಗೆ ತಿದ್ದುಪಡಿ ತರಲು ತೀರ್ಮಾನಿಸಿತ್ತು 2025ರ ಡಿಸೆಂಬರ್ನಲ್ಲಿ ಸಚಿವ ಸಂಪುಟ ಸಭೆ ಕೂಡ ತಿದ್ದುಪಡಿ ಮಸೂದೆ ಮಂಡನೆಗೆ ಒಪ್ಪಿಗೆ ಸೂಚಿಸಿತ್ತು ಬಿಜೆಪಿ, ವಿಎಚ್‌ಪಿ, ಬಜರಂಗದಳ ಸೇರಿದಂತೆ ಹಿಂದೂಪರ ಸಂಘಟನೆಗಳು ತಿದ್ದುಪಡಿ ಮಾಡುವುದಕ್ಕೆ ವಿರೋಧ ವ್ಯಕ್ತಪಡಿಸಿದ್ದವು ಚಳಿಗಾಲದ ಅಧಿವೇಶನದಲ್ಲಿ ತಿದ್ದುಪಡಿ ಮಸೂದೆಯನ್ನು ಮಂಡಿಸುವ ಬಗ್ಗೆಯೂ ಚರ್ಚೆಯಾಗಿತ್ತು ಆದರೆ, ಸರ್ಕಾರ ಮಸೂದೆ ಮಂಡಿಸಿಲ್ಲ. ಕಾಯ್ದೆಯನ್ನು ರದ್ದುಪಡಿಸುವ ಪ್ರಸ್ತಾವ ಸರ್ಕಾರದ ಮುಂದೆ ಇಲ್ಲ ಎಂದು ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್ ಇತ್ತೀಚೆಗೆ ಹೇಳಿದ್ದಾರೆ.

**ಸಾಮಾಜಿಕ ಬಹಿಷ್ಕಾರ**

- ರಾಜ್ಯದ ವಿವಿಧ ಕಡೆಗಳಲ್ಲಿ ಚಾಲ್ತಿಯಲ್ಲಿರುವ ಸಾಮಾಜಿಕ ಬಹಿಷ್ಕಾರ ಎಂಬ ಅನಿಷ್ಟ ಪದ್ಧತಿಯನ್ನು ಸಂಪೂರ್ಣ ನಿಷೇಧಿಸುವುದಕ್ಕಾಗಿ 'ಕರ್ನಾಟಕ ಸಾಮಾಜಿಕ ಬಹಿಷ್ಕಾರ (ಪ್ರತಿಬಂಧಕ, ನಿಷೇಧ ಮತ್ತು ಪರಿಹಾರ) ಕಾಯ್ದೆ-2025 ಅನ್ನು ರಾಜ್ಯ ಸರ್ಕಾರ ಈ ವರ್ಷದ ಜನವರಿಯಲ್ಲಿ ಜಾರಿಗೆ ತಂದಿದೆ. ಈ ಕಾಯ್ದೆಯು ಸಾಮಾಜಿಕ ಬಹಿಷ್ಕಾರವನ್ನು ಅಪರಾಧ ಎಂದು ಪರಿಗಣಿಸುತ್ತದೆ. ಯಾವುದೇ ವ್ಯಕ್ತಿ, ಕುಟುಂಬ ಅಥವಾ ಕುಟುಂಬದ ಸದಸ್ಯರನ್ನು ಸಾಮಾಜಿಕವಾಗಿ ಬಹಿಷ್ಕರಿಸಿದರೆ ಮೂರು ವರ್ಷದವರೆಗೆ ಜೈಲು ಶಿಕ್ಷೆ ಮತ್ತು ₹1 ಲಕ್ಷ ದಂಡ ವಿಧಿಸುವುದಕ್ಕೆ ಈ ಕಾನೂನು ಅವಕಾಶ ನೀಡುತ್ತದೆ.
- ಬಹಿಷ್ಕರಿಸುವ ತೀರ್ಮಾನ ತೆಗೆದುಕೊಳ್ಳುವುದು, ಈ ಉದ್ದೇಶದಿಂದ ಸಭೆ, ಪಂಚಾಯಿತಿ ಜಮಾವಣೆ, ಅಭಿಪ್ರಾಯ ಸಂಗ್ರಹಿಸುವುದು, ಬಹಿಷ್ಕಾರಕ್ಕೆ ಪ್ರತ್ಯಕ್ಷ ಪರೋಕ್ಷ ಸಹಾಯ, ಒತ್ತಡ, ಪ್ರಚೋದನೆ ನೀಡುವವರನ್ನೂ ಅಪರಾಧಿಗಳೆಂದು ಪರಿಗಣಿಸಿ ಜೈಲು ಅಥವಾ ದಂಡ ಅಥವಾ ಎರಡನ್ನೂ ವಿಧಿಸಲೂ ಈ ಕಾಯ್ದೆಯಲ್ಲಿ ಅವಕಾಶ ಕಲ್ಪಿಸಲಾಗಿದೆ.
- ಈ ಕಾಯ್ದೆಯ ಅನ್ಯಾಯ ಬಹಿಷ್ಕಾರಕ್ಕೆ ಒಳಗಾದವರು ಪೊಲೀಸರಿಗೆ ಅಥವಾ ನ್ಯಾಯಾಧೀಶರಿಗೆ ದೂರು ನೀಡಬಹುದು ಪ್ರಥಮ ದರ್ಜೆ ನ್ಯಾಯಾಧೀಶರಿಗೆ ವಿಚಾರಣೆಯ ಅಧಿಕಾರ ನೀಡಲಾಗಿದೆ. ನೇರವಾಗಿ ಸಲ್ಲಿಕೆಯಾದ ದೂರಿನ ತನಿಖೆ ನಡೆಸುವಂತೆ ನ್ಯಾಯಾಧೀಶರು ಆದೇಶ ನೀಡಬಹುದು ಸಂತ್ರಸ್ತರಿಗೆ ಸಹಾಯ ಒದಗಿಸಲು ಮತ್ತು ದಂಡದ ಮೊತ್ತವನ್ನು ಪರಿಹಾರವಾಗಿ ನೀಡಲು ನಿರ್ದೇಶನ ನೀಡಬಹುದು. ಸಾಮಾಜಿಕ ಬಹಿಷ್ಕಾರದಂತಹ ನಿರ್ಧಾರ ತೆಗೆದುಕೊಳ್ಳಲು ನಡೆಸುವ ಸಭೆಗಳ ಕುರಿತು ಮಾಹಿತಿ ಬಂದರೆ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ನಿಷೇಧಿಸಿ ಆದೇಶಿಸಬಹುದು ಮರ್ಯಾದೆಗೇಡು ಹತ್ಯೆ
- ಬೇರೆ ಜಾತಿಯವರನ್ನು ಪ್ರೀತಿಸಿ ಮದುವೆಯಾದವರನ್ನು ಮರ್ಯಾದೆ ಹೆಸರಿನಲ್ಲಿ ಹಲ್ಲೆ ಹತ್ಯೆ ಮಾಡುವ ಹಾಗೂ ಬಹಿಷ್ಕರಿಸುವವರನ್ನು ಕಠಿಣ ಶಿಕ್ಷೆಗೆ ಗುರಿಪಡಿಸುವ ಉದ್ದೇಶದ ಇವ ನಮ್ಮವ ಇವ ನಮ್ಮವ ಮಸೂದೆಯನ್ನು ರಾಜ್ಯ ಸರ್ಕಾರ ವಿಧಾನಸಭೆಯಲ್ಲಿ ಮಂಡಿಸಿದೆ.
- ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮರ್ಯಾದೆಗೇಡು ಹತ್ಯೆ ಹೆಸರಿನಲ್ಲಿ ನಡೆದ ಕೊಲೆ, ದೌರ್ಜನ್ಯಗಳ ತಡೆಗೆ ಕಠಿಣ ಕಾನೂನು ತರಬೇಕೆಂದು ನಾಗರಿಕರು, ವಿವಿಧ ಸಂಸ್ಥೆಗಳು ಸರ್ಕಾರದ ಮೇಲೆ ಒತ್ತಡ ಹೇರಿದ್ದವು.
- ಕಾಯ್ದೆ ರೂಪಿಸುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೀಡಿದ್ದ ಭರವಸೆಯಂತೆ 'ಕರ್ನಾಟಕ ವಿವಾಹದಲ್ಲಿ ಆಯ್ಕೆಯ ಸ್ವಾತಂತ್ರ್ಯ ಹಾಗೂ ಮರ್ಯಾದೆ ಮತ್ತು ಸಂಪ್ರದಾಯದ ಹೆಸರಿನಲ್ಲಿ ಅಪರಾಧಗಳ ಪ್ರತಿಬಂಧಕ ಮತ್ತು ನಿಷೇಧ (ಇವ ನಮ್ಮವ ಇವ ನಮ್ಮವ) ಮಸೂದೆ-2026 ಸಿದ್ಧಪಡಿಸಲಾಗಿದ್ದು, ಈಚೆಗೆ ಸಂಪುಟ ಸಭೆಯಲ್ಲಿ ಅನುಮೋದನೆ ಪಡೆಯಲಾಗಿದೆ.
- ಅಂತರ್ಜಾತಿ ವಿವಾಹಗಳನ್ನು ಮಾನ್ಯ ಮಾಡುವುದು, ಅಂತಹ ಮದುವೆಯಾದವರಿಗೆ ತಾರತಮ್ಯ ಮಾಡುವುದರ ವಿರುದ್ಧ ರಕ್ಷಣೆ ಒದಗಿಸುವುದು, ಮರ್ಯಾದೆ ಅಥವಾ ಸಂಪ್ರದಾಯದ ಹೆಸರಿನಲ್ಲಿ ದೌರ್ಜನ್ಯ ಎಸಗುವ, ಹತ್ಯೆ ಮಾಡುವ ಕೃತ್ಯಗಳನ್ನು ತಡೆಯುವುದು, ಮೇಲ್ವಿಚಾರಣಾ ಸಮಿತಿಗಳನ್ನು ರಚಿಸುವುದು, ಪ್ರತಿ ಜಿಲ್ಲೆಯಲ್ಲೂ 'ಇವ ನಮ್ಮವ' ವೇದಿಕೆಗಳನ್ನು ರಚಿಸುವುದು, ವಿಶೇಷ ತ್ವರಿತ ನ್ಯಾಯಾಲಯಗಳನ್ನು ಸ್ಥಾಪಿಸುವುದು, ಅಪರಾಧಿಗಳಿಗೆ ಐದು ವರ್ಷಗಳಿಗೆ ಕಡಿಮೆ ಇಲ್ಲದಂತಹ ಕಠಿಣ ಶಿಕ್ಷೆ ವಿಧಿಸಲು ಮಸೂದೆಯಲ್ಲಿ ಅವಕಾಶ ಮಾಡಿಕೊಡಲಾಗಿದೆ.

Dr. Rajkumar IAS/KAS Academy

## ದ್ವೇಷ ಭಾಷಣ ನಿಷೇಧ

- ರಾಜ್ಯದಲ್ಲಿ ದ್ವೇಷ ಭಾಷಣ ಹಾಗೂ ದ್ವೇಷಾಪರಾಧಗಳನ್ನು ತಡೆಯಲು 'ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ಪ್ರತಿಬಂಧಕ) ಮಸೂದೆ -2025' ಅನ್ನು ಕಾಂಗ್ರೆಸ್ ನೇತೃತ್ವದ ಸರ್ಕಾರ ರೂಪಿಸಿತ್ತು. ಎರಡೂ ಸದನಗಳಲ್ಲಿ ಅಂಗೀಕಾರವಾಗಿತ್ತು. ಅಂಕಿತಕ್ಕಾಗಿ ರಾಜ್ಯಪಾಲರಿಗೆ ಕಳುಹಿಸಲಾಗಿತ್ತು.
- ಆದರೆ, ಹೈಕೋರ್ಟ್‌ಗಳು ಮತ್ತು ಸುಪ್ರೀಂ ಕೋರ್ಟ್ ನೀಡಿದ್ದ ಕೆಲವು ತೀರ್ಪುಗಳನ್ನು ಉಲ್ಲೇಖಿಸಿ ಮತ್ತು ಸಾಂವಿಧಾನಿಕವಾಗಿ ಸಂರಕ್ಷಿತವಾದ ಪ್ರಜಾಪ್ರಭುತ್ವದ ಮೇಲೆ ತೀವ್ರ ನಕಾರಾತ್ಮಕ ಪರಿಣಾಮ ಉಂಟುಮಾಡುವ ಸಾಧ್ಯತೆಯ ಆತಂಕ ವ್ಯಕ್ತಪಡಿಸಿ ಈ ಮಸೂದೆಯನ್ನು ರಾಜ್ಯಪಾಲರು ಸರ್ಕಾರಕ್ಕೆ ವಾಪಸ್ ಕಳುಹಿಸಿದ್ದರು.
- 'ದ್ವೇಷ ಅಪರಾಧಗಳನ್ನು ಸಹಿಸುವುದಿಲ್ಲ' ಎಂದು 2018ರ ಜುಲೈ 17ರಂದು ಹಾಗೂ ಕೋಮು ದ್ವೇಷ ಹರಡುವ ಅಥವಾ ದ್ವೇಷ ಭಾಷಣದಲ್ಲಿ ತೊಡಗಿಸಿಕೊಳ್ಳುವ ಯಾವುದೇ ಪ್ರಯತ್ನವನ್ನು ಸಹಿಸುವುದಿಲ್ಲ' ಎಂದು 2025ರ ಮೇ 5ರಂದು ಸುಪ್ರೀಂ ಕೋರ್ಟ್ ಪ್ರತ್ಯೇಕ ತೀರ್ಪುಗಳಲ್ಲಿ ಅಭಿಪ್ರಾಯ ವ್ಯಕ್ತಪಡಿಸಿತ್ತು ಈ ತೀರ್ಪುಗಳನ್ನು ಪರಿಗಣಿಸಿ ಮಸೂದೆಯನ್ನು ರೂಪಿಸಲಾಗಿದೆ. ಹೀಗಾಗಿ, ಅಂಕಿತ ಹಾಕುವಂತೆ ರಾಷ್ಟ್ರಪತಿಗೆ ಮನವಿ ಮಾಡಲಾಗಿದೆ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವಾಲಯ ಹೇಳಿದೆ.
- ಈ ಮಸೂದೆಯನ್ನು ಬಿಜೆಪಿ ನಾಯಕರು, ಆರ್‌ಎಸ್‌ಎಸ್. ಹಿಂದುತ್ವವಾದಿ ಸಂಘಟನೆಗಳ ಮುಖಂಡರು ತೀವ್ರವಾಗಿ ಖಂಡಿಸಿದ್ದರು. ವಿರೋಧದ ನಡುವೆಯೂ ಎರಡೂ ಸದನಗಳಲ್ಲಿ ಮಸೂದೆ ಅಂಗೀಕಾರವಾಗುವಂತೆ ಸರ್ಕಾರ ನೋಡಿಕೊಂಡಿತ್ತು.

### ❖ ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳಿಗೆ ಸುಪ್ರೀಂ ಕೋರ್ಟ್ ನಿರ್ದೇಶನ: 'ಜೈಲುಗಳಲ್ಲಿ ದಟ್ಟಣೆ: ಮಾಹಿತಿ ಸಲ್ಲಿಸಲು ಸೂಚನೆ

**ಸಂದರ್ಭ: ಕಾರಾಗೃಹ ಗಳಲ್ಲಿನ ದಟ್ಟಣೆ ನಿವಾರಣೆಗೆ ತೆಗೆದುಕೊಂಡಿರುವ ಕ್ರಮಗಳು ಹಾಗೂ ಪ್ರತಿಯೊಂದು ಕಾರಾಗೃಹದಲ್ಲಿನ ಅನುಮೋದಿತ ಸಾಮರ್ಥ್ಯಕ್ಕೆ ಸಂಬಂಧಿಸಿದ ಪರಿಷ್ಕೃತ ವಿವರಗಳನ್ನು ಸಲ್ಲಿಸುವಂತೆ ರಾಜ್ಯಗಳಿಗೆ ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಸುಪ್ರೀಂ ಕೋರ್ಟ್ ಸೂಚನೆ ನೀಡಿದೆ. ಜತೆಗೆ ವರದಿ ಸಲ್ಲಿಕೆಗೆ ಮೇ18ರ ವರೆಗೆ ಗಡುವು ನೀಡಿದೆ.**

- ಕಾರಾಗೃಹಗಳಲ್ಲಿನ ಅಮಾನವೀಯ ಸ್ಥಿತಿಗತಿಗೆ ಸಂಬಂಧಿಸಿದಂತೆ ಸ್ವಯಂಪ್ರೇರಿತ ಪ್ರಕರಣವನ್ನು ಸುಪ್ರೀಂ ಕೋರ್ಟ್ ದಾಖಲಿಸಿಕೊಂಡಿದ್ದು, ನ್ಯಾಯಮೂರ್ತಿ ವಿಕ್ರಮ್ ನಾಥ್ ಹಾಗೂ ನ್ಯಾಯಮೂರ್ತಿ ಸಂದೀಪ್ ಮೆಹ್ತಾ ಅವರಿದ್ದ ಪೀಠವು ಈ ಪ್ರಕರಣದ ವಿಚಾರಣೆ ನಡೆಸಿದೆ.
- ಕಾರಾಗೃಹ ಸ್ಥಿತಿಗತಿ ಕುರಿತು ರಾಜ್ಯಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳು ಸಲ್ಲಿಸಿರುವ ಅಂಕಿ-ಅಂಶದ ವರದಿಗಳು 2023ಕ್ಕೆ ಸಂಬಂಧಿಸಿದ್ದು ಎಂದು ಅಮಿಕಸ್ ಕ್ಯೂರಿ ಆಗಿರುವ ಹಿರಿಯ ವಕೀಲ ಗೌರವ್ ಅಗರ್ವಾಲ್ ಅವರು ನ್ಯಾಯಪೀಠದ ಗಮನಕ್ಕೆ ತಂದಿದ್ದಾರೆ.
- ಹೀಗಾಗಿ, 2026ರ ಮಾರ್ಚ್1ರವರೆಗಿನ ದಾಖಲಾತಿಗೆ ಅನುಗುಣವಾಗಿ ವಿವರಗಳನ್ನು ಸಲ್ಲಿಸಲು ನ್ಯಾಯಪೀಠ ನಿರ್ದೇಶಿಸಿದೆ ಜತೆಗೆ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿರುವ ಒಟ್ಟು ಮಹಿಳಾ ಕಾರಾಗೃಹಗಳ ಸಂಖ್ಯೆ ಎಷ್ಟು? ಅಲ್ಲಿ ಏನೆಲ್ಲಾ ಸೌಲಭ್ಯಗಳಿದೆ? ಮಹಿಳಾ ಕೈದಿಗಳ ಜತೆಗಿರುವ ಮಕ್ಕಳ ವಿದ್ಯಾಭ್ಯಾಸ ಹಾಗೂ ಕಲ್ಯಾಣಕ್ಕೆ ಸಂಬಂಧಿಸಿದಂತೆ ಏನೆಲ್ಲಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂಬ ವಿವರಗಳನ್ನು ಸಲ್ಲಿಸುವಂತೆಯೂ ಪೀಠ ಸೂಚಿಸಿದೆ.

Dr. Rajkumar IAS/KAS Academy

## ❖ ಲೋಕಪಾಲಕ್ಕೆ ಕಾಲಾವಕಾಶ


**ಸಂದರ್ಭ: 'ಪ್ರಶ್ನೆಗಾಗಿ ಲಂಚ' ಪ್ರಕರಣದಲ್ಲಿ ಟಿಎಂಸಿ ಸಂಸದೆ ಮಹುವಾ ಮೊಯಿತ್ರಾ ವಿರುದ್ಧ ಆರೋಪಪಟ್ಟಿ ಸಲ್ಲಿಸಲು ಸಿಬಿಐಗೆ ಅನುಮತಿ ನೀಡುವ ವಿಚಾರವನ್ನು ಕಾನೂನಿನ ಪ್ರಕಾರ ಪರಿಗಣಿಸಲು ಲೋಕಪಾಲಕ್ಕೆ ನೀಡಿದ್ದ ಕಾಲಾವಕಾಶವನ್ನು ದೆಹಲಿ ಹೈಕೋರ್ಟ್ ಎರಡು ತಿಂಗಳು ವಿಸ್ತರಿಸಿದೆ.**

- ನ್ಯಾಯಮೂರ್ತಿಗಳಾದ ಅನಿಲ್ ಕ್ಷೇತ್ರಪಾಲ್ ಮತ್ತು ಹರೀಶ್ | ವೈದ್ಯನಾಥನ್ ಶಂಕರ್ ಅವರ ಪೀಠವು, ಸಮಯ ವಿಸ್ತರಣೆ ಕೋರಿ ಇನ್ನು ಮುಂದೆ ಸಲ್ಲಿಸುವ ಯಾವುದೇ ಮನವಿಯನ್ನು ಪರಿಗಣಿಸುವುದಿಲ್ಲ ಎಂದು ಹೇಳಿತು.
- ಮಹುವಾ ಮತ್ತು ಕೇಂದ್ರೀಯ ತನಿಖಾ ಸಂಸ್ಥೆಯ (ಸಿಬಿಐ) ಪರ ವಾದ ಮಂಡಿಸಿದ ವಕೀಲರು, 'ಕಾಲಾವಕಾಶವನ್ನು ಎರಡು ತಿಂಗಳು ವಿಸ್ತರಿಸಬೇಕೆಂಬ ಲೋಕಪಾಲದ ಮನವಿಯನ್ನು ನಾವು ವಿರೋಧಿಸುತ್ತಿಲ್ಲ' ಎಂದು ಹೇಳಿದರು.

# ಐದು ಪಾಲಿಕೆ, ಸ್ಥಳೀಯ ಸಂಸ್ಥೆ ಚುನಾವಣೆ: ಹಲವು ಸವಾಲು

**ರಾಜ್ಯ ಚುನಾವಣಾ ಆಯುಕ್ತ ಜಿ.ಎಸ್. ಸಂಗ್ರೇಶಿ**

ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಯ ಐದು ಪಾಲಿಕೆಗಳೂ ಸೇರಿದಂತೆ ಹಲವು ಸ್ಥಳೀಯ ಸಂಸ್ಥೆಗಳ ಚುನಾವಣೆ ಕುರಿತು ಸಾಕಷ್ಟು ಚರ್ಚೆ ನಡೆಯುತ್ತಿದೆ. ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಜಿಬಿಎ ವ್ಯಾಪ್ತಿಯ ಐದು ಪಾಲಿಕೆಗಳ ಚುನಾವಣೆಗೆ ಮುಹೂರ್ತ ನಿಗದಿಯಾಗಿದೆ. ವಿದ್ಯುನ್ಮಾನ ಮತಯಂತ್ರದ (ಇವಿಎಂ) ಬದಲು ಮತಪತ್ರಗಳನ್ನು (ಬ್ಯಾಲೆಟ್ ಪೇಪರ್) ಬಳಸಿ ಚುನಾವಣೆ ನಡೆಸುವುದಾಗಿ ರಾಜ್ಯ ಚುನಾವಣಾ ಆಯೋಗ ಘೋಷಿಸಿದೆ. ಇನ್ನೊಂದೆಡೆ ತಾಲ್ಲೂಕು, ಜಿಲ್ಲಾ ಪಂಚಾಯಿತಿಗಳ ಚುನಾಯಿತ ಪ್ರತಿನಿಧಿಗಳ ಆಡಳಿತದ ಅವಧಿ ಮುಗಿದು ಐದು ವರ್ಷಗಳಾದರೂ ಚುನಾವಣೆ ನಡೆದಿಲ್ಲ. ಸರ್ಕಾರದ ವಿಳಂಬ ಧೋರಣೆ ವಿರುದ್ಧ ಆಯೋಗ ಕೋರ್ಟ್ ಮೆಟ್ಟಿಲೇರಿದೆ. ಸರ್ಕಾರ ಮೂರೂ ಸ್ತರಗಳಿಗೆ ಒಟ್ಟಿಗೆ ಚುನಾವಣೆ ನಡೆಸಲು ಚಿಂತಿಸುತ್ತಿದೆ. ಈ ಎಲ್ಲ ಬೆಳವಣಿಗೆಗಳ ಕುರಿತು ರಾಜ್ಯ ಚುನಾವಣಾ ಆಯುಕ್ತ ಜಿ.ಎಸ್.ಸಂಗ್ರೇಶಿ ಅವರ ಜತೆ 'ಪ್ರಜಾವಾಣಿ' ನಡೆಸಿದ ಮಾತುಕತೆಯ ಸಾರ ಇಲ್ಲಿದೆ



ಜಿ.ಎಸ್.ಸಂಗ್ರೇಶಿ

• ಚಂದ್ರಹಾಸ ಹಿರೇಮಳಲಿ

**ಪ್ರಜಾವಾಣಿ ಸಂದರ್ಶನ**

- **ಬಹಳಷ್ಟು ಬೇಡಿಕೆಗಳು, ಪ್ರಯೋಗಗಳ ತರುವಾಯ ಇವಿಎಂ ಜಾರಿಗೆ ತರಲಾಗಿದೆ. ಮತ ವ್ಯವಸ್ಥೆಯಲ್ಲಿ ಸುಧಾರಣೆ ತರಬೇಕಾದ ಆಯೋಗ, ಹಿಂದಕ್ಕೆ ಚಲಿಸಲು ಹೊರಟಿದೆಯಲ್ಲ?**

ಮತಪತ್ರ ಬಳಸಬಾರದು ಎಂದು ಯಾವ ಕಾನೂನು ಕೂಡ ಹೇಳಿಲ್ಲ. ಚುನಾವಣಾ ಆಯೋಗ ಸ್ವತಂತ್ರ ಆಯೋಗವಾಗಿದ್ದರೂ ಕಾಯ್ದೆಗಳ ಪ್ರಕಾರವೇ ಕಾರ್ಯನಿರ್ವಹಿಸುತ್ತದೆ. ಚುನಾವಣೆಗಳನ್ನು ನಡೆಸುತ್ತದೆ. ಯಾವುದೇ ಚುನಾವಣೆಗಳನ್ನು ಇವಿಎಂ ಅಥವಾ ಮತಪತ್ರ ಬಳಸಿ ಮಾಡಬಹುದು ಎಂದು ಚುನಾವಣಾ ನಿಯಮಗಳೇ ಹೇಳುತ್ತವೆ. ಅಂತಹ ನಿಯಮಗಳ ಅನ್ವಯವೇ ನಿರ್ಧಾರ ತೆಗೆದುಕೊಳ್ಳಲಾಗಿದೆ. ರಾಜ್ಯ ಸರ್ಕಾರ ಈಚೆಗೆ ಜಾರಿಗೆ ತಂದ ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಚುನಾವಣೆ) ಕಾಯ್ದೆ–2025ರಲ್ಲೂ ಚುನಾವಣೆಗಳನ್ನು ಮತಪತ್ರ ಬಳಸಿ ನಡೆಸಬಹುದು ಎಂಬ ಅಂಶವನ್ನು ನಿಯಮ 37, 57ರಲ್ಲಿ ಉಲ್ಲೇಖಿಸಲಾಗಿದೆ. ಈ ನಿಯಮಗಳ ಅನ್ವಯವೇ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ಐದು ಪಾಲಿಕೆಗಳಿಗೆ ಮತಪತ್ರ ಬಳಸಿ ಚುನಾವಣೆ ನಡೆಸಲು ನಿರ್ಧರಿಸಿದ್ದೇವೆ.

- **ಮತಪತ್ರ ಬಳಕೆ ಮತದಾನದ ಅವಧಿಯ ಹಿಗ್ಗುವಿಕೆಗೆ ಕಾರಣವಾಗುತ್ತದೆಯಲ್ಲ?**

ಬಿಬಿಎಂಪಿ ಚುನಾವಣೆ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆ ನಡೆದು ಎಷ್ಟು ವರ್ಷಗಳಾಗಿವೆ ಎನ್ನುವುದು ಎಲ್ಲರಿಗೂ ಗೊತ್ತಿರುವ ಸಂಗತಿ. ಪ್ರಜಾಪ್ರಭುತ್ವದಲ್ಲಿ ಅವಧಿ ಮುಗಿದ ನಂತರವೂ ನಡೆಯುವ ಚುನಾವಣೆ, ವಿವಿಧ ಹಂತಗಳ ಬಳಿಕ ಪ್ರಕಟವಾಗುವ ಫಲಿತಾಂಶಕ್ಕಾಗಿ ತಾಳ್ಮೆಯಿಂದ ಕಾಯುವ ಜನರು ಮತದಾನಕ್ಕಾಗಿ ಮೂರು, ನಾಲ್ಕು ಗಂಟೆ ಹೆಚ್ಚು ಅವಧಿ ತೆಗೆದುಕೊಂಡರೆ ಸಹಿಸುವುದಿಲ್ಲವೇ? ಮತಪತ್ರ ಬಳಕೆಯಲ್ಲೂ ತ್ವರಿತ ಮತದಾನಕ್ಕೆ ಅಗತ್ಯವಾದ ಕ್ರಮವನ್ನು ಆಯೋಗ ತೆಗೆದುಕೊಳ್ಳಲಿದೆ.

- **ಇವಿಎಂನಂತಹ ಆಧುನಿಕ ವಿಧಾನ ಅಳವಡಿಕೆಯ ನಂತರವೂ ನಗರ ಪ್ರದೇಶಗಳಲ್ಲಿ ಮತದಾನ ಪ್ರಮಾಣ ಕಡಿಮೆಯಾಗುತ್ತಿದೆ. ಮತಪತ್ರ ಬಳಕೆಯಿಂದ ಇನ್ನಷ್ಟು ಇಳಿಕೆ ಆಗುವುದಿಲ್ಲವೇ?**

ಮತಪತ್ರ ಅಥವಾ ಇವಿಎಂ ಬಳಕೆಗೂ ಮತದಾನ ಪ್ರಮಾಣದ ಇಳಿಕೆಗೂ ಸಂಬಂಧವಿಲ್ಲ. ರಾಷ್ಟ್ರಪತಿ, ಉಪರಾಷ್ಟ್ರಪತಿ ಚುನಾವಣೆ, ಸಹಕಾರ ಸಂಘಗಳ ಚುನಾವಣೆ ಸೇರಿದಂತೆ ಹಲವೆಡೆ ಇಂದಿಗೂ ಮತಪತ್ರ ಬಳಕೆಯೇ ಮುಂದುವರಿದಿದೆ. ಸುಮಾರು 6,000 ಗ್ರಾಮ ಪಂಚಾಯಿತಿಗಳಿಗೆ ನಡೆಸುವ ಚುನಾವಣೆಯಲ್ಲಿ ಇದುವರೆಗೂ ಮತಪತ್ರವನ್ನೇ ಬಳಸಲಾಗಿದೆ. 2.97 ಕೋಟಿ ಮತದಾರರು ಇದ್ದಾರೆ. ಅಲ್ಲಿ ಮತಪತ್ರ ಯಶಸ್ವಿಯಾಗಿ ಬಳಸಲಾಗಿದೆ. ಜಿಬಿಎ ವ್ಯಾಪ್ತಿಯಲ್ಲಿ 80ರಿಂದ 90 ಲಕ್ಷ ಮತದಾರರು ಇದ್ದಾರೆ. ಇಷ್ಟು ಮತದಾರರಿಗೆ ಮತಪತ್ರಗಳನ್ನು ಬಳಕೆ ಮಾಡುವುದರಲ್ಲಿ ಯಾವ ಸಮಸ್ಯೆಯೂ ಇಲ್ಲ. ಮತಪ್ರಮಾಣ ಹೆಚ್ಚಳಕ್ಕೆ ಜಾಗೃತಿ ಮೂಡಿಸುವ ಹಲವು ಕ್ರಮಗಳನ್ನು ಆಯೋಗ ಕೈಗೊಳ್ಳಲಿದೆ.

- **ಮತಪತ್ರ ಬಳಸಲು ಅಗತ್ಯವಾದ ಮತಪೆಟ್ಟಿಗೆ ಇವೆಯೇ?**

ಗ್ರೇಟರ್ ಬೆಂಗಳೂರು ವ್ಯಾಪ್ತಿಯ ಪಾಲಿಕೆಗಳಿಗೆ ಸಾಕಾಗುವಷ್ಟು ಮತಪೆಟ್ಟಿಗೆಗಳು ಇವೆ. 8 ಸಾವಿರಕ್ಕೂ ಹೆಚ್ಚು ಮತಪೆಟ್ಟಿಗೆಗಳು ಈಗಾಗಲೇ ಸಿದ್ಧ ಇವೆ. ಗ್ರಾಮ ಪಂಚಾಯಿತಿ, ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆ ನಡೆಸಲು ಇನ್ನಷ್ಟು ಮತಪೆಟ್ಟಿಗೆಗಳ ಅಗತ್ಯವಿದೆ. ಖರೀದಿಗಾಗಿ ಅಗತ್ಯ ಅನುದಾನ ನೀಡುವಂತೆ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲಾಗಿದೆ.

- **ಜಿಲ್ಲಾ, ತಾಲ್ಲೂಕು ಪಂಚಾಯಿತಿ ಚುನಾವಣೆ ಐದು ವರ್ಷ ವಿಳಂಬ ಏಕೆ?**

ರಾಜ್ಯದ ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿಗಳಿಗೆ 2016ರ ಏಪ್ರಿಲ್‌ನಲ್ಲಿ ಚುನಾವಣೆ ನಡೆದಿತ್ತು. ಅಂದು ಆಯ್ಕೆಯಾಗಿದ್ದ ಸದಸ್ಯರ ಅವಧಿ 2021ರ ಏಪ್ರಿಲ್ 27ರಂದು ಮುಕ್ತಾಯವಾಗಿತ್ತು. ಚುನಾವಣೆಗೆ ಸಿದ್ಧತೆ ನಡೆದಿರುವಾಗಲೇ ಕ್ಷೇತ್ರ ಪುನರ್ ವಿಂಗಡಣೆ ಮತ್ತು ಮೀಸಲಾತಿ ಅಧಿಕಾರವನ್ನು ಚುನಾವಣಾ ಆಯೋಗದಿಂದ ಹಿಂಪಡೆಯಲಾಗಿತ್ತು. ಕರ್ನಾಟಕ ಪಂಚಾಯತ್ ರಾಜ್ ಮತ್ತು ಗ್ರಾಮ ಸ್ವರಾಜ್ ಕಾಯ್ದೆಗೆ ತಿದ್ದುಪಡಿ ತಂದು 'ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗ'ಕ್ಕೆ ನೀಡಲಾಗಿತ್ತು. ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿಗಳ ಕ್ಷೇತ್ರ ಪುನರ್ ವಿಂಗಡಣೆ ಮತ್ತು ಮೀಸಲಾತಿ ವಿಳಂಬದ ವಿರುದ್ಧ ಹೈಕೋರ್ಟ್ ಮೊರೆ ಹೋಗಿದ್ದೇವೆ. ಕ್ಷೇತ್ರಗಳ ಪುನರ್ ವಿಂಗಡಣೆ ಮತ್ತು ಮೀಸಲಾತಿ ನಿಗದಿ ಪ್ರಕ್ರಿಯೆಯನ್ನು ಪೂರ್ಣಗೊಳಿಸುವುದಾಗಿ 2023ರ ಡಿಸೆಂಬರ್‌ನಲ್ಲೇ ರಾಜ್ಯ ಸರ್ಕಾರ ಹೈಕೋರ್ಟ್‌ಗೆ ಪ್ರಮಾಣ ಪತ್ರ ಸಲ್ಲಿಸಿತ್ತು. ನಂತರ ಕ್ಷೇತ್ರಗಳ ಪುನರ್‌ವಿಂಗಡಣೆ ಹಾಗೂ ಸದಸ್ಯರ ಸಂಖ್ಯೆ ನಿಗದಿಪಡಿಸಲು ಸರ್ಕಾರ ರಚಿಸಿದ್ದ ಆಯೋಗದ ಶಿಫಾರಸುಗಳನ್ನು ಅಂಗೀಕರಿಸಿದ್ದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಅಧಿಸೂಚನೆ ಹೊರಡಿಸಿತ್ತು. ಆದರೆ, ಮೀಸಲಾತಿ ನಿಗದಿಯನ್ನು ಇಲ್ಲಿಯವರೆಗೂ ಅಂತಿಮಗೊಳಿಸಿಲ್ಲ.

- **ಚುನಾವಣೆ ನಡೆಸುವ ಕುರಿತು ಆಯೋಗದ ಮುಂದಿನ ನಡೆ ಏನು?**

ವಿಳಂಬಕ್ಕೆ ಹೈಕೋರ್ಟ್ ಈಗಾಗಲೇ ರಾಜ್ಯ ಸರ್ಕಾರಕ್ಕೆ ದಂಡ ವಿಧಿಸಿದೆ. ಕೋರ್ಟ್‌ಗೆ ಅಫಿಡವಿಟ್ ಸಲ್ಲಿಸಿದ ಅವಧಿಯ ಒಳಗೆ ಚುನಾವಣೆ ನಡೆಸಲು ಸಹಕರಿಸಿಲ್ಲ ಎಂದು ಮತ್ತೊಂದು ನ್ಯಾಯಾಂಗ ನಿಂದನೆ ಪ್ರಕರಣವನ್ನು ದಾಖಲಿಸಿದ್ದೇವೆ. ಕೋರ್ಟ್ ಇದೇ ಜನವರಿ 30ರಂದು ಸಮಯ ನಿಗದಿ ಮಾಡಿದೆ. ಅಷ್ಟರ ಒಳಗೆ ಮತಕ್ಷೇತ್ರಗಳ ವಿವರ, ಮೀಸಲಾತಿ ಪಟ್ಟಿ ತಲುಪುವ ನಿರೀಕ್ಷೆ ಇದೆ. ಅವಧಿ ಮುಕ್ತಾಯಗೊಂಡ ಸ್ಥಳೀಯ ಸಂಸ್ಥೆಗಳಿಗೆ ರಾಜ್ಯ ಸರ್ಕಾರ ಕ್ಷೇತ್ರಗಳ ಪಟ್ಟಿ ಹಾಗೂ ಮೀಸಲಾತಿ ಅಧಿಸೂಚನೆ ಹೊರಡಿಸದೇ ಇದ್ದರೆ, ಹಿಂದಿನ ಚುನಾವಣೆಯಲ್ಲಿ ನಿಗದಿ ಮಾಡಲಾಗಿದ್ದ ಕ್ಷೇತ್ರ ವಿಂಗಡಣೆ ಹಾಗೂ ಮೀಸಲಾತಿ ಅನ್ವಯವೇ ಚುನಾವಣೆ ನಡೆಸಬಹುದು ಎಂದು ಸುಪ್ರೀಂ ಕೋರ್ಟ್ ಆದೇಶವಿದೆ. ಜ.30ರ ನಂತರ ಈ ಕುರಿತು ನಿರ್ಧಾರ ತೆಗೆದುಕೊಳ್ಳಲಾಗುವುದು.

- **ಎಷ್ಟು ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಳಂಬವಾಗಿದೆ?**

ಮೈಸೂರು, ತುಮಕೂರು, ಶಿವಮೊಗ್ಗ, ದಾವಣಗೆರೆ, ಮಂಗಳೂರು ಸೇರಿ ಐದು ಮಹಾನಗರ ಪಾಲಿಕೆಗಳು, 192 ಇತರೆ ನಗರ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಬೇಕಿದೆ. ಹೊಸ ಪಟ್ಟಣ ಪಂಚಾಯಿತಿಗಳ ಘೋಷಣೆ, ಪುರಸಭೆ, ನಗರಸಭೆಗಳಾಗಿ ಮೇಲ್ದರ್ಜೆಗೆ ಏರಿಕೆ ಮಾಡಿದಾಗ ನಗರಗಳ ಸೆರಗಿನ ಹಲವು ಪಂಚಾಯಿತಿಗಳು ವಿಲೀನವಾಗುತ್ತವೆ. ಅವುಗಳನ್ನು ಸೇರಿಸಿ, ಕೆಲವನ್ನು ಕೈಬಿಟ್ಟು ಆಯಾ ಸ್ಥಳೀಯ ಸಂಸ್ಥೆಗಳ ಕ್ಷೇತ್ರಗಳನ್ನು ಮರುವಿಂಗಡಣೆ ಮಾಡಬೇಕು. ಇಂತಹ ಕಾರ್ಯಗಳಲ್ಲಿ ವಿಳಂಬವಾಗುತ್ತಿದೆ. ಅಧಿಕಾರಿಗಳು, ಸರ್ಕಾರದ ಇಚ್ಛಾಶಕ್ತಿಯ ಕೊರತೆಯೂ ಇದಕ್ಕೆ ಕಾರಣ ಇರಬಹುದು. ಎರಡು ತಿಂಗಳಲ್ಲಿ ಶೇ 90ರಷ್ಟು ಗ್ರಾಮ ಪಂಚಾಯಿತಿಗಳ ಅವಧಿ ಮುಗಿಯುತ್ತದೆ. ತಾಲ್ಲೂಕು, ಜಿಲ್ಲಾ ಪಂಚಾಯಿತಿಗಳನ್ನು ಪರಿಗಣಿಸಿ ಮೂರೂ ಸ್ತರಗಳ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಬೇಕಿದೆ.

### ಎಲ್ಲ ಮತಗಟ್ಟೆಗಳಿಗೂ 'ವೆಬ್ ಕಾಸ್ಟಿಂಗ್'

ಮೊದಲೆಲ್ಲ ಸೂಕ್ಷ್ಮ ಮತಗಟ್ಟೆಗಳಲ್ಲಿ ಹೆಚ್ಚಿನ ನಿಗಾ ವಹಿಸಲಾಗುತ್ತಿತ್ತು. ಈ ಬಾರಿ ಪ್ರತಿ ಮತಗಟ್ಟೆಯಲ್ಲೂ ಸಿ.ಸಿ.ಟಿ.ವಿ. ಕ್ಯಾಮೆರಾ ವೆಬ್‌ಕಾಸ್ಟಿಂಗ್ ಕಣ್ಗಾವಲು ಇರಲಿದೆ ಎಂದು ರಾಜ್ಯ ಚುನಾವಣಾ ಆಯುಕ್ತ ಸಂಗ್ರೇಶಿ ಹೇಳಿದರು.

ಹಿಂದೆಲ್ಲ ಮತಪೆಟ್ಟಿಗೆಗಳನ್ನೇ ಹೊತ್ತೊಯ್ದ ಪ್ರಕರಣಗಳು ನಡೆದಿವೆಯಲ್ಲ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, 'ಹೊತ್ತುಕೊಂಡು ಹೋಗುವವರಿಗೆ ಮತ ಪೆಟ್ಟಿಗೆ, ಮತಯಂತ್ರ ಅನ್ನುವ ವ್ಯತ್ಯಾಸ ಇರುವುದಿಲ್ಲ. ಅಂತಹ ಪ್ರಕರಣಗಳಿಗೆ ಅವಕಾಶ ಇಲ್ಲದಂತೆ ಜನರು, ಪಕ್ಷಗಳು, ಪೊಲೀಸರ ಸಹಕಾರ ಪಡೆದು ನಿರ್ವಹಣೆ ಮಾಡುವಷ್ಟು ಆಯೋಗ ಸಮರ್ಥವಾಗಿದೆ. ಕಟ್ಟುನಿಟ್ಟಿನ, ಪಾರದರ್ಶಕ ಚುನಾವಣೆಗೆ ಅಗತ್ಯ ಇರುವಷ್ಟು ಸಿಬ್ಬಂದಿ, ಪೊಲೀಸರನ್ನು ಬಳಕೆ ಮಾಡಲಾಗುತ್ತದೆ. ಮತಪತ್ರ ನಕಲಿಗೂ ಅವಕಾಶ ನೀಡುವುದಿಲ್ಲ. ಹಲವು ಕಠಿಣ ಕ್ರಮಗಳನ್ನು ಅಳವಡಿಸಲಾಗುತ್ತದೆ' ಎಂದರು.



- **ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಮತಪತ್ರ ಬಳಸುವಂತೆ ರಾಜ್ಯ ಸರ್ಕಾರದ ಒತ್ತಡವಿದೆಯಾ?**

ಖಂಡಿತಾ ಯಾರದೇ ಒತ್ತಡವಿಲ್ಲ. ಚುನಾವಣಾ ಆಯೋಗ ರಾಜ್ಯ ಸರ್ಕಾರದ ಅಧೀನ ಸಂಸ್ಥೆಯಲ್ಲ. ಸಾಂವಿಧಾನಿಕ ಸಂಸ್ಥೆ. ರಾಜಕೀಯ ಪಕ್ಷಗಳು ಚುನಾವಣೆಗೆ ಸಂಬಂಧಿಸಿದ ಹಲವು ವಿಷಯಗಳಲ್ಲಿ ಆಯೋಗಕ್ಕೆ ಮನವಿ ಮಾಡುತ್ತವೆ. ಮತಪತ್ರ ಬಳಸುವಂತೆ ಕೆಲ ಪಕ್ಷಗಳು, ಇವಿಎಂ ಬಳಕೆ ಕುರಿತು ಕೆಲ ಪಕ್ಷಗಳ ಪ್ರತಿನಿಧಿಗಳು ಕಚೇರಿಗೆ ಬಂದು ಮನವಿ ಮಾಡಿದ್ದಾರೆ. ಯಾರೇ ಮನವಿ ಮಾಡಿದರೂ ನಿಯಮಗಳಲ್ಲಿರುವ ಅವಕಾಶದಂತೆ ಆಯೋಗ ಕ್ರಮ ಕೈಗೊಳ್ಳುತ್ತದೆ. ಇವಿಎಂ, ಮತಪತ್ರಗಳ ವಿಚಾರದಲ್ಲೂ ಕೂಲಂಕಷ ಪರಿಶೀಲನೆಯ ಬಳಿಕ ಸ್ವತಂತ್ರ ನಿರ್ಧಾರ ತೆಗೆದುಕೊಳ್ಳಲಾಗಿದೆ. ರಾಜ್ಯದ ಸ್ಥಳೀಯ ಸಂಸ್ಥೆಗಳಲ್ಲಿ ಅತ್ಯಂತ ದೊಡ್ಡ ಚುನಾವಣೆ ಗ್ರಾಮ ಪಂಚಾಯಿತಿಗಳ ಚುನಾವಣೆ. 2.97 ಕೋಟಿ ಮತದಾರರು ಭಾಗವಹಿಸುವ ಚುನಾವಣೆಗೆ ಮತಪತ್ರ ಬಳಕೆ ಮಾಡುತ್ತಿದ್ದೇವೆ. ಹಾಗಾಗಿ, ಇತರ ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಮತಪತ್ರ ಬಳಕೆ ಬಗ್ಗೆ ವಿರೋಧ ವ್ಯಕ್ತ ಮಾಡುವುದು, ವಿವಾದ ಮಾಡುವುದು ಸರಿಯಲ್ಲ. ಇಂತಹ ವಿಚಾರಗಳಲ್ಲಿ ಒತ್ತಡಗಳಿಗೆ ಆಯೋಗ ಮಣಿಯುವುದೂ ಇಲ್ಲ.

## ❖ ವೇತನ ಪರಿಷ್ಕರಣೆಗೆ ಕೇಂದ್ರ ಒಪ್ಪಿಗೆ

**ಸಂದರ್ಭ: ಸರ್ಕಾರಿ ಸ್ವಾಮ್ಯದ ಸಾಮಾನ್ಯ ವಿಮಾ ಕಂಪನಿಗಳು ಮತ್ತು ರಾಷ್ಟ್ರೀಯ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕ್‌ನ (ನಬಾರ್ಡ್) ಉದ್ಯೋಗಿಗಳ ವೇತನ ಪರಿಷ್ಕರಣೆಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಭಾರತೀಯ ರಿಸರ್ವ್ ಬ್ಯಾಂಕ್ ಮತ್ತು ನಬಾರ್ಡ್‌ನ ನಿವೃತ್ತ ನೌಕರರ ಪಿಂಚಣಿ ಸಹ ಪರಿಷ್ಕರಣೆ ಮಾಡಲಾಗಿದೆ.**

- ಈ ಪರಿಷ್ಕರಣೆಯಿಂದ 46,322 ಉದ್ಯೋಗಿಗಳು, 23,570 ಪಿಂಚಣಿದಾರರು ಮತ್ತು 23,260 ಕೌಟುಂಬಿಕ ಪಿಂಚಣಿದಾರರಿಗೆ ವೇತನ ಪರಿಷ್ಕರಣೆಯ ಪ್ರಯೋಜನ ದೊರೆಯಲಿದೆ ಎಂದು ಕೇಂದ್ರ ಹಣಕಾಸು ಸಚಿವಾಲಯವು ಶುಕ್ರವಾರ ತಿಳಿಸಿದೆ.
- ಸರ್ಕಾರಿ ಸ್ವಾಮ್ಯದ ವಿಮಾ ಕಂಪನಿಗಳ ಉದ್ಯೋಗಿಗಳಿಗೆ ಈ ಪರಿಷ್ಕರಣೆಯು 2022ರ ಆಗಸ್ಟ್ 1ರಿಂದ ಅನ್ವಯವಾಗಲಿದೆ.
- ನಬಾರ್ಡ್ ಸಿಬ್ಬಂದಿಗೆ 2022ರ ನ. 1ರಿಂದ ಅನ್ವಯ ಆಗಲಿದೆ.

## ❖ ಡಬ್ಲ್ಯುಎಚ್‌ಒದಿಂದ ಅಮೆರಿಕ ಹೊರಕ್ಕೆ

**ಸಂದರ್ಭ: ವಿಶ್ವ ಆರೋಗ್ಯ ಸಂಸ್ಥೆಯಿಂದ(ಡಬ್ಲ್ಯುಎಚ್‌ಒ) ಹೊರಬರುವ ಪ್ರಕ್ರಿಯೆಯನ್ನು ಅಮೆರಿಕ ಪೂರ್ಣಗೊಳಿಸಿದೆ ಎಂದು ಅಧಿಕಾರಿಗಳು ಗುರುವಾರ ಹೇಳಿದ್ದಾರೆ.**

- ಡೊನಾಲ್ಡ್ ಟ್ರಂಪ್ ಅವರು ಕಳೆದ ವರ್ಷ ಅಮೆರಿಕದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡವೇಳೆ, 'ಅಮೆರಿಕವು ವಿಶ್ವ ಆರೋಗ್ಯಸಂಸ್ಥೆಯೊಂದಿಗೆ ಹೊಂದಿರುವ 78 ವರ್ಷಗಳ ನಂಟನ್ನು ಕೊನೆಗೊಳಿಸಲಿದೆ' ಎಂದು ಘೋಷಿಸಿದ್ದರು. ಅದು, ಈಗ ಕಾರ್ಯಗತಗೊಂಡಂತಾಗಿದೆ.
- ಸಂಸ್ಥೆಗೆ ಅಮೆರಿಕ ತನ್ನ ಪಾಲಿನ ವಂತಿಗೆಯನ್ನು ಬಾಕಿ ಉಳಿಸಿಕೊಂಡಿದೆ. ಈಮೊತ್ತ 13 ಕೋಟಿಡಾಲರ್‌ಗೂ (ಅಂದಾಜು ₹1,200 ಕೋಟಿ) ಹೆಚ್ಚು ಎಂದುಡಬ್ಲ್ಯುಎಚ್‌ಒಹೇಳಿದೆ.
- 'ಈ ಬೆಳವಣಿಗೆ ಹಲವು ಸಮಸ್ಯೆಗಳಿಗೆ ಕಾರಣವಾಗಲಿದೆ.ವಿವಿಧ ದೇಶಗಳಲ್ಲಿ ಕಂಡುಬರುವ ಸೋಂಕು/ರೋಗಗಳ ಕುರಿತು ಅಧ್ಯಯನ ಕೈಗೊಳ್ಳಲು, ಔಷಧಿ/ಲಸಿಕೆ ಅಭಿವೃದ್ಧಿಪಡಿಸುವುದಕ್ಕೆ ಅಮೆರಿಕದ ವಿಜ್ಞಾನಿಗಳಿಗೆ ಹಾಗೂ ಔಷಧ ಕಂಪನಿಗಳಿಗೆ ಕಷ್ಟವಾಗಲಿದೆ' ಎಂದುಜಾರ್ಜ್‌ಟೌನ್ ವಿಶ್ವವಿದ್ಯಾಲಯದ ಸಾರ್ವಜನಿಕ ಆರೋಗ್ಯಕಾನೂನು ತಜ್ಞ ಲಾರೆನ್ಸ್ ಗಾಸ್ಟಿನ್ ಹೇಳಿದ್ದಾರೆ.

## ❖ ವೆನೆಜುವೆಲಾ: ತೈಲ ಮಸೂದೆ ಚರ್ಚೆ

**ಸಂದರ್ಭ: ತೈಲದ ಮೇಲೆ ರಾಷ್ಟ್ರೀಯ ಹಿಡಿತ ಸಡಿಲಿಸುವ ಮಸೂದೆಯ ಕುರಿತ ಚರ್ಚೆಯನ್ನು ವೆನೆಜುವೆಲಾ ಗುರುವಾರ ಆರಂಭಿಸಿತು.**

- ಸಮಾಜವಾದಿ ನಾಯಕ ಹ್ಯೂಗೋ ಚಾವೆಜ್ ಅವರು 2007ರಲ್ಲಿ ತೈಲೋದ್ಯಮವನ್ನು ರಾಷ್ಟ್ರೀಕರಣಗೊಳಿಸಿದ ನಂತರ ಮೊದಲ ಬಾರಿಗೆ ಈ ಕುರಿತ ಚರ್ಚೆನಡೆದಿದೆ.
- ಈ ಮಸೂದೆಯು ತೈಲ ಉದ್ಯಮದಲ್ಲಿ ಖಾಸಗಿ ಕಂಪನಿಗಳಿಗೆ ಹೂಡಿಕೆ ಮಾಡಲು ಮತ್ತು ಹೂಡಿಕೆ ವಿವಾದಗಳಿಗೆ ಅಂತರರಾಷ್ಟ್ರೀಯ ಮಧ್ಯಸ್ಥಿಕೆಯನ್ನು ಸ್ಥಾಪಿಸಲು ಹೊಸ ಅವಕಾಶಗಳನ್ನು ಸೃಷ್ಟಿಸಲಿದೆ.
- ವೆನೆಜುವೆಲಾದ ಅಧ್ಯಕ್ಷರಾಗಿದ್ದ ನಿಕೋಲಸ್ ಮಡೂರೊ ಅವರನ್ನು ಈ ತಿಂಗಳ ಆರಂಭದಲ್ಲಿ ಟ್ರಂಪ್ ಆಡಳಿತವು ಸೆರೆ ಹಿಡಿದಿತ್ತು.

Dr Rajkumar IAS/KAS Academy

## ❖ ಆಂಧ್ರಪ್ರದೇಶ ಹೈಕೋರ್ಟ್ ಆದೇಶ ಎತ್ತಿ ಹಿಡಿದ ಸುಪ್ರೀಂ ಕೋರ್ಟ್: ಮತಾಂತರ: ಎಸ್‌ಸಿ ಸ್ಥಾನಮಾನ ನಷ್ಟ

**ಸಂದರ್ಭ: ಪರಿಶಿಷ್ಟ ಜಾತಿಗೆ (ಎಸ್‌ಸಿ) ಸೇರಿದ ವ್ಯಕ್ತಿಯು ಹಿಂದೂ, ಬೌದ್ಧ ಅಥವಾ ಸಿಖ್ ಧರ್ಮ ಹೊರತುಪಡಿಸಿ ಇತರ ಧರ್ಮಗಳಿಗೆ ಮತಾಂತರಗೊಂಡಲ್ಲಿ ಆತ/ಆಕೆಯ ಎಸ್‌ಸಿ ಸ್ಥಾನಮಾನ ನಷ್ಟವಾಗಲಿದೆ ಎಂದು ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದೆ.**

- ಹಿಂದೂ, ಸಿಖ್ ಅಥವಾ ಬೌದ್ಧ ಧರ್ಮಗಳನ್ನು ಹೊರತುಪಡಿಸಿ ಇತರ ಧರ್ಮಗಳಲ್ಲಿ ಶ್ರದ್ಧೆ-ನಂಬಿಕೆ ಹೊಂದಿರುವುದಾಗಿ ಘೋಷಿಸಿಕೊಳ್ಳುವ ವ್ಯಕ್ತಿಯು ಪರಿಶಿಷ್ಟ ಜಾತಿಗೆ (ಎಸ್‌ಸಿ) ಸೇರಿದವರು ಎಂದು ಪರಿಭಾವಿಸು ವಂತಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿದೆ.
- ಪರಿಶಿಷ್ಟ ಪಂಗಡದವರ (ಎಸ್‌ಟಿ) ಮತಾಂತರಕ್ಕೆ ಸಂಬಂಧಪಟ್ಟಂತೆ ಈ ಆದೇಶವು ಅನ್ವಯಿಸದು. ಏಕೆಂದರೆ, ಎಸ್‌ಟಿ ಸ್ಥಾನಮಾನವು ಧರ್ಮ ಆಧಾರಿತ ವಾಗಿಲ್ಲ. ಈ ಪಂಗಡಕ್ಕೆ ಸೇರಿದವರು ಅನುಸರಿಸುವ ಸಂಪ್ರದಾಯ, ಜೀವನ ಪದ್ಧತಿ ಮತ್ತು ಸಂಬಂಧಿಸಿದ ಬುಡಕಟ್ಟು ಗುಂಪು ಈ ಸಮುದಾಯವನ್ನು ಹೇಗೆ ಸ್ವೀಕರಿಸುತ್ತದೆ ಎಂಬುದರ ಮೇಲೆ ಎಸ್‌ಟಿ ಸ್ಥಾನಮಾನ ನಿರ್ಧಾರವಾಗುತ್ತದೆ ಎಂದೂ ನ್ಯಾಯಪೀಠ ಸ್ಪಷ್ಟಪಡಿಸಿದೆ.
- 'ಪರಿಶಿಷ್ಟ ಜಾತಿಗೆ ಸೇರಿದ ವ್ಯಕ್ತಿಯು ಇತರ ಧರ್ಮಕ್ಕೆ ಮತಾಂತರಗೊಂಡಾಗ ಆ ಕ್ಷಣವೇ ಹಾಗೂ ಸಂಪೂರ್ಣವಾಗಿ ಆತ/ಆಕೆ ಎಸ್‌ಸಿ ಸ್ಥಾನಮಾನವನ್ನು ಕಳೆದುಕೊಳ್ಳುವರು' ಎಂಬ ಆಂಧ್ರ ಪ್ರದೇಶ ಹೈಕೋರ್ಟ್ ಆದೇಶವನ್ನು ಎತ್ತಿ ಹಿಡಿದು ತೀರ್ಪು ನೀಡಿದ ವೇಳೆ ಸುಪ್ರೀಂ ಕೋರ್ಟ್ ಈ ಮಾತು ಹೇಳಿದೆ.
- 'ಯಾವುದೇ ವ್ಯಕ್ತಿಯು ಕ್ರೈಸ್ತ ಧರ್ಮ ಸ್ವೀಕರಿಸಿ, ಆ ಧರ್ಮದಲ್ಲಿ ಶ್ರದ್ಧೆ ಹೊಂದಿದ್ದಾಗಿ ಘೋಷಿಸಿ ಹಾಗೂ ಅದನ್ನು ಪಾಲನೆ ಮಾಡುವುದನ್ನು ಆರಂಭಿಸಿದ ಬಳಿಕ ಆ ವ್ಯಕ್ತಿಯು ಪರಿಶಿಷ್ಟ ಜಾತಿ ಸಮುದಾಯಕ್ಕೆ ಸೇರಿದವರು ಎಂಬುದಾಗಿ ಪರಿಗಣಿಸಲಾಗದು' ಎಂದು ಆಂಧ್ರ ಪ್ರದೇಶ ಹೈಕೋರ್ಟ್ ಕಳೆದ ವರ್ಷ ಏಪ್ರಿಲ್ 30ರಂದು ಆದೇಶಿಸಿತ್ತು.
- 'ಜಾತಿ ವ್ಯವಸ್ಥೆ ಕ್ರೈಸ್ತ ಧರ್ಮಕ್ಕೆ ವಿರುದ್ಧವಾದುದು. ಹೀಗಾಗಿ, ಕ್ರೈಸ್ತ ಧರ್ಮಕ್ಕೆ ಮತಾಂತರಗೊಂಡ ವ್ಯಕ್ತಿಯು 'ಎಸ್‌ಸಿ, ಎಸ್‌ಟಿ ವಿರುದ್ಧ ದೌರ್ಜನ್ಯ ತಡೆ ಕಾಯ್ದೆ'ಯ ಅವಕಾಶಗಳಡಿ ಪರಿಹಾರ ಕೇಳುವುದನ್ನು ನಿರ್ಬಂಧಿಸಲಾಗಿದೆ' ಎಂದು ಹೈಕೋರ್ಟ್ ಹೇಳಿತ್ತು.
- ಈ ಆದೇಶ ಪ್ರಶ್ನಿಸಿ, ಪಾದ್ರಿ ಚಿಂತಾಡ ಆನಂದ ಅವರು ಸಲ್ಲಿಸಿದ್ದ ಮೇಲ್ಮನವಿಯ ವಿಚಾರಣೆಯನ್ನು ನ್ಯಾಯಮೂರ್ತಿಗಳಾದ ಪ್ರಶಾಂತ ಕುಮಾರ್ ಮಿಶ್ರಾ, ಎನ್.ವಿ.ಅಂಜಾರಿಯಾ ಹಾಗೂ ಮನಮೋಹನ್ ಅವರು ಇದ್ದ ಪೀಠ ನಡೆಸಿತು.
- ಚಿಂತಾಡ ಆನಂದ ಅವರ ಮೇಲ್ಮನವಿಯನ್ನು ವಜಾಗೊಳಿಸುವ ಜೊತೆಗೆ, ಎಸ್‌ಸಿ, ಎಸ್‌ಟಿ ವಿರುದ್ಧ ದೌರ್ಜನ್ಯ ತಡೆ ಕಾಯ್ದೆಯ ಅವಕಾಶಗಳಡಿ ವ್ಯಕ್ತಿಯೊಬ್ಬರ ವಿರುದ್ಧ ಹೊರಿಸಿದ್ದ ಆರೋಪಗಳನ್ನು ನ್ಯಾಯಪೀಠ ರದ್ದು ಮಾಡಿದೆ.
- ಈ ಪ್ರಕರಣದಲ್ಲಿ ಮೇಲ್ಮನವಿದಾರ ಕ್ರೈಸ್ತ ಧರ್ಮದಿಂದ ಪುನಃ ತನ್ನ ಮೂಲ ಧರ್ಮಕ್ಕೆ ಮತಾಂತರಗೊಂಡಿಲ್ಲ ಅಥವಾ ಆತ ಸಮುದಾಯಕ್ಕೆ ಮರಳಿರುವುದಾಗಿ ಮಾದಿಗ ಸಮುದಾಯ ಒಪ್ಪಿಕೊಂಡಿಲ್ಲ ಎಂಬುದನ್ನು ಪೀಠ ಗಮನಿಸಿದೆ.
- ಮೇಲ್ಮನವಿದಾರ ಕ್ರೈಸ್ತ ಧರ್ಮದಲ್ಲಿ ಶ್ರದ್ಧೆ-ನಂಬಿಕೆ ಹೊಂದಿದ್ದು ಅದನ್ನು ಪಾಲನೆ ಮಾಡುತ್ತಿದ್ದಾರೆ. ದಶಕಕ್ಕೂ ಹೆಚ್ಚು ಕಾಲ ಪಾದ್ರಿಯಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಆಂಧ್ರಪ್ರದೇಶದ ಬಾಪಟ್ಲ ಜಿಲ್ಲೆಯ ಪಿಟ್ಟಲವಾನಿಪಾಲೆಂನಲ್ಲಿ ಪಾದ್ರಿಗಳ ಫೆಲೋಶಿಪ್‌ನ ಖಜಾಂಚಿಯೂ ಆಗಿದ್ದಾರೆ. ಗ್ರಾಮದ ಮನೆಗಳಲ್ಲಿ ಪ್ರತಿ ಭಾನುವಾರ ಪ್ರಾರ್ಥನಾ ಸಭೆಗಳನ್ನು ಆಯೋಜಿಸುತ್ತಿದ್ದಾರೆ. ಅವರ ಈ ಉದ್ಯೋಗ ಹಾಗೂ ವರ್ತನೆಯು ಮೇಲ್ಮನವಿದಾರ ಕ್ರೈಸ್ತ ಧರ್ಮದಲ್ಲಿ ನಂಬಿಕೆ ಹೊಂದಿರುವುದನ್ನು ಸಾರ್ವಜನಿಕವಾಗಿ ಘೋಷಿಸಿದಂತೆಯೆ ಆಗಿದೆ ಎಂದೂ ಪೀಠ ಹೇಳಿದೆ.

Dr. Rajkumar IAS/KAS Academy

## ❖ 'ಭಾರತಕ್ಕೆ ಹೊರ್ಮುಜ್ ಜಲಸಂಧಿ ಮುಕ್ತ'

**ಸಂದರ್ಭ: ಅಮೆರಿಕ ಹಾಗೂ ಮಿತ್ರದೇಶಗಳನ್ನು ಹೊರತುಪಡಿಸಿದ ರಾಷ್ಟ್ರಗಳ ಹಡಗುಗಳು ಹೊರ್ಮುಜ್ ಜಲಸಂಧಿ ಮೂಲಕ ಸಾಗಲು ಮುಕ್ತ ಅವಕಾಶ ಕಲ್ಪಿಸಲಾಗಿದೆ ಎಂದು ಅಂತರರಾಷ್ಟ್ರೀಯ ಕಡಲ ಸಂಘಟನೆಗಳ ಸದಸ್ಯರಾಷ್ಟ್ರಗಳಿಗೆ ಇರಾನ್ ತಿಳಿಸಿದೆ.**

- ಅಮೆರಿಕ ಹಾಗೂ ಮಿತ್ರದೇಶಗಳನ್ನು ಹೊರತುಪಡಿಸಿದ ರಾಷ್ಟ್ರಗಳ ಹಡಗುಗಳು ಹೊರ್ಮುಜ್ ಜಲಸಂಧಿ ಮೂಲಕ ಸಾಗಲು ಮುಕ್ತ ಅವಕಾಶ ಕಲ್ಪಿಸಲಾಗಿದೆ ಎಂದು ಅಂತರರಾಷ್ಟ್ರೀಯ ಕಡಲ ಸಂಘಟನೆಗಳ ಸದಸ್ಯರಾಷ್ಟ್ರಗಳಿಗೆ ಇರಾನ್ ತಿಳಿಸಿದೆ.
- ಇದರಿಂದ, ಭಾರತಕ್ಕೆ ಕಚ್ಚಾತೈಲ, ಅನಿಲ ಪೂರೈಕೆಯೂ ಕೆಲವೇ ದಿನಗಳಲ್ಲಿ ಸಹಜಸ್ಥಿತಿಗೆ ಬರುವ ನಿರೀಕ್ಷೆಯಿದೆ.
- ಇರಾನ್ ಅಧಿಕಾರಿಗಳ ಜೊತೆಗೆ ಸಂಪರ್ಕ ಸಾಧಿಸಿ, ತಮ್ಮ ಹಡಗುಗಳನ್ನು ಜಲಸಂಧಿ ಮೂಲಕ ಸಾಗುವಂತೆ ವ್ಯವಸ್ಥೆ ಮಾಡಬಹುದಾಗಿದೆ ಎಂದು ಅಧಿಕಾರಿಯೊಬ್ಬರ ಹೇಳಿಕೆಯನ್ನು ಉಲ್ಲೇಖಿಸಿ 'ಫೈನಾನ್ಸಿಯಲ್ ಟೈಮ್ಸ್' ವರದಿ ಮಾಡಿದೆ.
- ಇರಾನ್ ಜೊತೆಗೆ ಒಂದು ಬಗೆಯ ಒಪ್ಪಂದ ಮಾಡಿಕೊಂಡಿದ್ದು ತೈಲ ಸಾಗಣೆ ಸುಗಮವಾಗಲಿದೆ ರಾಜೇಶ್ ಕುಮಾರ್ ಸಿನ್ಹಾ ಬಂದರು ಸಚಿವಾಲಯ ವಿಶೇಷ ಕಾರ್ಯದರ್ಶಿ

## ❖ ದಯಾಮರಣ: ಹರೀಶ್ ಇನ್ನಿಲ್ಲ

**ಸಂದರ್ಭ: ದೇಶದಲ್ಲಿ ಪರೋಕ್ಷ ದಯಾಮರಣಕ್ಕೆ ಅವಕಾಶ ಪಡೆದುಕೊಂಡ ಮೊದಲ ವ್ಯಕ್ತಿ, 13 ವರ್ಷಗಳಿಂದ ಕೋಮಾ ದಲ್ಲಿದ್ದ ಗಾಜಿಯಾಬಾದ್‌ನ ಹರೀಶ್ ರಾಣಾ (31) ಮಂಗಳವಾರ ದೆಹಲಿಯ ಅಖಿಲ ಭಾರತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ (ಏಮ್ಸ್) ನಿಧನರಾದರು.**

- ದಶಕಕ್ಕೂ ಹೆಚ್ಚು ಕಾಲ ಹಾಸಿಗೆ ಯಲ್ಲಿಯೇ ಜೀವಚ್ಛವದಂತೆ ಇದ್ದ ಅವರ ದಯಾಮರಣಕ್ಕೆ ಸುಪ್ರೀಂ ಕೋರ್ಟ್ ಮಾರ್ಚ್ 11ರಂದು ಅನುಮತಿ ನೀಡಿತ್ತು ಸುಪ್ರೀಂಕೋರ್ಟ್ನ 2023ರ ಪರಿಷ್ಕೃತ ಮಾರ್ಗಸೂಚಿ ಅನ್ವಯ ದೇಶದಲ್ಲಿ ದಯಾಮರಣಕ್ಕೆ ಅವಕಾಶ ಪಡೆದ ಮೊದಲ ಪ್ರಕರಣ ಹರೀಶ್ ರಾಣಾ ಅವರದ್ದಾಗಿದೆ.
- ಪಂಜಾಬ್ ವಿಶ್ವವಿದ್ಯಾಲಯದಲ್ಲಿ ಸಿವಿಲ್ ಎಂಜಿನಿಯರಿಂಗ್ ಅಧ್ಯಯನ ಮಾಡುತ್ತಿದ್ದ ರಾಣಾ, 2013ರಲ್ಲಿ ವಸತಿ ನಿಲಯದ ನಾಲ್ಕನೇ ಮಹಡಿಯಿಂದ ಆಕಸ್ಮಿಕ ವಾಗಿ ಜಾರಿ ಬಿದ್ದು, ತಲೆಗೆ ತೀವ್ರ ಪೆಟ್ಟಾಗಿ ಕೋಮಾಕ್ಕೆ ಜಾರಿದ್ದರು.
- ಸುಪ್ರೀಂಕೋರ್ಟ್ ದಯಾ ಮರಣಕ್ಕೆ ಅವಕಾಶ ನೀಡಿದ ಬೆನ್ನಲ್ಲೇ, ಗಾಜಿಯಾಬಾದ್‌ನ ಮನೆ ಯಿಂದ ರಾಣಾ ಅವರನ್ನು ಮಾರ್ಚ್ 14ರಂದು ಏಮ್ಸ್‌ನ ಡಾ. ಬಿ.ಆರ್ ಅಂಬೇಡ್ಕರ್ ಇನ್‌ಸ್ಟಿಟ್ಯೂಟ್ ರೋಟರಿ ಕ್ಯಾನ್ಸರ್ ಆಸ್ಪತ್ರೆಯ ಉಪಶಾಮಕ ಆರೈಕೆ ಘಟಕಕ್ಕೆ ಸ್ಥಳಾಂತರಿಸಲಾಗಿತ್ತು.

## ❖ ಕೇಂದ್ರದ ಹಂಚಿಕೆ ₹24,819.48 ಕೋಟಿ ಬಳಸಲು ವಿಫಲ ಮಹಾಲೇಖಪಾಲರ ವರದಿ: ಜೆಜೆಎಂ: ರಾಜ್ಯಕ್ಕೆ ಸಿಕ್ಕಿದ್ದು ₹11,189 ಕೋಟಿ

**ಸಂದರ್ಭ: 'ಮನೆ ಮನೆಗೆ ಪೈಪ್ ಮೂಲಕ ಕುಡಿಯುವ ನೀರಿನ ಸಂಪರ್ಕ ಕಲ್ಪಿಸುವ ಜಲ ಜೀವನ್ ಮಿಷನ್ (ಜೆಜೆಎಂ) ನಿಧಿಯಡಿ ಕೇಂದ್ರ ದಿಂದ ಹಂಚಿಕೆಯಾದ ₹24,819.48 ಕೋಟಿಯಲ್ಲಿ ರಾಜ್ಯಕ್ಕೆ ಕೇವಲ ₹ 11,189 ಕೋಟಿ ಪಡೆಯಲಷ್ಟೆ ಸಾಧ್ಯವಾಗಿದೆ' ಎಂದು ಜಲ ಜೀವನ್ ಮಿಷನ್ ಅನುಷ್ಠಾನ ಕುರಿತ ಮಹಾಲೇಖಪಾಲರ ವರದಿ ಉಲ್ಲೇಖಿಸಿದೆ.**

Dr. Rajkumar IAS Academy

- '2019-20ರಿಂದ 2023-24 ರವರೆಗಿನ ಅವಧಿಯ ಕುರಿತ ಕಾರ್ಯ ನಿರ್ವಹಣಾ ವರದಿಯನ್ನು ವಿಧಾನಸಭೆಯಲ್ಲಿ ಮಂಗಳವಾರ ಮಂಡಿಸಲಾಯಿತು. ಟೆಂಡರ್ ವಿಳಂಬ, ಭೂಮಿ ಲಭ್ಯತೆಗೂ ಮೊದಲೇ ಕಾಮಗಾರಿ ವಹಿಸಿರುವುದು, ಭೂ ಮಂಜೂರಾತಿ ಪಡೆಯಲು ವಿಳಂಬ, ಡಿಪಿಆರ್‌ಗಳ ಕೊರತೆ ಮತ್ತಿತರ ನಾನಾ ಕಾರಣಗಳಿಗೆ ರಾಜ್ಯಕ್ಕೆ ಕೇಂದ್ರದಿಂದ ಅನುದಾನ ಪಡೆಯಲು ಸಾಧ್ಯ ಆಗಿಲ್ಲ. ರಾಜ್ಯ ಸರ್ಕಾರವು ಬಳಕೆ ಪ್ರಮಾಣಪತ್ರ ಮತ್ತು ಲೆಕ್ಕಪರಿಶೋಧಕ ವರದಿ ಸಲ್ಲಿಸಲು 3ರಿಂದ 9 ತಿಂಗಳವರೆಗೆ ವಿಳಂಬ ಆಗಿರುವುದು ಅನುದಾನ ಬಳಕೆ ಆಗದಿರಲು ಕಾರಣ' ಎಂದೂ ವರದಿ ಹೇಳಿದೆ.
- ಗ್ರಾಮೀಣ ಪ್ರದೇಶದ ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಉದ್ದೇಶ ಹೊಂದಿರುವ ಈ ಯೋಜನೆಯಲ್ಲಿ ಸಮುದಾಯಗಳ ಸಹಭಾಗಿತ್ವವೂ ಇದೆ ಸಮುದಾಯವೂ ಕೊಡುಗೆ ನೀಡಬೇಕು. ಆದರೆ, ರಾಜ್ಯದಲ್ಲಿ ಸಮುದಾಯದ ಕೊಡುಗೆ ಅತ್ಯಲ್ಪವಾಗಿದ್ದು, ನಿರೀಕ್ಷಿತ ₹1,594.90 ಕೋಟಿಯಲ್ಲಿ ಕೇವಲ ₹22.57 ಕೋಟಿ ಮಾತ್ರ ಸಂಗ್ರಹಿಸ ಲಾಗಿದೆ ಎಂದು ವರದಿ ಬೊಟ್ಟು ಮಾಡಿದೆ.
- 'ರಾಜ್ಯದ 533 ಗ್ರಾಮಗಳಲ್ಲಿ ಕ್ಷೇತ್ರ ತಪಾಸಣಾ ಕಿಟ್ ಗಳನ್ನು ಬಳಸುವ ಬಗ್ಗೆ, ಮಹಿಳೆಯರಿಗೆ ತರಬೇತಿ ನೀಡಿರಲಿಲ್ಲ ಕಲುಷಿತ ನೀರಿನ ಮಾದರಿಗಳ ಪರೀಕ್ಷೆಯನ್ನು 2023-24ರಲ್ಲಿ ಮಾತ್ರ ಮಾಡಲಾಗಿದೆ. ಅದೂ ಕೇವಲ ಶೇ 18ರಷ್ಟು 31 ಜಿಲ್ಲಾ ಮಟ್ಟದ ಮತ್ತು 48 ತಾಲ್ಲೂಕು ಮಟ್ಟದ ಪ್ರಯೋಗಾಲಯಗಳಲ್ಲಿ ನೀರಿನಲ್ಲಿ ಆರ್ಸೆನಿಕ್ ಮಟ್ಟ ಪರೀಕ್ಷೆ ಮಾಡುವ ವ್ಯವಸ್ಥೆ ಇಲ್ಲ. ಸೂಕ್ಷ್ಮ ಜೀವ ವೈಜ್ಞಾನಿಕ ನಿಯಾಂತಗಳನ್ನು ಪರೀಕ್ಷಿಸಲು 17 ಜಿಲ್ಲಾಮಟ್ಟದ ಮತ್ತು 4 ತಾಲ್ಲೂಕು ಮಟ್ಟದ ಪ್ರಯೋಗಾಲಯಗಳನ್ನು ಮಾತ್ರ ಸಜ್ಜುಗೊಳಿಸಲಾಗಿತ್ತು 2019-10ರಿಂದ 2023-24ರ ಅವಧಿಯಲ್ಲಿ ಗೊತ್ತುಪಡಿಸಿದ ರಾಜ್ಯದ ಪ್ರಯೋಗಾಲಯದಿಂದ ಒಂದೇ ಒಂದು ಮಾದರಿಯನ್ನು ಪರೀಕ್ಷಿಸಲು ಇಲಾಖೆ ವಿಫಲವಾಗಿತ್ತು' ಎಂದು ವರದಿಯಲ್ಲಿದೆ.
- ಪರಿಣಾಮ 'ಪ್ರಾಥಮಿಕ ಶಾಲೆಗೆ ಹೋಗುವ ವಿದ್ಯಾರ್ಥಿನಿಯರ ಶಾಲೆ ಬಿಡುವ ಪ್ರಮಾಣ ಕಡಿಮೆ ಮಾಡಲುಸುತ್ತು ಮಹಿಳೆಯರ ಹೊರೆಯನ್ನು ಕಡಿಮೆ ಮಾಡಲು ಈ ಯೋಜನೆ ಸಹಾಯ ಮಾಡಿದೆ. ಆದರೆ, ಉದ್ಯೋಗ ಮತ್ತು ಸಾರ್ವಜನಿಕ ಆರೋಗ್ಯದ ಮೇಲೆ ಅಷ್ಟೊಂದು ಪರಿಣಾಮ ಬೀರಿಲ್ಲ' ಎಂದೂ ವರದಿ ಅಭಿಪ್ರಾಯಪಟ್ಟಿದೆ.
- ಶಿಫಾರಸು ಜೆಜೆಎಂ ಅನುಷ್ಠಾನ ಮೇಲ್ವಿಚಾರಣೆಗೆ ರಚಿಸಲಾದ ಸಮಿತಿಗಳು ಸಂಪನ್ಮೂಲ ಬಳಕೆಯ ಸಮನ್ವಯ ಕಡೆಗೆ ರಾಜ್ಯ ಸರ್ಕಾರ ಗಮನಹರಿಸಬೇಕು, ಕಾಮಗಾರಿಗಳನ್ನು ಪೂರ್ಣಗೊಳಿಸುವಾಗ ಆಗುವ ವಿಳಂಬ ತಪ್ಪಿಸಲು ಭೂಮಿಯ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಬೇಕು. ಗುತ್ತಿಗೆದಾರರ ಟೆಂಡರ್ ಸಾಮರ್ಥ್ಯ ಪರಿಗಣಿಸಿದ ನಂತರ ಕಾಮಗಾರಿ ವಹಿಸಬೇಕು ಕೇಂದ್ರದಿಂದ ಬಿಡುಗಡೆಯಾದ ಹಣವನ್ನು ಪಡೆದುಕೊಳ್ಳಲು ಅಗತ್ಯ ಕ್ರಮ ತೆಗೆದುಕೊಳ್ಳಬೇಕು ನೀರಿನ ಗುಣಮಟ್ಟದ ಪರೀಕ್ಷೆಗೆ ಆದ್ಯತೆ ನೀಡಬೇಕು ತಪ್ಪಾದ ವರದಿ ಆನ್‌ಲೈನ್ ಪೋರ್ಟಲ್‌ನಲ್ಲಿ ಅಪ್ಲೋಡ್ ಆಗದಂತೆ ರಾಜ್ಯ ಸರ್ಕಾರ ಪರಿಶೀಲಿಸಬೇಕು ಎಂದೂ ವರದಿಯಲ್ಲಿ ಶಿಫಾರಸು ಮಾಡಲಾಗಿದೆ.

## ❖ ಶೇ 34ರಷ್ಟು ಮನೆಗೆ ಸಿಗದ ಸಂಪರ್ಕ

**ಸಂದರ್ಭ: ಈ ಯೋಜನೆಯ ಅವಧಿ 2024ರ ಮಾರ್ಚ್ 31ಕ್ಕೆ ಕೊನೆಗೊಂಡಿದೆ. ಆದರೆ, ಅದೇ ವರ್ಷದ ನವೆಂಬರ್‌ವರೆಗೆ 72.14 ಲಕ್ಷ ಮನೆಗಳ ಪೈಕಿ ಇನ್ನೂ 24.52 ಲಕ್ಷ ಮನೆಗಳಿಗೆ (ಶೇ 34) ನಲ್ಲಿಯ ಸಂಪರ್ಕ ಒದಗಿಸಿಲ್ಲ ಎಂದೂ ವರದಿ ಉಲ್ಲೇಖಿಸಿದೆ.**

- 'ಹಲವು ಕಡೆ ವಾಸಸ್ಥಳಗಳಲ್ಲಿ ಮನೆಗಳ ಸಂಖ್ಯೆ ಕಡಿಮೆ ಆಗಿರುವುದರಿಂದ ವೆಚ್ಚ ಹೆಚ್ಚಾಗುತ್ತದೆ ಎಂಬ ಕಾರಣಕ್ಕೆ ಕಾಮಗಾರಿಗಳನ್ನು ಕೈಬಿಡಲಾಗಿದೆ. ಕೆಲವು ಕಡೆ ಓವರ್ ಹೆಡ್ ಟ್ಯಾಂಕ್ (ಒಎಚ್ ಟಿ) ನಿರ್ಮಾಣಕ್ಕೆ ಭೂಮಿಯನ್ನು ಗುತ್ತಿಗೆದಾರರಿಗೆ ಹಸ್ತಾಂತರಿಸದ ಕಾರಣ ಕಾಮಗಾರಿ ಆರಂಭಿಸಲು ಸಾಧ್ಯ ಆಗಿಲ್ಲ.

- ಪಂಚಾಯತ್‌ರಾಜ್ ಇಲಾಖೆಯು 2024ರ ಮೇ ವೇಳೆಗೆ ತೆರೆದ ಬಾವಿಯನ್ನು ನಿರ್ಮಿಸಿ, ಕೊಳವೆಗಳನ್ನು ಹಾಕಲು ₹ 60.41 ಲಕ್ಷ ವೆಚ್ಚ ಮಾಡಿದ್ದರೂ ಕಾಮಗಾರಿ ಅರ್ಧದಲ್ಲಿಯೇ ಸ್ಥಗಿತಗೊಂಡಿದೆ ಹೀಗಾಗಿ, 435 ಮನೆಗಳಿಗೆ ನೀರು ಪೂರೈಸುವ ಉದ್ದೇಶ ಈಡೇರಿಲ್ಲ' ಎಂದು ವರದಿ ಹೇಳಿದೆ

## ❖ ಸಾಮಾಜಿಕ ಜಾಲತಾಣ ನಿರ್ಬಂಧಿಸಲು ಶಾಲೆಗಳಲ್ಲಿ ಜಾಗೃತಿ ಜತೆಗೆ ತರಬೇತಿ: ಡಿಜಿಟಲ್ ಸಾಧನ ಬಳಕೆಗೆ ಕರಡು ನೀತಿ ಸಿದ್ಧ

**ಸಂದರ್ಭ: ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ಅತಿಯಾದ ಬಳಕೆಯಿಂದ ಮಕ್ಕಳಲ್ಲಿ ಮಾನಸಿಕ ಅನಾರೋಗ್ಯ ಸಮಸ್ಯೆಗಳು ಹೆಚ್ಚುತ್ತಿರುವ ಕಾರಣ, ರಾಜ್ಯ ಸರ್ಕಾರವು ಮಕ್ಕಳ ಜವಾಬ್ದಾರಿಯುತ ಡಿಜಿಟಲ್ ಬಳಕೆಗೆ ಕರಡು ನೀತಿ ರೂಪಿಸಿದೆ.**

- ಡಿಜಿಟಲ್ ಸಾಧನಗಳ ಬಳಕೆ ಕುರಿತು ಜಾಗೃತಿ, ಶಿಕ್ಷಕರಿಗೆ ತರಬೇತಿ, ಡಿಜಿಟಲ್ ಕ್ಷೇಮ ಸಮಿತಿ ರಚನೆಯಂತಹ ಕ್ರಮಗಳನ್ನೂ ಸೂಚಿಸಲಾಗಿದೆ.
- ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ಕರ್ನಾಟಕ ರಾಜ್ಯ ಮಾನಸಿಕ ಆರೋಗ್ಯ ಪ್ರಾಧಿಕಾರ ಹಾಗೂ ನಿಮ್ಹಾನ್ಸ್ ತಜ್ಞರು ಪೋಷಕರ ಜತೆಗೆ ಸಮಾಲೋಚನೆ ನಡೆಸಿ, ಶಾಲಾ ಕಾಲೇಜು ವಿದ್ಯಾರ್ಥಿಗಳಿಗಾಗಿ ಕರಡು ನೀತಿ ರಚಿಸಿದ್ದಾರೆ. ಡಿಜಿಟಲ್ ಸಾಧನಗಳ ಬಳಕೆ ಮತ್ತು ಮಾನಸಿಕ ಅನಾರೋಗ್ಯ ಸಮಸ್ಯೆಗಳ ನಿರ್ವಹಣೆ ಬಗ್ಗೆ ಶಿಕ್ಷಣ ಸಂಸ್ಥೆಗಳು, ಶಿಕ್ಷಕರು ಹಾಗೂ ಪಾಲಕರು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಉಲ್ಲೇಖಿಸಲಾಗಿದೆ.
- 'ಮಾನಸಿಕ ಅನಾರೋಗ್ಯ ಸಮಸ್ಯೆಗಳು ಇತ್ತೀಚಿನ ವರ್ಷಗಳಲ್ಲಿ ಹೆಚ್ಚಳವಾಗುತ್ತಿವೆ. ಅತಿಯಾದ ಮತ್ತು ಅನಿಯಂತ್ರಿತ ತಂತ್ರಜ್ಞಾನ ಬಳಕೆಯು ಇದಕ್ಕೆ ಪ್ರಮುಖ ಕಾರಣವಾಗಿದೆ. ಅಧ್ಯಯನಗಳ ಪ್ರಕಾರ, ಶೇ 25ರಷ್ಟು ಹದಿಹರೆಯದವರು ಸಾಮಾಜಿಕ ಜಾಲತಾಣಗಳ ವ್ಯಸನಿಗಳಾಗಿದ್ದಾರೆ. ಅವರಲ್ಲಿ ಅನೇಕರು ಆತಂಕ, ಉದ್ವಿಗ್ನತೆ, ನಿದ್ರಾಹೀನತೆ ಹಾಗೂ ಏಕಾಗ್ರತೆ ಕೊರತೆಯಂತಹ ಸಮಸ್ಯೆ ಎದುರಿಸುತ್ತಿದ್ದಾರೆ ಆದ್ದರಿಂದ ಡಿಜಿಟಲ್ ಸಾಧನಗಳ ಅತಿಯಾದ ಬಳಕೆ ಮತ್ತು ಅವುಗಳಿಂದ ಉಂಟಾಗುವ ಮಾನಸಿಕ ಸಮಸ್ಯೆಗಳನ್ನು ಪ್ರಾರಂಭಿಕ ಹಂತದಲ್ಲಿಯೇ ಗುರುತಿಸಬೇಕಿದೆ. ಮಕ್ಕಳಲ್ಲಿ ಆರೋಗ್ಯಕರ ಮತ್ತು ಸಮತೋಲಿತ ತಂತ್ರಜ್ಞಾನ ಅಭ್ಯಾಸ ಉತ್ತೇಜಿಸಬೇಕಿದೆ. ಹಾಗಾಗಿ, ಶಿಕ್ಷಕರು ಮತ್ತು ಪೋಷಕರ ತರಬೇತಿ ಕಾರ್ಯಕ್ರಮ ತುರ್ತು ಅಗತ್ಯ' ಎಂದು ಕರಡು ನೀತಿಯಲ್ಲಿ ತಿಳಿಸಲಾಗಿದೆ.
- ಡಿಜಿಟಲ್ ಸಾಕ್ಷರತೆ ಶಾಲಾ ಪಠ್ಯಕ್ರಮದಲ್ಲಿ ಡಿಜಿಟಲ್ ಸಾಕ್ಷರತೆ ಅಳವಡಿಕೆ ಬಗ್ಗೆಯೂ ಸೂಚಿಸಲಾಗಿದೆ. ಸಕಾರಾತ್ಮಕ ಡಿಜಿಟಲ್ ಅಭ್ಯಾಸ, ಆನ್‌ಲೈನ್ ಶಿಷ್ಟಾಚಾರ, ಅಂತರ್ಜಾಲ ತಾಣಗಳ ಸುರಕ್ಷಿತ ಬಳಕೆಯ ಬಗ್ಗೆ, ವಯಸ್ಸಿಗೆ ಅನುಗುಣವಾಗಿ ತಿಳಿಸುವಿಕೆ, ವಿದ್ಯಾರ್ಥಿಗಳಲ್ಲಿನ ಆತಂಕ, ಒತ್ತಡ ಹಾಗೂ ಅಧ್ಯಯನ ಸಾಮರ್ಥ್ಯ ಕುಂಠಿತವಾಗುವ ಬಗ್ಗೆ ಜಾಗೃತಿ ಮೂಡಿಸುವಿಕೆಯಂತಹ ಕ್ರಮಗಳ ಬಗ್ಗೆ ಕರಡು ನೀತಿಯಲ್ಲಿ ಹೇಳಲಾಗಿದೆ.
- ಪ್ರತಿಯೊಂದು ಶಾಲೆಯೂ ಡಿಜಿಟಲ್ ಸಾಧನಗಳ ಬಳಕೆ ಬಗ್ಗೆ, ನೀತಿ ರೂಪಿಸಿ, ಜಾರಿಗೊಳಿಸಬೇಕೆಂದು ಸೂಚಿಸಲಾಗಿದೆ ಡಿಜಿಟಲ್ ಸಾಧನಗಳ ಬಳಕೆ ಮೇಲೆ ನಿಗಾ ಇಡುವ ಜತೆಗೆ, ಶಾಲಾ ಕೆಲಸದ ಹೊರತಾಗಿ ಡಿಜಿಟಲ್ ಸಾಧನಗಳ ಬಳಕೆಯ ಅವಧಿಯನ್ನು ದಿನಕ್ಕೆ ಒಂದು ಗಂಟೆಗೆ ನಿಗದಿಪಡಿಸಬೇಕು ಎಂದು ಹೇಳಲಾಗಿದೆ ವಿದ್ಯಾರ್ಥಿಗಳನ್ನು ವಾಟ್ಸ್‌ಆ್ಯಪ್ ನಂತಹ ಸಾಮಾಜಿಕ ಜಾಲತಾಣಗಳ ಮೂಲಕ ಸಂಪರ್ಕಿಸುವ ಬದಲು ಮೊದಲಿನಂತೆ ದಿನಚರಿ ವ್ಯವಸ್ಥೆ (ಡೈರಿ) ಮೂಲಕ ಸಂಪರ್ಕಿಸಬೇಕು ಎಂದು ತಿಳಿಸಲಾಗಿದೆ

## ❖ 'ಇವ ನಮ್ಮವ' ಮಸೂದೆ ಅಂಗೀಕಾರ

**ಸಂದರ್ಭ: ಮರ್ಯಾದೆಗೇಡು ಹತ್ಯೆಯಂತಹ ಅಮಾನವೀಯ ಕೃತ್ಯಗಳಿಗೆ ಕಡಿವಾಣ ಹಾಕುವ ಉದ್ದೇಶದ 'ಇವ ನಮ್ಮವ ಇವ ನಮ್ಮವ ಮಸೂದೆ'ಗೆ ಸುದೀರ್ಘ ಅವಧಿಯ ಚರ್ಚೆಯ ನಂತರ ವಿಧಾನ ಪರಿಷತ್ತು ಅಂಗೀಕಾರ ನೀಡಿತು.**


Dr. Rajkumar IAS Academy

- ಕಾನೂನು ಸಚಿವ ಎಚ್.ಕೆ.ಪಾಟೀಲ ಅವರು ಮಂಗಳವಾರ ಪರಿಷತ್ತಿನ ಕಲಾಪದಲ್ಲಿ 'ಕರ್ನಾಟಕ ವಿವಾಹದಲ್ಲಿ ಆಯ್ಕೆಯ ಸ್ವಾತಂತ್ರ್ಯ ಹಾಗೂ ಮರ್ಯಾದೆ ಮತ್ತು ಸಂಪ್ರದಾಯದ ಹೆಸರಿನಲ್ಲಿ ಅಪರಾಧಗಳ ಪ್ರತಿಬಂಧಕ ಮತ್ತು ನಿಷೇಧ (ಇವ ನಮ್ಮವ ಇವ ನಮ್ಮವ) ಮಸೂದೆ-2026' ಅನ್ನು ಮಂಡಿಸಿದರು.
- ಆಡಳಿತ ಮತ್ತು ವಿರೋಧ ಪಕ್ಷದ ಒಟ್ಟು 23 ಸದಸ್ಯರು ಮಸೂದೆಯಲ್ಲಿನ ಅಂಶಗಳ ಕುರಿತು 4 ಗಂಟೆ 25 ನಿಮಿಷ ಮಾತನಾಡಿ, ಮಸೂದೆಯನ್ನು ಸ್ವಾಗತಿಸಿದರು.
- ಹೆಣ್ಣುಮಕ್ಕಳ ಮದುವೆಯ ಕನಿಷ್ಠ ವಯಸ್ಸನ್ನು 18 ವರ್ಷದಿಂದ 21 ವರ್ಷಕ್ಕೆ ಹೆಚ್ಚಿಸಬೇಕು, ಈ ಮಸೂದೆಯ ನಿಯಮಗಳಂತೆ ವಿವಾಹವಾಗಲು ಇಚ್ಛಿಸುವ ಜೋಡಿಗಳಿಗೆ ಆಪ್ತ ಸಮಾಲೋಚನೆ ನೀಡುವ ವ್ಯವಸ್ಥೆಯನ್ನು ಮಾಡಬೇಕು, ಶಿಕ್ಷೆ ಪ್ರಮಾಣವನ್ನು ಐದು ವರ್ಷದಿಂದ ಜೀವಾವಧಿಗೆ ಹೆಚ್ಚಿಸಬೇಕು ಎಂಬ ಸಲಹೆ ಚರ್ಚೆಯ ವೇಳೆ ವ್ಯಕ್ತವಾಯಿತು.
- 'ನಾನೇ ಕ್ಷೌರ ಮಾಡಿಕೊಳ್ಳುತ್ತೇನೆ' 'ನಮ್ಮೂರಿನಲ್ಲಿ ನಮ್ಮವರಿಗೆ ಕ್ಷೌರಿಕ ಕ್ಷೌರ ಮಾಡುತ್ತಿರಲಿಲ್ಲ. ನಮ್ಮಪ್ಪ ಮನೆಯಲ್ಲೇ ಕ್ಷೌರ ಮಾಡುವ ಸಾಮಗ್ರಿ ಇಟ್ಟುಕೊಂಡಿದ್ದರು ಅಪ್ಪನೇ ನಮಗೆ ಕ್ಷೌರ ಮಾಡುತ್ತಿದ್ದರು ಕಾಲೇಜು ದಿನಗಳಲ್ಲಿ ಒಮ್ಮೆ ಕ್ಷೌರದ ಅಂಗಡಿಗೆ ಹೋಗಿದ್ದೆ ಜಾತಿ ಕಾರಣಕ್ಕೆ ಗದರಿಸಿ ಅಲ್ಲಿಂದ ಹೊರ ಕಳುಹಿಸಿದ್ದರು ಅಂದಿನಿಂದ ಇಲ್ಲಿಯವರೆಗೂ ನಾನೇ ಕ್ಷೌರ ಮಾಡಿಕೊಳ್ಳುತ್ತಿದ್ದೇನೆ, ಮರ್ಯಾದೆಗೇಡು ಹತ್ಯೆ ತಡೆಗೆ ಮಸೂದೆ ರೂಪಿಸುವ ಸರ್ಕಾರದ ನಿರ್ಧಾರ ಒಳ್ಳೆಯ ನಡೆ' ಎಂದು ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದರು.
- ಬಿಜೆಪಿಯ ಎಚ್ ವಿಶ್ವನಾಥ್, ಮಾಜಿ ಮುಖ್ಯಮಂತ್ರಿ ಸೇರಿದಂತೆ ಕೆಲವರು ಪೋಟೊ ಕಾಯ್ದೆಯಲ್ಲಿ ಸಿಲುಕಿಕೊಂಡಿದ್ದಾರೆ ಕಾಯ್ದೆಯನ್ನು ನಾವೇ ದುರ್ಬಲಗೊಳಿಸಿದ್ದೇವೆ ಅದೇ ರೀತಿ ಮರ್ಯಾದೆಗೇಡು ಹತ್ಯೆ ಕಾಯ್ದೆಯೂ ಆಗಬಾರದು. ಈ ಕಾಯ್ದೆಯನ್ನು ಒಳ್ಳೆಯ ಉದ್ದೇಶಕ್ಕಾಗಿ ರೂಪಿಸಲಾಗಿದೆ. ಪಾಲನೆ ಆಗುವಂತೆ ನೋಡಿಕೊಳ್ಳಬೇಕು' ಎಂದರು.

## ❖ ಬಿಪಿಎಲ್ ಆದಾಯ ಮಿತಿ: ₹3 ಲಕ್ಷಕ್ಕೆ ಏರಿಕೆ

**ಸಂದರ್ಭ: ಬಿಪಿಎಲ್ ಕಾರ್ಡ್ ದಾರರ ಆದಾಯ ಮಿತಿಯನ್ನು 13 ಲಕ್ಷಕ್ಕೆ ಏರಿಸುವ ವಿಚಾರ ಸರ್ಕಾರದ ಮುಂದಿದೆ ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದರು.**

- ವಿಧಾನಸಭೆಯಲ್ಲಿ ಮಂಗಳವಾರ ಆದಾಯ ಮಿತಿ ಹೆಚ್ಚಿಸುವ ಕುರಿತಂತೆ ಅರ್ಧಗಂಟೆ ಚರ್ಚೆಗೆ ಉತ್ತರ ನೀಡಿದ ಅವರು, 'ಈಗ ಆದಾಯ ಮಿತಿ ವರ್ಷಕ್ಕೆ ₹1.20 ಲಕ್ಷ ಇದೆ. 3 ಲಕ್ಷಕ್ಕೆ ಏರಿಸುವುದರಿಂದ ಸಾಕಷ್ಟು ಜನರಿಗೆ ಪರಿಹಾರ ಸಿಗುತ್ತದೆ. ಆಡಳಿತ ಸುಧಾರಣಾ ಆಯೋಗವೂ ತನ್ನ ವರದಿಯಲ್ಲಿ ಈ ಕುರಿತು ಶಿಫಾರಸು ಮಾಡಿದೆ' ಎಂದರು.
- 'ಬೆಂಗಳೂರು ನಗರದಲ್ಲಿ ಬಡವರು, ವಿಧವೆಯರು, ಅಂಗವಿಲಕರ ಸಂಖ್ಯೆಯನ್ನು ನಿಖರವಾಗಿ ಸಂಗ್ರಹಿಸಲು ಮತ್ತೊಂದು ಸಮೀಕ್ಷೆ ನಡೆಸಿ 2 ತಿಂಗಳಲ್ಲಿ ವರದಿ ಪಡೆಯಲಾಗುವುದು, ಈಗಿರುವ ಮಾಹಿತಿ ಸರಿ ಇಲ್ಲದೇ ಇರುಬಹುದು. ಅಧಿಕಾರಿಗಳ ಜತೆ ಚರ್ಚೆ ನಡೆಸುತ್ತೇನೆ' ಎಂದೂ ಭರವಸೆ ನೀಡಿದರು.
- ಅರ್ಹತೆ ಇಲ್ಲದವರನ್ನು ಬಿಪಿಎಲ್ ವ್ಯಾಪ್ತಿಯಿಂದ ಕೈಬಿಟ್ಟರೂ ಅರ್ಜಿಗಳು ಬರುವುದು ನಿಂತಿಲ್ಲ. 7.70 ಲಕ್ಷ ಪಡಿತರ ಚೀಟಿಗಳಲ್ಲಿ ಅನರ್ಹರನ್ನು ಪತ್ತೆ ಹಚ್ಚುವ ಕಾರ್ಯ ಶೇ 50ರಷ್ಟು ಮುಗಿದಿದೆ ಅನರ್ಹಗೊಂಡವರನ್ನು ಎಪಿಎಲ್ ವ್ಯಾಪ್ತಿಗೆ ಒಳಪಡಿಸಲಾಗುವುದು ಕೇಂದ್ರ ಸರ್ಕಾರದ ಮಾನದಂಡದ ಪ್ರಕಾರವೇ ಈ ಕಾರ್ಯ ಕೈಗೊಳ್ಳಲಾಗಿದೆ ಎಂದು ಮುನಿಯಪ್ಪ ವಿವರಿಸಿದರು.
- ವಿಷಯ ಪ್ರಸ್ತಾಪಿಸಿದ ಬಿಜೆಪಿಯ ಸಿ.ಎನ್ ಅಶ್ವತ್ಥನಾರಾಯಣ, 'ಜಿಬಿಎ ವ್ಯಾಪ್ತಿಯಲ್ಲಿ 1.50 ಕೋಟಿ ಜನ ಸಂಖ್ಯೆ ಇದೆ. ಆದರೆ 10 ಲಕ್ಷ ಕುಟುಂಬಗಳಿಗೆ ಮಾತ್ರ ಬಿಪಿಎಲ್ ಪಡಿತರ ಚೀಟಿ ವಿತರಿಸಲಾಗಿದೆ. ಆಹಾರ ಭದ್ರತಾ ಕಾಯ್ದೆಯ ಪ್ರಕಾರ ಒಟ್ಟು ಜನಸಂಖ್ಯೆಯ ಶೇ 50ರಷ್ಟು ಜನರಿಗೆ ಪಡಿತರ ಚೀಟಿ ನೀಡಬೇಕು ಎಂದಿದೆ ಶೇ 15ರಷ್ಟು ಜನಕ್ಕೂ ಪಡಿತರ ಚೀಟಿ ಕೊಟ್ಟಿಲ್ಲ ಆದ್ದರಿಂದ ನಗರ ಪ್ರದೇಶದ ಎಲ್ಲ ಬಡವರಿಗೂ ಬಿಪಿಎಲ್ ಪಡಿತರ ಚೀಟಿ ವಿತರಿಸಬೇಕು' ಎಂದು ಒತ್ತಾಯಿಸಿದರು.

Dr. Rajkumar IAS/KAS Academy

- 'ಬೆಂಗಳೂರು ನಗರದ ಬಡವರು ಅತ್ಯಂತ ಸಂಕಷ್ಟಮಯ ಜೀವನ ನಡೆಸುತ್ತಿದ್ದಾರೆ ಹೆಚ್ಚಿನವರಿಗೆ ಸ್ವಂತ ಮನೆ ಇಲ್ಲ. ನಿಶ್ಚಿತ ಉದ್ಯೋಗವೂ ಇಲ್ಲ ದುಬಾರಿ ಎನಿಸಿರುವ ಬೆಂಗಳೂರಿನಲ್ಲಿ ಇವರ ಆದಾಯ ತಿಂಗಳಿಗೆ ₹20 ಸಾವಿರ ಮೀರುವುದಿಲ್ಲ ಹೇಗೆ ಜೀವನ ನಡೆಸಬೇಕು ಇವರ ಸ್ಥಿತಿ ಸುಧಾರಿಸಲು ಸಾಧ್ಯವಾಗದ ಕಾರಣಕ್ಕೆ ನಾವೆಲ್ಲ ನಾಚಿಕೆಪಟ್ಟುಕೊಳ್ಳಬೇಕಾಗಿದೆ' ಎಂದು ಹೇಳಿದರು.

# ಮಹಿಳಾ ಮೀಸಲಾತಿ ತರಾತುರಿಯ ತಂತ್ರಗಾರಿಕೆ

## ಲೋಕಸಭೆ, ವಿಧಾನಸಭೆಗಳಲ್ಲಿ ಶೇ 33ರಷ್ಟು ಪ್ರಾತಿನಿಧ್ಯ ಕಲ್ಪಿಸಲು ಕೇಂದ್ರದ ಚಿಂತನೆ

ಪ್ರಜಾವಾಣಿ ವಾರ್ತೆ

ಕೇಂದ್ರ ಸರ್ಕಾರವು ಮಹಿಳೆಯರಿಗೆ ಸಂಸತ್ತಿನಲ್ಲಿ ಮತ್ತು ವಿಧಾನಸಭೆಗಳಲ್ಲಿ ಮೀಸಲಾತಿ ದೊರಕಿಸಿಕೊಡುವ ದಿಸೆಯಲ್ಲಿ ಮಹತ್ವದ ಹೆಜ್ಜೆ ಹಾಕಲು ಮುಂದಾಗಿದೆ. ಲೋಕಸಭೆಯಲ್ಲಿ ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ನೀಡುವುದಕ್ಕಾಗಿ ಪ್ರಸ್ತುತ ನಡೆಯುತ್ತಿರುವ ಬಜೆಟ್ ಅಧಿವೇಶನದಲ್ಲಿಯೇ ಎರಡು ಮಸೂದೆಗಳನ್ನು ಮಂಡಿಸಲಿದೆ. ಲೋಕಸಭೆ ಮತ್ತು ವಿಧಾನಸಭಾ ಕ್ಷೇತ್ರಗಳ ಮರುವಿಂಗಡಣೆಯ ಜತೆಯಲ್ಲೇ ಮಹಿಳಾ ಮೀಸಲಾತಿ ಜಾರಿ ಮಾಡುವುದು ಕೇಂದ್ರ ಸರ್ಕಾರದ ಉದ್ದೇಶವಾಗಿದೆ ಎನ್ನಲಾಗುತ್ತಿದೆ.

ಲೋಕಸಭೆ ಮತ್ತು ರಾಜ್ಯ/ಕೇಂದ್ರಾಡಳಿತ ಪ್ರದೇಶಗಳ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ನೀಡಬೇಕು ಎನ್ನುವುದು ಬಹಳ ಹಳೆಯ ಬೇಡಿಕೆ. 2029ರ ಲೋಕಸಭಾ ಚುನಾವಣೆಯಲ್ಲೇ ಆ ಬೇಡಿಕೆ ಈಡೇರಿಸಲು ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವು ಚಿಂತನೆ ನಡೆಸಿದ್ದು, ಅದಕ್ಕಾಗಿ ತಂತ್ರಗಾರಿಕೆಯಲ್ಲಿ ತೊಡಗಿದೆ. ನಾರಿ ಶಕ್ತಿ ವಂದನಾ ಅಧಿನಿಯಮಕ್ಕೆ (ಮಹಿಳಾ ಮೀಸಲಾತಿ ಕಾಯ್ದೆ) ತಿದ್ದುಪಡಿ ತರಲು ಸಂವಿಧಾನ ತಿದ್ದುಪಡಿ ಮಾಡುವ ಮಸೂದೆ, ಕ್ಷೇತ್ರ ಮರುವಿಂಗಡಣೆ ಕಾಯ್ದೆಯನ್ನು ತಿದ್ದುಪಡಿ ಮಾಡುವ ಮಸೂದೆಯನ್ನು ಈ ಅಧಿವೇಶನದಲ್ಲೇ ಕೇಂದ್ರವು ಸಂಸತ್‌ನಲ್ಲಿ ಮಂಡಿಸಲು ಬಯಸಿದೆ. ಒಂದು ವೇಳೆ ಸಾಧ್ಯವಾಗದಿದ್ದರೆ, ಅದಕ್ಕಾಗಿಯೇ ತುರ್ತಾಗಿ ವಿಶೇಷ ಅಧಿವೇಶನ ಕರೆಯುವುದಕ್ಕೂ ಅದು ಯೋಚಿಸಿದೆ ಎಂದು ವರದಿಯಾಗಿದೆ.

ಸಂವಿಧಾನಕ್ಕೆ 106ನೇ ತಿದ್ದುಪಡಿ ತಂದು ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ಕಲ್ಪಿಸುವ ಮಸೂದೆಯನ್ನು 2023ರಲ್ಲಿ ಸಂಸತ್ತು ಮೂರನೇ ಎರಡು ಬಹುಮತದೊಂದಿಗೆ ಅಂಗೀಕರಿಸಿತ್ತು. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಸೆಪ್ಟೆಂಬರ್‌ನಲ್ಲಿ ಮಸೂದೆಗೆ ಅಂಕಿತ ಹಾಕಿದ್ದರು. 2027ರಲ್ಲಿ ನಡೆಯಲಿರುವ ಜನಗಣತಿ ಆಧಾರದಲ್ಲಿ ಮಹಿಳಾ ಮೀಸಲಾತಿ ಮತ್ತು ಕ್ಷೇತ್ರ ಮರುವಿಂಗಡಣೆ ನಡೆಸಲಾಗುವುದು ಎಂದು ಕೇಂದ್ರ ಸರ್ಕಾರ ಹೇಳಿತ್ತು. ಇನ್ನು ಆರಂಭವಾಗಲಿರುವ ಜನಗಣತಿಯ ಮಾಹಿತಿ ಪಡೆಯಲು 2030ರವರೆಗೆ ಕಾಯಬೇಕು. ಆದರೆ, 2029ರಲ್ಲಿ ಲೋಕಸಭಾ ಚುನಾವಣೆ ನಡೆಯಲಿದೆ. ಹೀಗಾಗಿ 2011ರ ಜನಗಣತಿಯ ದತ್ತಾಂಶದ ಆಧಾರದಲ್ಲಿಯೇ ಮಹಿಳಾ ಮೀಸಲಾತಿ ಕಾಯ್ದೆ ಜಾರಿ ಮಾಡುವುದು ಸರ್ಕಾರದ ಚಿಂತನೆ. ಆದರೆ, ಅದಕ್ಕಾಗಿ ಸಂವಿಧಾನ ತಿದ್ದುಪಡಿಯ ಅಗತ್ಯವಿದೆ.

**ಮಹಿಳಾ ಮೀಸಲಾತಿಯು ರಾಜ್ಯಸಭೆ ಮತ್ತು ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳಲ್ಲಿನ ವಿಧಾನ ಪರಿಷತ್‌ಗೆ ಅನ್ವಯವಾಗುವುದಿಲ್ಲ.**

ಈ ಮಸೂದೆಗಳು ಅಂಗೀಕಾರಗೊಂಡು ಕಾಯ್ದೆಗಳಾದರೆ, 2029ರ ಮಾರ್ಚ್ 31ರಿಂದ ಜಾರಿಗೆ ಬರಲಿವೆ. ಮುಂದಿನ ಲೋಕಸಭಾ ಚುನಾವಣೆ ಮತ್ತು ಒಡಿಶಾ, ಅರುಣಾಚಲ ಪ್ರದೇಶ, ಸಿಕ್ಕಿಂ ಮತ್ತು ಆಂಧ್ರಪ್ರದೇಶ ವಿಧಾನಸಭಾ ಚುನಾವಣೆಗಳಲ್ಲಿ ಕಾಯ್ದೆಗಳ ಪ್ರಯೋಜನ ಸಿಗಲಿದೆ.

**ಕ್ಷೇತ್ರ ಮರುವಿಂಗಡಣೆ:** ಮಹಿಳಾ ಮೀಸಲಾತಿ ಕಾಯ್ದೆ ಜಾರಿಗೊಳಿಸುವುದರ ಜತೆಯಲ್ಲೇ ಲೋಕಸಭೆ ಮತ್ತು ವಿಧಾನಸಭೆಗಳ ಕ್ಷೇತ್ರ ಮರುವಿಂಗಡಣೆ ಮಾಡುವುದು ಕೇಂದ್ರ ಸರ್ಕಾರದ ಚಿಂತನೆಯಾಗಿದೆ. ಅದನ್ನು ಕ್ಷೇತ್ರ ಮರುವಿಂಗಡಣೆ ಅಥವಾ ಗಡಿ ಆಯೋಗವು ಮಾಡುತ್ತದೆ. ಅದು 'ತಟಸ್ಥ' ಸಂಸ್ಥೆಯಾಗಿದ್ದು, ಅದರ ತೀರ್ಮಾನಗಳನ್ನು ಸುಪ್ರೀಂ ಕೋರ್ಟ್‌ನಲ್ಲಿಯೂ ಪ್ರಶ್ನಿಸಲಾಗುವುದಿಲ್ಲ.

ಈ ಹಿಂದಿನ ಕ್ಷೇತ್ರ ಮರುವಿಂಗಡಣೆಯ ಸಂದರ್ಭದಲ್ಲಿ, ಜನಸಂಖ್ಯೆಯನ್ನು ಆಧರಿಸಿ ಲೋಕಸಭೆ ಮತ್ತು ವಿಧಾನಭೆಗಳಲ್ಲಿ ಎಸ್‌ಸಿ, ಎಸ್‌ಟಿ ಮೀಸಲಾತಿ ಕಲ್ಪಿಸಲಾಗಿತ್ತು. ಮಹಿಳಾ ಮೀಸಲು ಕ್ಷೇತ್ರಗಳನ್ನು ಗುರುತಿಸಲೂ ಇದೇ ಮಾರ್ಗವನ್ನು ಅನುಸರಿಸುವ ಸಾಧ್ಯತೆ ಇದೆ. ಜತೆಗೆ, ಆವರ್ತನ ಪದ್ಧತಿಯ ಆಧಾರದಲ್ಲಿಯೂ ಮಹಿಳಾ ಮೀಸಲು ಕ್ಷೇತ್ರಗಳನ್ನು ನಿಗದಿಪಡಿಸಲು ಚಿಂತನೆ ನಡೆಸಲಾಗುತ್ತಿದೆ. ಮಹಿಳಾ ಮೀಸಲು ಸ್ಥಾನಗಳಲ್ಲಿ ಎಸ್‌ಸಿ, ಎಸ್‌ಟಿ ಮೀಸಲಾತಿ ಇರುತ್ತದೆ. ಆದರೆ, ಒಬಿಸಿ ಮೀಸಲಾತಿ ಇರುವುದಿಲ್ಲ ಎನ್ನಲಾಗುತ್ತಿದೆ. ಮಹಿಳಾ ಮೀಸಲಿನಲ್ಲಿ ಎಸ್‌ಸಿ, ಎಸ್‌ಟಿ, ಒಬಿಸಿ ಮಹಿಳೆಯರಿಗೆ ಒಳಮೀಸಲಾತಿ ಕಲ್ಪಿಸಬೇಕು ಎನ್ನುವುದು ಪ್ರಬಲ ಒತ್ತಾಯವಾಗಿತ್ತು. ಈ ಕಾರಣಕ್ಕೆ ಹಿಂದೆ ಹಲವು ಬಾರಿ ಸಂಸತ್‌ನಲ್ಲಿ ಮಸೂದೆ ಅಂಗೀಕಾರಗೊಂಡಿರಲಿಲ್ಲ.

**ಆಧಾರ:** ಪಿಟಿಐ, ಸುಪ್ರೀಂ ಕೋರ್ಟ್ ಅಬ್ಸರ್ವರ್, ಮಾಧ್ಯಮ ವರದಿಗಳು



ಕಲೆ: ಸಂತೋಷ್ ಸಸಿಹಿತ್ಲು

**543** ಲೋಕಸಭೆಯ ಸದಸ್ಯರ ಸಂಖ್ಯೆ

**75** ಲೋಕಸಭೆಯಲ್ಲಿ ಇರುವ ಹಾಲಿ ಮಹಿಳಾ ಸಂಸದರು

**14%** ಪ್ರಸ್ತುತ ಮಹಿಳಾ ಪ್ರಾತಿನಿಧ್ಯದ ಪ್ರಮಾಣ

### ಕ್ಷೇತ್ರಗಳ ಸಂಖ್ಯೆ ಶೇ 50ರಷ್ಟು ಹೆಚ್ಚಳ

ಎರಡೂ ಕಾಯ್ದೆಗಳು ಜಾರಿಗೆ ಬಂದರೆ, ಪ್ರತಿ ರಾಜ್ಯದಲ್ಲಿ ಲೋಕಸಭೆಯ ಸ್ಥಾನಗಳ ಸಂಖ್ಯೆ ಶೇ 50ರಷ್ಟು ಹೆಚ್ಚಳವಾಗುತ್ತದೆ. ಅಂದರೆ, ಪ್ರಸ್ತುತ **543** ಸ್ಥಾನಗಳು **816**ಕ್ಕೆ ಏರಿಕೆಯಾಗುತ್ತವೆ. ಹೆಚ್ಚಳವಾದ **273** ಸ್ಥಾನಗಳನ್ನು ಮಹಿಳೆಯರಿಗೆ ಮೀಸಲಿಡಲಾಗುತ್ತದೆ. ಈ ಪ್ರಕಾರ, ಕರ್ನಾಟಕದಲ್ಲಿ ಪ್ರಸ್ತುತ **28** ಸ್ಥಾನಗಳಿದ್ದು, ಕಾಯ್ದೆ ಜಾರಿಯಾದರೆ ಅವುಗಳ ಸಂಖ್ಯೆ **42**ಕ್ಕೆ ಹೆಚ್ಚಲಿದೆ. ಹೆಚ್ಚುವರಿ **14** ಸ್ಥಾನಗಳು ಮಹಿಳೆಯರಿಗೆ ಮೀಸಲಾಗಲಿವೆ.

2026ರ ಜನಗಣತಿ ಆಧರಿಸಿ ಕ್ಷೇತ್ರ ಮರುವಿಂಗಡಣೆಯಾದರೆ, ಜನಸಂಖ್ಯೆ ನಿಯಂತ್ರಣಾ ಕ್ರಮಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದ ದಕ್ಷಿಣದ ರಾಜ್ಯಗಳಿಗೆ ಅನ್ಯಾಯವಾಗುತ್ತದೆ, ಉತ್ತರದ ಕೆಲವು ರಾಜ್ಯಗಳಲ್ಲಿ ಕ್ಷೇತ್ರಗಳ ಸಂಖ್ಯೆ ಭಾರಿ ಸಂಖ್ಯೆಯಲ್ಲಿ ಹೆಚ್ಚಾಗಲಿದೆ ಎನ್ನುವ ಆತಂಕ ಎದುರಾಗಿತ್ತು. ಆದರೆ, ಈಗ 2011ರ ಜನಸಂಖ್ಯೆ ಆಧರಿಸಿ ಕ್ಷೇತ್ರ ಮರುವಿಂಗಡಣೆ ಮಾಡಿದರೆ ಮತ್ತು ಅದರ ಆಧಾರದಲ್ಲಿ ಮಹಿಳಾ ಮೀಸಲಾತಿ ಕಲ್ಪಿಸಿದರೆ ದಕ್ಷಿಣ ರಾಜ್ಯಗಳ ಆತಂಕ ನಿವಾರಣೆಯಾಗುತ್ತದೆ ಎನ್ನುವ ವಿಶ್ಲೇಷಣೆ ಇದೆ.

### ರಾಜಕೀಯ ಲೆಕ್ಕಾಚಾರ?

ನಾಲ್ಕು ರಾಜ್ಯ ಮತ್ತು ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ವಿಧಾನಸಭಾ ಚುನಾವಣೆ ಘೋಷಣೆಯಾಗಿರುವ ಹೊತ್ತಿನಲ್ಲಿ ಎರಡು ಮಸೂದೆಗಳನ್ನು ಮಂಡಿಸಲು ಕೇಂದ್ರ ಸರ್ಕಾರ ಹೊರಟಿರುವುದು ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ.

ವಿರೋಧ ಪಕ್ಷಗಳ ಮಹಿಳಾ ಸಂಸದರು ಪ್ರಸ್ತಾವವನ್ನು ಸ್ವಾಗತಿಸಿದ್ದಾರಾದರೂ, ಕಾಂಗ್ರೆಸ್ ಸೇರಿದಂತೆ ಇತರ ಪಕ್ಷಗಳ ಮುಖಂಡರು ಮಸೂದೆ ಮಂಡನೆಗೆ ಅಷ್ಟೊಂದು ತರಾತುರಿ ಯಾಕೆ ಎಂದು ಪ್ರಶ್ನಿಸಿದ್ದಾರೆ. ಪಶ್ಚಿಮ ಬಂಗಾಳ, ತಮಿಳುನಾಡು, ಕೇರಳ, ಅಸ್ಸಾಂ ಮತ್ತು ಪುದುಚೆರಿ ವಿಧಾನಸಭಾ ಚುನಾವಣೆಗಳಲ್ಲಿ ಲಾಭ ಪಡೆಯುವ ಬಿಜೆಪಿಯ ಲೆಕ್ಕಾಚಾರವೂ ಇದರ ಹಿಂದೆ ಇದೆ ಎಂದು ಅನುಮಾನ ವ್ಯಕ್ತಪಡಿಸಿವೆ.

ಮಹಿಳಾ ಮೀಸಲು ಕಾಯ್ದೆಗೆ ತಿದ್ದುಪಡಿ (ಸಂವಿಧಾನ ತಿದ್ದುಪಡಿ ಆಗಿರುವುದರಿಂದ) ತರಲು ಎರಡೂ ಸದನಗಳಲ್ಲಿ ಮೂರನೇ ಎರಡರಷ್ಟು ಬಹುಮತ ಬೇಕು. ಹಾಗಾಗಿ, ರಾಜಕೀಯ ಪಕ್ಷಗಳಲ್ಲಿ ಮಸೂದೆಯ ಬಗ್ಗೆ ಒಮ್ಮತ ಮೂಡಿಸಲು ಕೇಂದ್ರ ಸರ್ಕಾರ ಯತ್ನಿಸುತ್ತಿದೆ. ಇದರ ಭಾಗವಾಗಿ ಗೃಹಸಚಿವ ಅಮಿತ್ ಶಾ ಅವರು ಸೋಮವಾರ ಕಾಂಗ್ರೆಸ್ ಹೊರತುಪಡಿಸಿ ಇತರ ಕೆಲವು ವಿರೋಧ ಪಕ್ಷಗಳ ಸದನದ ನಾಯಕರೊಂದಿಗೆ ಚರ್ಚೆ ನಡೆಸಿದ್ದಾರೆ. ಮೀಸಲಾತಿಯನ್ನು ಯಾವ ರೀತಿ ಅನುಷ್ಠಾನಕ್ಕೆ ತರಲಾಗುತ್ತದೆ ಎಂಬುದನ್ನು ಸ್ಪಷ್ಟಪಡಿಸುವಂತೆ ವಿರೋಧ ಪಕ್ಷಗಳ ಹಲವು ನಾಯಕರು ಕೇಳಿದ್ದಾರೆ ಎಂದು ಹೇಳಲಾಗಿದೆ.

ಕಾಂಗ್ರೆಸ್‌ನೊಂದಿಗೆ ಅಮಿತ್ ಶಾ ಅವರು ಇನ್ನಷ್ಟೇ ಮಾತನಾಡಬೇಕಿದೆ. ಆದರೆ, ಈ ಬಗ್ಗೆ ಕಾಂಗ್ರೆಸ್ ನಾಯಕರೊಂದಿಗೆ ಚರ್ಚಿಸಲು ಸರ್ಕಾರ ಪ್ರತಿನಿಧಿಗಳನ್ನು ಕಳುಹಿಸಿದೆ ಎಂದು ವರದಿಯಾಗಿದೆ. ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಈ ಬಗ್ಗೆ ಚರ್ಚಿಸಲು ಸರ್ವ ಪಕ್ಷ ಸಭೆಯನ್ನು ಕರೆಯುವಂತೆ ಒತ್ತಾಯಿಸಿದ್ದಾರೆ.

2027ರ ಜನಗಣತಿಯ ಆಧಾರದಲ್ಲಿ ಕ್ಷೇತ್ರ ಮರುವಿಂಗಡಣೆಯ ನಂತರ ಮೀಸಲಾತಿ ಜಾರಿ ಮಾಡುವುದಾಗಿ ಹೇಳಿದ್ದ ಸರ್ಕಾರ ಈಗ 2029 ಚುನಾವಣೆ ಹೊತ್ತಿಗೆ ಮೀಸಲಾತಿ ಜಾರಿಗೊಳಿಸಲು ಹೊರಟಿದೆ. ಅದಕ್ಕಾಗಿ 2011ರ ಜನಗಣತಿಯನ್ನೇ ಆಧಾರವಾಗಿಸಲು ಯೋಜಿಸಿದೆ. ಹೊಸ ಜನಗಣತಿಯ ನಂತರ ಕೇಳಿಬರಬಹುದಾದ ಹಿಂದುಳಿದ ವರ್ಗಗಳಿಗೆ ಇರುವ ಮೀಸಲಾತಿಯಲ್ಲಿ ಒಳ ಮೀಸಲಾತಿ ಕಲ್ಪಿಸುವ ಬೇಡಿಕೆಯಿಂದ ಉಂಟಾಗಬಹುದಾದ ಇಕ್ಕಟ್ಟಿನ ಪರಿಸ್ಥಿತಿಯನ್ನು ತಪ್ಪಿಸಲು ಕೇಂದ್ರ ಸರ್ಕಾರ ಈಗಲೇ ಮಸೂದೆ ಮಂಡಿಸಲು ಮುಂದಾಗಿರಬಹುದು ಎಂಬ ಅನುಮಾನವನ್ನೂ ವಿರೋಧ ಪಕ್ಷಗಳ ಕೆಲವು ನಾಯಕರು ವ್ಯಕ್ತಪಡಿಸಿದ್ದಾರೆ.

### ಕಾಯ್ದೆಯ ಹಾದಿ

- ದೇಶದಲ್ಲಿ ಸ್ವಾತಂತ್ರ್ಯಪೂರ್ವದಲ್ಲೇ ರಾಜಕೀಯದಲ್ಲಿ ಮಹಿಳೆಯರಿಗೆ ಮೀಸಲಾತಿ ನೀಡಬೇಕು ಎಂಬ ಚರ್ಚೆ ನಡೆದಿತ್ತು. ಸ್ವಾತಂತ್ರ್ಯ ಸಿಕ್ಕ ನಂತರವೂ ಇದಕ್ಕಾಗಿ ಮಹಿಳೆಯರಿಂದ ಒತ್ತಡವಿತ್ತು. ಸ್ವಾತಂತ್ರ್ಯ ಹೋರಾಟಗಾರ್ತಿ ರೇಣುಕಾ ರೇ ಅವರು ಮಹಿಳೆಯರಿಗೂ ರಾಜಕೀಯ ಸ್ಥಾನಮಾನ ಸಿಗಲಿದೆ ಎಂದು ಆಶಿಸಿದ್ದರು. ಆದರೆ, ಹಲವು ದಶಕಗಳವರೆಗೆ ಇದು ಕನಸಾಗಿಯೇ ಉಳಿದಿತ್ತು
- ಭಾರತದಲ್ಲಿ ಮಹಿಳೆಯರ ಸ್ಥಿತಿಗತಿ ಅಧ್ಯಯನಕ್ಕಾಗಿ ರಚಿಸಲಾಗಿದ್ದ ಸಮಿತಿಯು 1974ರಲ್ಲಿ ಪಂಚಾಯಿತಿಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ನೀಡಬೇಕು ಎಂದು ಶಿಫಾರಸು ಮಾಡಿತ್ತು
- ಎರಡು ದಶಕಗಳ ನಂತರ 1993ರಲ್ಲಿ ಪಂಚಾಯಿತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಮೂರನೇ ಒಂದರಷ್ಟು ಸ್ಥಾನಗಳನ್ನು (ಶೇ 33) ಮೀಸಲಿಡುವ ಕುರಿತು ಸಂವಿಧಾನಕ್ಕೆ 73 ಮತ್ತು 74ನೇ ತಿದ್ದುಪಡಿಯನ್ನು ತರಲಾಯಿತು
- 1996 ಸೆಪ್ಟೆಂಬರ್ 12ರಂದು, ಅಂದರೆ ಸ್ವಾತಂತ್ರ್ಯ ಸಿಕ್ಕ 49 ವರ್ಷಗಳ ನಂತರ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮೀಸಲಾತಿ ಕಲ್ಪಿಸುವ ಕುರಿತು ಎಚ್.ಡಿ.ದೇವೇಗೌಡ ಸರ್ಕಾರ ಮೊದಲ ಬಾರಿಗೆ ಮಸೂದೆ ಮಂಡಿಸಿತು. ಆದರೆ, ಲೋಸಕಭೆ ವಿಸರ್ಜನೆ ಆದ ಕಾರಣದಿಂದ ಮಸೂದೆ ಬಿದ್ದು ಹೋಯಿತು
- 1998ರಿಂದ 2003ರ ನಡುವೆ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರ ಮೀಸಲಾತಿ ಮಸೂದೆಯನ್ನು ನಾಲ್ಕು ಸಲ ಸಂಸತ್ತಿನಲ್ಲಿ ಮಂಡಿಸಿತ್ತು. ಆದರೆ, ಪಕ್ಷಗಳ ನಡುವೆ ಒಮ್ಮತ ಮೂಡದೇ ಇದ್ದುದರಿಂದ ಅಂಗೀಕಾರವಾಗಿರಲಿಲ್ಲ.
- ನಂತರ ಅಧಿಕಾರಕ್ಕೆ ಬಂದ ಯುಪಿಎ ಸರ್ಕಾರ 2008ರಲ್ಲಿ ಮೊದಲಿಗೆ ರಾಜ್ಯಸಭೆಯಲ್ಲಿ ಮಸೂದೆ ಮಂಡಿಸಿತ್ತು. ಚರ್ಚೆಯ ಬಳಿಕ ಸಂಸದೀಯ ಸ್ಥಾಯಿ ಸಮಿತಿಗೆ ಮಸೂದೆಯನ್ನು ಒಪ್ಪಿಸಲಾಗಿತ್ತು, ಲೋಕಸಭೆಯ ಅವಧಿ ಮುಗಿಯುವರೆಗೂ ವರದಿ ಬಾರದೇ ಇದ್ದುದರಿಂದ ಮಸೂದೆ ಬಿದ್ದು ಹೋಯಿತು
- 2014, 2019ರ ಚುನಾವಣೆ ಸಂದರ್ಭದಲ್ಲಿ ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ 33ರಷ್ಟು ಮೀಸಲಾತಿ ಕಲ್ಪಿಸುವ ಭರವಸೆ ನೀಡಿದ್ದ ಬಿಜೆಪಿ ಈ ಬಗ್ಗೆ ನಿರ್ಧಾರ ಕೈಗೊಂಡಿರಲಿಲ್ಲ
- 2021ರಲ್ಲಿ ಭಾರತೀಯ ಮಹಿಳೆಯರ ರಾಷ್ಟ್ರೀಯ ಒಕ್ಕೂಟವು ಸುಪ್ರೀಂ ಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿತ್ತು. ಮೀಸಲಾತಿಯ ಮಸೂದೆಯನ್ನು ಮತ್ತೆ ಲೋಕಸಭೆಯಲ್ಲಿ ಮಂಡಿಸಲು ನಿರ್ದೇಶನ ನೀಡಬೇಕು ಎಂದು ಅದು ಮನವಿ ಮಾಡಿತ್ತು. ಸುಪ್ರೀಂ ಕೋರ್ಟ್ ಸರ್ಕಾರಕ್ಕೆ ಎರಡು ಬಾರಿ ಸೂಚನೆ ನೀಡಿದ್ದರೂ ಎರಡು ವರ್ಷ ಪ್ರತಿಕ್ರಿಯಿಸಿರಲಿಲ್ಲ
- 2023ರ ಆಗಸ್ಟ್‌ನಲ್ಲಿ ನಡೆದ ವಿಶೇಷ ಅಧಿವೇಶನದಲ್ಲಿ ಕೇಂದ್ರ ಸರ್ಕಾರ ಎರಡೂ ಸದನಗಳಲ್ಲಿ ನಾರಿ ಶಕ್ತಿ ವಂದನಾ ಮಸೂದೆಯನ್ನು ಮಂಡಿಸಿ ಅಂಗೀಕಾರ ಪಡೆದಿತ್ತು

## ❖ ಲಿಂಗತ್ವ ಅಲ್ಪ ಸಂಖ್ಯಾತರ ಹಕ್ಕುಗಳ ರಕ್ಷಣೆ ತಿದ್ದುಪಡಿ ಮಸೂದೆಗೆ ಅಸ್ತು

**ಸಂದರ್ಭ: ಲಿಂಗತ್ವ ಅಲ್ಪ ಸಂಖ್ಯಾತರ ಹಕ್ಕುಗಳ ರಕ್ಷಣೆ ತಿದ್ದುಪಡಿ ಮಸೂದೆಗೆ ಲೋಕಸಭೆಯು ಮಂಗಳವಾರ ಅನುಮೋದನೆ ನೀಡಿತು.**


- ಮಸೂದೆ ಬಗ್ಗೆ ಪ್ರತಿಕ್ರಿಯಿಸಿದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವ ವೀರೇಂದ್ರ ಕುಮಾರ್ ಅವರು, 'ಲಿಂಗದ ಕಾರಣಕ್ಕಾಗಿಯೇ ಬಹಿಷ್ಕಾರದ ಶಿಕ್ಷೆಯನ್ನು ಎದುರಿಸುವವರನ್ನು ರಕ್ಷಿಸುವ ಉದ್ದೇಶವನ್ನು ಈ ಮಸೂದೆಯು ಹೊಂದಿದೆ' ಎಂದು ಹೇಳಿದರು.
- 'ಲಿಂಗತ್ಯ ಅಲ್ಪ ಸಂಖ್ಯಾತರಿಗೆ ಕಾನೂನಾತ್ಮಕ ಮಾನ್ಯತೆ ಮತ್ತು ರಕ್ಷಣೆಯನ್ನೂ ಒದಗಿಸಲಿದೆ' ಎಂದು ಅವರು ಒತ್ತಿ ಹೇಳಿದರು.
- 2019ರ ಕಾನೂನು ಇಂಥವರ ವಿರುದ್ಧದ ದೌರ್ಜನ್ಯಕ್ಕೆ ಗರಿಷ್ಠ 2 ವರ್ಷ ಕಾರಾಗೃಹ ಶಿಕ್ಷೆ ನೀಡುವ ಅವಕಾಶ ನೀಡುತ್ತಿತ್ತು ತಿದ್ದುಪಡಿ ಮಸೂದೆಯು ಗರಿಷ್ಠ 14 ವರ್ಷ ಜೈಲು ಶಿಕ್ಷೆ ಮತ್ತು ದಂಡವನ್ನು ವಿಧಿಸಲು ಅವಕಾಶ ನೀಡುತ್ತದೆ ಎಂದು ಹೇಳಿದರು.

- ಪ್ರಸ್ತಾವಿತ ಮಸೂದೆಯು ಲಿಂಗತ್ವದ ಚಹರೆಗಳನ್ನು ನಿರ್ಣಯಿಸುವ ಹಕ್ಕನ್ನು ಕಸಿದುಕೊಳ್ಳಲಿದೆ ಇದನ್ನು ಸ್ಥಾಯಿ ಸಮಿತಿಗೆ ಕಳುಹಿಸಬೇಕು ಎಂದು ವಿರೋಧ ಪಕ್ಷಗಳು ಒತ್ತಾಯಿಸಿವೆ.

## ❖ ಹಣಕಾಸು ಆಯೋಗದ ಅನುದಾನಕ್ಕೆ ಜಿ.ಪಂ, ತಾ.ಪಂ. ಅನರ್ಹ: ಕೇಂದ್ರ

**ಸಂದರ್ಭ: ಕರ್ನಾಟಕದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿಗಳು 15ನೇ ಹಣಕಾಸು ಆಯೋಗದ 2025-26ನೇ ಸಾಲಿನ ಅನುದಾನ ಪಡೆಯಲು ಅನರ್ಹವಾಗಿವೆ ಎಂದು ಕೇಂದ್ರ ಪಂಚಾಯತ್‌ರಾಜ್ ಸಚಿವ ರಾಜೀವ್ ರಂಜನ್ ಸಿಂಗ್ ತಿಳಿಸಿದ್ದಾರೆ.**

- ಲೋಕಸಭೆಯಲ್ಲಿ ಪ್ರಶೋತ್ತರ ಅವಧಿಯಲ್ಲಿ ಉಡುಪಿ-ಚಿಕ್ಕಮಗಳೂರು ಸಂಸದ ಕೋಟ ಶ್ರೀನಿವಾಸ ಪೂಜಾರಿ ಪ್ರಶ್ನೆಗೆ ಲಿಖಿತ ಉತ್ತರ ನೀಡಿದ ಅವರು, 'ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿಗಳಿಗೆ 2021ರ ಫೆಬ್ರುವರಿಯಿಂದ ಚುನಾವಣೆ ನಡೆಸದಿರುವುದೇ ಇದಕ್ಕೆ ಕಾರಣ' ಎಂದಿದ್ದಾರೆ.
- 2020-21ರಿಂದ 2024-25ರ ವರೆಗಿನ ಹಣಕಾಸು ಆಯೋಗದ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಅನುದಾನದ ಎಲ್ಲ ಕಂತುಗಳನ್ನು ರಾಜ್ಯದ ಅರ್ಹ ಗ್ರಾಮ ಪಂಚಾಯಿತಿಗಳಿಗೆ ಬಿಡುಗಡೆ ಮಾಡಲಾಗಿದೆ. ಆದರೆ, 2025-26ನೇ ಸಾಲಿನ ಎರಡು ಕಂತುಗಳನ್ನು ರಾಜ್ಯಕ್ಕೆ ಕೊಟ್ಟಿಲ್ಲ ಕೇಂದ್ರ ಬಿಡುಗಡೆ ಮಾಡಿರುವ ಮೊತ್ತವನ್ನು ಸಕಾಲಕ್ಕೆ ಪಂಚಾಯಿತಿಗಳಿಗೆ ರಾಜ್ಯ ಸರ್ಕಾರ ವರ್ಗಾವಣೆ ಮಾಡಿರಲಿಲ್ಲ. ಜತೆಗೆ, ವಿಳಂಬದ ದಂಡವನ್ನೂ ಪಾವತಿಸಿರಲಿಲ್ಲ' ಎಂದು ಹೇಳಿದ್ದಾರೆ.
- ಹಣಕಾಸು ಆಯೋಗದ ಅನುದಾನಗಳ ಬಳಕೆಗಾಗಿ ಕಾರ್ಯಾಚರಣೆ ಮಾರ್ಗಸೂಚಿಯನ್ನು 2021ರಲ್ಲಿ ಹೊರಡಿಸಲಾಗಿತ್ತು. ಇದರ ಪ್ರಕಾರ, ಪ್ರತಿ ಹಣಕಾಸು ವರ್ಷದಲ್ಲಿ ಎರಡು ಕಂತುಗಳಲ್ಲಿ ರಾಜ್ಯಗಳಿಗೆ ಅನುದಾನ ಬಿಡುಗಡೆ ಮಾಡಲಾಗುತ್ತದೆ ಪ್ರತಿ ಕಂತಿನ ಬಿಡುಗಡೆಗೆ ಮುನ್ನ ಹಿಂದಿನ ಕಂತಿನ ಅನುದಾನ ವರ್ಗಾವಣೆ ಪ್ರಮಾಣಪತ್ರ ಸಲ್ಲಿಸಬೇಕಾಗುತ್ತದೆ. ಈ ಬಗ್ಗೆ ರಾಜ್ಯ ಸರ್ಕಾರ ಪ್ರತ್ಯೇಕವಾಗಿ ನಿರಕ್ಷೇಪಣಾ ಪ್ರಮಾಣಪತ್ರ ಸಲ್ಲಿಸುವ ಅಗತ್ಯ ಇಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.



## ❖ ಹರ ಪಾರ್ವತಿ ಕಥಾಕ್ಕೆ 'ಸರಸ್ವತಿ ಸಮ್ಮಾನ್'

**ಸಂದರ್ಭ: ಬೆಂಗಳೂರು ಲೇಖಕ ರಾಮ್ ಕುಮಾರ್ ಮುಖ್ಯೋಪಾಧ್ಯಾಯ ಅವರ 'ಹರ ಪಾರ್ವತಿ ಕಥಾ' ಬಂಗಾಳಿ ಕಾದಂಬರಿಯು 2025ನೇ ಸಾಲಿನ 'ಸರಸ್ವತಿ ಸಮ್ಮಾನ್ ಪ್ರಶಸ್ತಿಗೆ ಆಯ್ಕೆಯಾಗಿದೆ. ಈ ಕಾದಂಬರಿಯು ಶಿವ ಮತ್ತು ಪಾರ್ವತಿ ಕುರಿತ ಪೌರಾಣಿಕ ಕಥಾಹಂದರವನ್ನು ಹೊಂದಿದೆ.**



- ಭಾರತೀಯ ಪ್ರಜೆಗಳು ದೇಶದ ಯಾವುದೇ ಭಾಷೆಯಲ್ಲಿ ಬರೆದ ಶ್ರೇಷ್ಠ ಸಾಹಿತ್ಯ ಕೃತಿಗೆ ಕೆ.ಕೆ. ಬಿರ್ಲಾ ಫೌಂಡೇಷನ್ 1991ರಿಂದ ಈ ಪ್ರಶಸ್ತಿಯನ್ನು ನೀಡುತ್ತಿದೆ. ಪ್ರಶಸ್ತಿಯು ₹15 ಲಕ್ಷ ನಗದು ಮತ್ತು ಪಾರಿತೋಷಕವನ್ನು ಒಳಗೊಂಡಿದೆ.
- ರಾಮ್ ಕುಮಾರ್ ಮುಖ್ಯೋಪಾಧ್ಯಾಯ ಅವರು ಕೋಲ್ಕತ್ತದಲ್ಲಿ 1956 ಅಕ್ಟೋಬರ್ 5ರಂದು ಜನಿಸಿದರು. ಹೌರಾದ ರಾಮಕೃಷ್ಣ ಮಿಷನ್ ವಿದ್ಯಾಮಂದಿರದಲ್ಲಿ ಪದವಿ ಮತ್ತು ಕಲ್ಕತ್ತ ವಿಶ್ವವಿದ್ಯಾಲಯದಲ್ಲಿ ಸ್ನಾತಕೋತ್ತರ ಪದವಿಯನ್ನು ಪಡೆದಿದ್ದಾರೆ. ಜಾದವ್‌ಪುರ ವಿಶ್ವವಿದ್ಯಾಲಯದಲ್ಲಿ ಪಿ.ಎಚ್‌ಡಿ ಮಾಡಿದ್ದಾರೆ. ಸಾಹಿತ್ಯ ಅಕಾಡೆಮಿಯ ಪೂರ್ವ ಮತ್ತು ಈಶಾನ್ಯ ಪ್ರದೇಶದ ಕಾರ್ಯದರ್ಶಿ-ಯಾಗಿ ಮತ್ತು ವಿಶ್ವಭಾರತಿ ಪ್ರಕಾಶನ ಇಲಾಖೆಯಲ್ಲಿ ನಿರ್ದೇಶಕರಾಗಿಯೂ ಸೇವೆ ಸಲ್ಲಿಸಿದ್ದಾರೆ.
- ಬಹುಮುಖಿ ಪ್ರತಿಭೆಯನ್ನು ಹೊಂದಿರುವ ಅವರು ಈವರೆಗೆ 9 ಕಾದಂಬರಿಗಳು, 11 ಕಥಾ ಸಂಗ್ರಹ ಮತ್ತು ನಾಲ್ಕು ಪ್ರಬಂಧ ಸಂಗ್ರಹ ಹೊರತಂದಿದ್ದಾರೆ. ಎರಡು ಪ್ರವಾಸ ಕಥನಗಳನ್ನು ಬರೆದಿದ್ದಾರೆ. ಅಲ್ಲದೇ, 54 ಭಾಷೆಗಳ ಸುಮಾರು 128 ಜನಪದ ಕಥೆಗಳನ್ನು ಸಂಗ್ರಹಿಸಿದ್ದಾರೆ.
- ಬಂಕಿಮಚಂದ್ರ ಪುರಸ್ಕಾರ ಮತ್ತು ಬಾಂಗ್ಲಾ ಅಕಾಡೆಮಿ ಪುರಸ್ಕಾರ ಸೇರಿದಂತೆ ಹಲವು ಪ್ರಶಸ್ತಿಗಳಿಗೆ ಅವರು ಭಾಜನರಾಗಿದ್ದಾರೆ.

## ❖ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಘೋಷಣೆ

**ಸಂದರ್ಭ: ಬೆಂಗಳೂರು ಕರ್ನಾಟಕ ಸಾಹಿತ್ಯ ಅಕಾಡೆಮಿಯ 2025ನೇ ಸಾಲಿನ 'ಗೌರವ ಪ್ರಶಸ್ತಿ'ಗೆ ಸಾಹಿತಿಗಳಾದ ಪ್ರೊ.ಶಿವರಾಮಯ್ಯ (ಬೆಂಗಳೂರು), ಚಂದ್ರಶೇಖರ ತಾಳ್ಯ (ಚಿತ್ರದುರ್ಗ), ಚಂದ್ರಕಾಂತ ಪೋಕಳೆ (ಬೆಳಗಾವಿ), ಡಾ. ವಸುಂಧರಾ ಭೂಪತಿ (ಬಳ್ಳಾರಿ) ಹಾಗೂ ಎಸ್. ತುಕಾರಾಂ (ಮೈಸೂರು) ಆಯ್ಕೆಯಾಗಿದ್ದಾರೆ.**

- ಸುದ್ದಿಗೋಷ್ಠಿಯಲ್ಲಿ ಅಕಾಡೆಮಿ ಅಧ್ಯಕ್ಷ ಎಲ್.ಎನ್. ಮುಕುಂದರಾಜ್ ಹಾಗೂ ರಿಜಿಸ್ಟ್ರಾರ್ ಜೆ. ಕರಿಯಪ್ಪ ಮಾಳಿಗೆ ಅವರು ಅಕಾಡೆಮಿ ಸದಸ್ಯರ ಸಮ್ಮುಖದಲ್ಲಿ ಪ್ರಶಸ್ತಿ ಪಟ್ಟಿ ಬಿಡುಗಡೆ ಮಾಡಿದರು. 'ಗೌರವ ಪ್ರಶಸ್ತಿ'ಯು ತಲಾ ₹50 ಸಾವಿರ ನಗದು ಬಹುಮಾನ ಒಳಗೊಂಡಿದೆ.

- 2025ನೇ ಸಾಲಿನ ಸಾಹಿತ್ಯ ಶ್ರೀ ಪ್ರಶಸ್ತಿಗೆ ನಿಷ್ಠ ರುದ್ರಪ್ಪ (ಬಳ್ಳಾರಿ), ವೀರೇಶ ಬಡಿಗೇರ (ಬಾಗಲಕೋಟೆ), ಸಿ.ಜಿ. ಲಕ್ಷ್ಮೀಪತಿ (ಚಿತ್ರದುರ್ಗ), ಕಂನಾಡಿಗ ನಾರಾಯಣ (ಬೆಂಗಳೂರು), ರೂಪ ಹಾಸನ (ಹಾಸನ), ಜಯರಾಮ್ ರಾಯಪುರ (ವಿಜಯವಾಡ), ಕುಮುದಾ ಸುಶೀಲ್ (ದಾವಣಗೆರೆ), ಓ. ನಾಗರಾಜು (ತುಮಕೂರು), ಬಿ.ಎಂ ಬಷೀರ್ (ಮಂಗಳೂರು) ಹಾಗೂ ಜ್ಯೋತಿ (ಬೆಂಗಳೂರು) ಆಯ್ಕೆಯಾಗಿದ್ದಾರೆ. ಈ ಪ್ರಶಸ್ತಿಯು ತಲಾ ₹25 ಸಾವಿರ ಒಳಗೊಂಡಿದೆ.
- 2024ರ ಪುಸ್ತಕ ಬಹುಮಾನಕ್ಕೆ ವಿಮರ್ಶಕರ ಅಭಿಪ್ರಾಯ ಆಧರಿಸಿ 17 ಕೃತಿಗಳನ್ನು ಆಯ್ಕೆ ಮಾಡಲಾಗಿದೆ. ಈ ಬಹುಮಾನವು ತಲಾ ₹25 ಸಾವಿರ ನಗದು ಒಳಗೊಂಡಿದೆ




**2024ರ ಪುಸ್ತಕ ಬಹುಮಾನ ಪುರಸ್ಕೃತರು**

| ಪ್ರಕಾರ | ಕೃತಿಯ ಹೆಸರು | ಲೇಖಕರು |
|---|---|---|
| ಕಾವ್ಯ | ಚಲಿಸುತ್ತಿವೆ ಚುಕ್ಕಿಗಳು | ಭಾರತೀದೇವಿ ಪಿ. |
| ಪ್ರಥಮ ಸಂಕಲನ | ಪ್ಯೂಪಾ | ಶಶಿ ತರೀಕೆರೆ |
| ಕಾದಂಬರಿ | ಇಮಾಮ್ ಸಾಹೇಬರ ಕುದುರೆ | ವೈ.ಎಸ್.ಹರಗಿ |
| ಸಣ್ಣಕತೆ | ಸರ್ವೆ ನಂಬರ್–97 | ಅನಿಲ್ ಗುನ್ನಾಪೂರ |
| ನಾಟಕ | ಗಂಧವತಿ | ಚಂದ್ರು ಕಾಳೇನಹಳ್ಳಿ |
| ಲಲಿತ ಪ್ರಬಂಧ | ಒಂದು ತಲೆ ಚವುರದ ಕಥೆ | ಶಿವರಾಜ ಬ್ಯಾಡರಹಳ್ಳಿ |
| ಪ್ರವಾಸ ಸಾಹಿತ್ಯ | ತಿರುಗಾಟ | ಮಲ್ಲಿಕಾರ್ಜುನ ಹುಲಗಬಾಳಿ |
| ಜೀವನ ಚರಿತ್ರೆ/ಆತ್ಮಕಥೆ | ಚಿಮಣಿ ಬೆಳಕಿನಿಂದ | ಎಂ.ಜಿ.ಹೆಗಡೆ |
| ಸಾಹಿತ್ಯ ವಿಮರ್ಶೆ | ಬೆಳಕು ಬೆಳೆಯುವ ಹೊತ್ತು | ಮಹಾಂತೇಶ ಪಾಟೀಲ |
| ಮಕ್ಕಳ ಸಾಹಿತ್ಯ | ಬಿಸಿ ಬಿಸಿ ಬಾತು | ರಾಜಶೇಖರ ಕುಕ್ಕುಂದಾ |
| ವಿಜ್ಞಾನ ಸಾಹಿತ್ಯ | ಪಕ್ಷಿಗಳ ವಿಸ್ಮಯ ವಿಶ್ವ | ಶ್ರೀಧರ ತುಮರಿ |
| ಮಾನವಿಕ | ಪ್ರಜಾಮಾತೆ | ಎನ್.ಎನ್. ಚಿಕ್ಕಮಾದು |
| ಸಂಶೋಧನೆ | ದಾಸೊಕ್ಕಲಿಗರು | ಹಂಪನಹಳ್ಳಿ ತಿಮ್ಮೇಗೌಡ |
| ಅನುವಾದ-1 (ಭಾರತೀಯ ಭಾಷೆಯಿಂದ ಕನ್ನಡಕ್ಕೆ ಅನುವಾದ) | ಜಾತಿ ಮತ್ತು ಲಿಂಗತ್ವ | ದು.ಸರಸ್ವತಿ |
| ಅಂಕಣ ಬರಹ/ವೈಚಾರಿಕ ಬರಹ | ನುಡಿ ಕಂಡಾಯ | ಹುಲಿಕುಂಟೆ ಮೂರ್ತಿ |
| ಲೇಖಕರ ಮೊದಲ ಸ್ವತಂತ್ರ ಕೃತಿ | ತಿದಿಯ ತುದಿಗೆ ಬೆಂಕಿಯ ಉಗುಳು | ಲಕ್ಷ್ಮಣ ಶರೆಗಾರ |
| ಸಂಕೀರ್ಣ | ನರವಾನರ | ಪ್ರದೀಪ್ ಕೆಂಜಿಗೆ |

2024ರ ವಿವಿಧ ದತ್ತಿ ಬಹುಮಾನಗಳಿಗೆ 11 ಕೃತಿಗಳು ಆಯ್ಕೆಯಾಗಿವೆ 'ಪ್ರಶಸ್ತಿ ಪ್ರದಾನ ಸಮಾರಂಭವನ್ನು ಮೈಸೂರಿನಲ್ಲಿ ಆಯೋಜಿಸಬೇಕೆಂದುಕೊಂಡಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಲಭ್ಯತೆ ಆಧರಿಸಿ ಕಾರ್ಯಕ್ರಮ ನಡೆಸಲಾಗುವುದು' ಎಂದು ಎಲ್.ಎನ್. ಮುಕುಂದರಾಜ್ ಹೇಳಿದರು.

**2024ರ ದತ್ತಿ ಬಹುಮಾನ ಪುರಸ್ಕೃತರು**

| ಪ್ರಕಾರ | ದತ್ತಿನಿಧಿ ಬಹುಮಾನ | ಕೃತಿಯ ಹೆಸರು | ಲೇಖಕರು |
|---|---|---|---|
| ಕಾದಂಬರಿ | ಚದುರಂಗ ದತ್ತಿನಿಧಿ ಬಹುಮಾನ | ಬಹುರೂಪಿ | ಪ್ರೇಮಕುಮಾರ್ ಹರಿಯಬ್ಬೆ |
| ಲಲಿತ ಪ್ರಬಂಧ | ವಿ. ಸೀತಾರಾಮಯ್ಯ ಸೋದರಿ ಇಂದಿರಾ ದತ್ತಿ ಬಹುಮಾನ | ನನ್ನೂರಿನ ಶ್ರೀಸಾಮಾನ್ಯರು | ಕಡಿದಾಳ್ ಪ್ರಕಾಶ್ |
| ಜೀವನಚರಿತ್ರೆ | ಸಿಂಪಿ ಲಿಂಗಣ್ಣ ದತ್ತಿನಿಧಿ ಬಹುಮಾನ | ಕಳೆದ ಕಾಲ ನಡೆದ ದೂರ | ನ್ಯಾ.ಶಿವರಾಜ ವಿ. ಪಾಟೀಲ |
| ಸಾಹಿತ್ಯ ವಿಮರ್ಶೆ | ಪಿ. ಶ್ರೀನಿವಾಸರಾವ್ ದತ್ತಿನಿಧಿ ಬಹುಮಾನ | ಒಳಮೀಸಲಾತಿ ಮತ್ತು ಇತರ ಲೇಖನಗಳು | ಎಚ್.ಲಕ್ಷ್ಮೀನಾರಾಯಣಸ್ವಾಮಿ |
| ಕಾವ್ಯ ಹಸ್ತಪ್ರತಿ | ಚಿ. ಶ್ರೀನಿವಾಸರಾಜು ದತ್ತಿ ಬಹುಮಾನ | ಆಕೆ ಒಂದು ಹೂವು ಮತ್ತು ಹಿಡಿ ಮಣ್ಣು | ಅಭಿಷೇಕ ಬಳೆ ಮಸರಕಲ್ |
| ಅನುವಾದ–1 | ಎಲ್. ಗುಂಡಪ್ಪ ಮತ್ತು ಶಾರದಮ್ಮ ದತ್ತಿನಿಧಿ ಬಹುಮಾನ | ಸತ್ತವರ ಸೊಲ್ಲು | ಕಾರ್ತಿಕ್ ಆರ್. |
| ಲೇಖಕರ ಮೊದಲ ಸ್ವತಂತ್ರ ಕೃತಿ | ಮಧುರಚೆನ್ನ ದತ್ತಿನಿಧಿ ಬಹುಮಾನ | ರಾಕ್ಷಸರ ನಡುವೆ ಪಯಣ | ಶೈಲಜಾ ಅಶ್ವಥ್ ಕೋಲಾರ |
| ವೈಚಾರಿಕ/ಅಂಕಣ ಬರಹ | ಬಿ.ವಿ. ವೀರಭದ್ರಪ್ಪ ದತ್ತಿನಿಧಿ ಬಹುಮಾನ | ವಾರ್ತಾಭಾರತಿ ಸಂಪಾದಕೀಯ | ಎ.ಎಸ್. ಪುತ್ತಿಗೆ |
| ಕನ್ನಡದಿಂದ ಇಂಗ್ಲಿಷ್‌ಗೆ ಅನುವಾದ | ಅಮೆರಿಕನ್ನಡ ದತ್ತಿನಿಧಿ ಬಹುಮಾನ | ಕುವೆಂಪು ಬ್ರೈಡ್ ಇನ್ ದಿ ಹಿಲ್ಸ್ | ವನಮಾಲಾ ವಿಶ್ವನಾಥ್ |
| ದಾಸ ಸಾಹಿತ್ಯ | ಜಲಜಾ ಶ್ರೀಪತಿ ಆಚಾರ್ಯ ಗಂಗೂರ್ ದತ್ತಿನಿಧಿ ಬಹುಮಾನ | ಹರಿದಾಸರ ಮುಂಡಿಗೆಗಳು | ಕಬ್ಬಿನಾಲೆ ವಸಂತ ಭಾರದ್ವಾಜ |
| ಗಜಲ್ ಕಾವ್ಯ | ನಾಡೋಜ ಡಾ.ಶಾಂತರಸ ಗಜಲ್ ಕಾವ್ಯ ದತ್ತಿ ಬಹುಮಾನ | ನೆಲ ನುಡಿದ ನಾದ | ಯು.ಸಿರಾಜ್ ಅಹಮದ್ |

## ❖ ಆದಿಕವಿ ಪಂಪ ಪ್ರತಿಷ್ಠಾನ ರಚನೆ

**ಸಂದರ್ಭ: ಬೆಂಗಳೂರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಧಾರವಾಡ ಜಿಲ್ಲೆಯ ಅಣ್ಣಿಗೇರಿಯಲ್ಲಿ ಆದಿಕವಿ ಪಂಪ ಪ್ರತಿಷ್ಠಾನ ರಚಿಸಿ ಆದೇಶ ಹೊರಡಿಸಿದೆ.**

- ಪಂಪ ಮೊದಲ ಬಾರಿಗೆ ಜಾತಿ ವ್ಯವಸ್ಥೆಯನ್ನು ವಿರೋಧಿಸಿದ ಕವಿ. 'ಮನುಷ್ಯ ಜಾತಿ ತಾನೊಂದೆ ವಲಂ' ಎಂಬ ಪಂಪವಾಣಿಯು ಇಂದಿಗೂ ಪ್ರಸ್ತುತವಾಗಿದೆ 'ವಿಕ್ರಮಾರ್ಜುನ ವಿಜಯಂ' ಕಾವ್ಯದಲ್ಲಿ ಕರ್ಣನ ಪಾತ್ರವನ್ನು ಕುಲಪದ್ಧತಿಯ ಪ್ರತಿರೋಧದ ರೂಪಕವಾಗಿ ಬಳಸಿ ಜಾತಿ ಪದ್ಧತಿಯನ್ನು ವಿರೋಧಿಸಿದ್ದರು.
- ಪಂಪ ಮಹಾಕವಿಯ ಸ್ಮಾರಕವನ್ನು ನಿರ್ಮಿಸಿ, ಪಂಪ ಭವನವನ್ನು ಉನ್ನತೀಕರಿಸಿ, ಜಾತ್ಯತೀತ, ದ್ವೇಷಾತೀತ, ಸೃಜನಶೀಲ ಕೆಲಸಗಳನ್ನು ಮಾಡಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರು ಕೋರಿದ್ದರು. ಈ ಪ್ರಸ್ತಾವದಂತೆ ಪಂಪ ಪ್ರತಿಷ್ಠಾನ ರಚಿಸಲಾಗಿದೆ ಎಂದು ಇಲಾಖೆ ತಿಳಿಸಿದೆ.
- ಬರಗೂರು ಒತ್ತಾಯದ ಫಲ ಪಂಪ ಮಹಾಕವಿಯ ಪ್ರತಿಷ್ಠಾನ ಆರಂಭಿಸಬೇಕು ಎಂದು ಸಾಹಿತಿ ಬರಗೂರು ರಾಮಚಂದ್ರಪ್ಪ ಅವರು ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಅವರನ್ನು ಭೇಟಿ ಮಾಡಿ ಒತ್ತಾಯ ಮಾಡಿದ್ದರು. ಪ್ರತಿಷ್ಠಾನ ರಚನೆಯ ಅಗತ್ಯದ ಕುರಿತು ಲೇಖನವನ್ನೂ ಬರೆದಿದ್ದರು.

## ❖ ಪೂರ್ಣ ಬಜೆಟ್ ವಿಧಾನಸಭೆ ಒಪ್ಪಿಗೆ

**ಸಂದರ್ಭ: ವಿಧಾನಸಭೆಯು 2026-27ನೇ ಸಾಲಿನ ಹಣಕಾಸು ವರ್ಷಕ್ಕಾಗಿ ₹4.67 ಲಕ್ಷ ಕೋಟಿ ಮೊತ್ತದ ಪೂರ್ಣ ಪ್ರಮಾಣದ ಬಜೆಟ್‌ಗೆ ಅನುಮೋದನೆ ನೀಡಿತು.**

- ಬಜೆಟ್ ಮೇಲಿನ ಚರ್ಚೆಗೆ ತಾವು ಉತ್ತರ ನೀಡಿದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, 2026ರ ಕರ್ನಾಟಕ ಧನವಿನಿಯೋಗ ಮಸೂದೆಯನ್ನು ಮಂಡಿಸಿದರು.
- ಬಜೆಟ್ ಮಂಡನೆಯ ವೇಳೆ ಬಜೆಟ್‌ನ ಗಾತ್ರ ₹4.48 ಲಕ್ಷ ಕೋಟಿ ಎಂದು ಉಲ್ಲೇಖಿಸಲಾಗಿತ್ತು ಧನವಿನಿಯೋಗ ಮಸೂದೆಯಲ್ಲಿ ಬಜೆಟ್ ಗಾತ್ರವನ್ನು ಸುಮಾರು ₹19,000 ಕೋಟಿಯಷ್ಟು ಹೆಚ್ಚಿಗೆ ತೋರಿಸಲಾಗಿದೆ. ಕೇಂದ್ರದ ಅನುದಾನ, ಸಹಾಯಾನುದಾನ, ಪ್ರಕೃತಿ ವಿಕೋಪಕ್ಕೆ ಪರಿಹಾರ ಎಲ್ಲವೂ ಸೇರಿ ಈ ಮೊತ್ತ ಹೆಚ್ಚಳವಾಗಿದೆ.
- ಆರ್ಥಿಕ ವರ್ಷದ ಕೊನೆಯಲ್ಲಿ ಮಂಡಿಸಲಾದ ಅಂತಿಮ ಹಾಗೂ ಕೊನೆಯ ಕಂತಿನ ₹14 ಸಾವಿರ ಕೋಟಿ ಮೊತ್ತದ ಪೂರಕ ಅಂದಾಜಿಗೂ ವಿಧಾನಸಭೆ ಒಪ್ಪಿಗೆ ಸೂಚಿಸಿತು. ಬಜೆಟ್ ಮೇಲಿನ ಚರ್ಚೆಗೆ ಮುಖ್ಯಮಂತ್ರಿ ನೀಡಿದ ಉತ್ತರ ತೃಪ್ತಕರವಾಗಿಲ್ಲ ಎಂದು ವಿರೋಧ ಪಕ್ಷಗಳ ಸದಸ್ಯರು ಸಭಾತ್ಯಾಗ ಮಾಡಿದ ವೇಳೆ ಮಸೂದೆ ಮಂಡಿಸಿ ಅನುಮೋದನೆ ಪಡೆಯಲಾಯಿತು.

## ❖ ಎಲ್‌ಜಿಬಿಟಿಕ್ಯು ಸಮುದಾಯದಲ್ಲಿ ಆತಂಕ ಮೂಡಿಸಿದ ಕೇಂದ್ರದ ನಡೆ: ಲಿಂಗತ್ವ ಅಲ್ಪ ಸಂಖ್ಯಾತರ ಹಕ್ಕು ಮೊಟಕು?

**ಸಂದರ್ಭ: ಕೇಂದ್ರ ಸರ್ಕಾರವು ಲಿಂಗತ್ವ ಅಲ್ಪ ಸಂಖ್ಯಾತರ ಕಾಯ್ದೆ-2019ಕ್ಕೆ ಕೆಲವು ಬದಲಾವಣೆಗಳನ್ನು ಮಾಡಿ, ಲಿಂಗತ್ವ ಅಲ್ಪ ಸಂಖ್ಯಾತರ (ಹಕ್ಕುಗಳ ರಕ್ಷಣೆ) ತಿದ್ದುಪಡಿ ಮಸೂದೆ-2026ಕ್ಕೆ ಲೋಕಸಭೆಯಲ್ಲಿ ಅಂಗೀಕಾರ ಪಡೆದಿದೆ. ರಾಜ್ಯಸಭೆಯಲ್ಲಿಯೂ ಅಂಗೀಕಾರ ಸಿಕ್ಕಿದೆ.**

- ಲಿಂಗತ್ವ ಅಲ್ಪಸಂಖ್ಯಾತರ ಕುರಿತ ವ್ಯಾಖ್ಯಾನವು ಅಸ್ಪಷ್ಟವಾಗಿದ್ದು, ನಿಜವಾದ ಸಂತ್ರಸ್ತರನ್ನು ಗುರುತಿಸಿ, ಅವರಿಗೆ ಕಾಯ್ದೆಯ ಪ್ರಯೋಜನಗಳನ್ನು ದೊರಕಿಸುವುದು ಅಸಾಧ್ಯವಾಗಿದೆ ತಮ್ಮ ಯಾವ ತಪ್ಪೂ ಇಲ್ಲದೇ ಜೈವಿಕ ಕಾರಣದಿಂದ ತೀವ್ರ ಸಾಮಾಜಿಕ ಸಮಸ್ಯೆಗಳನ್ನು ಎದುರಿಸುತ್ತಿರುವಂಥವರ ಹಕ್ಕುಗಳನ್ನು ಮಾತ್ರವೇ ರಕ್ಷಣೆ ಮಾಡುವುದು ಮಸೂದೆಯ ಉದ್ದೇಶ ಎಂದು ಕೇಂದ್ರವು ಪ್ರತಿಪಾದಿಸಿದೆ.

Dr. Rajkumar IAS/KAS Academy

- 2019ರ ಕಾಯ್ದೆಯ ಪ್ರಕಾರ, ಲಿಂಗತ್ವ ಅಲ್ಪ ಸಂಖ್ಯಾತರು ಎಂದರೆ, ಹುಟ್ಟಿನಿಂದ ದತ್ತವಾದ ಲಿಂಗತ್ಯಕ್ಕಿಂತ ಭಿನ್ನವಾದ ಲಿಂಗತ್ಯ ಹೊಂಗ್ಲಿರುವವರು. ಹುಟ್ಟಿದಾಗ ಗಂಡಾಗಿದ್ದು ನಂತರ ಹೆಣ್ಣಾಗಿರಬಹುದು (ಟ್ರಾನ್ಸ್ ವುಮನ್), ಹುಟ್ಟಿದಾಗ ಹೆಣ್ಣಾಗಿ ನಂತರ ಗಂಡಾಗಿರಬಹುದು (ಟ್ರಾನ್ಸ್ ಮನ್). ಅಂತರಲಿಂಗತ್ವ ಹೊಂದಿರಬಹುದು, ಇಲ್ಲವೇ ಕಿನ್ನರ್, ಹಿಜ್ರಾ, ಅರವಣೆ, ಮತ್ತು ಜೋಗತಿ-ಇಂಥ ಸಾಮಾಜಿಕ ಸಾಂಸ್ಕೃತಿಕ ಚಹರೆಗಳನ್ನು ಹೊಂದಿರುವವರು, ಲಿಂಗ ಬದಲಾವಣೆಯ ಶಸ್ತ್ರಚಿಕಿತ್ಸೆಗೆ, ಲೇಸರ್ ಥೆರಪಿ, ಹಾರ್ಮೋನ್ ಥೆರಪಿ ಇತ್ಯಾದಿಗಳಿಗೆ ಒಳಗಾಗಿರಬಹುದು ಇಲ್ಲದಿರಬಹುದು. ಎಲ್ಲರನ್ನೂ ವಿಶಾಲ ಅರ್ಥದಲ್ಲಿ ಲಿಂಗತ್ವ ಅಲ್ಪಸಂಖ್ಯಾತರು ಎಂದೇ ಗುರುತಿಸಲಾಗುತ್ತಿತ್ತು.
- 2019ರ ಕಾಯ್ದೆಯಲ್ಲಿನ ಕೆಲವು ವಿಚಾರಗಳಲ್ಲಿ ಗೊಂದಲಗಳಿದ್ದು, ಅವು ಕಾಯ್ದೆ ಜಾರಿಗೆ ಅಡ್ಡಿಯಾಗಿವೆ; ಲಿಂಗತ್ವ ಅಲ್ಪಸಂಖ್ಯಾತರು ಎಂದರೆ ಯಾರು, ಅವರನ್ನು ಹೇಗೆ ಗುರುತಿಸಲಾಗುತ್ತಿದೆ ಎನ್ನುವ ಅಂಶಗಳು ಕಾಯ್ದೆ ಜಾರಿಯಲ್ಲಿ ನಿರ್ಣಾಯಕವಾಗಿವೆ ಎಂದು ಕೇಂದ್ರವು ಹೇಳಿದೆ. ಈ ಅಂಶಗಳನ್ನು ಮಸೂದೆಯಲ್ಲಿ ಬದಲಾವಣೆ ಮಾಡಲಾಗಿದೆ. ಈ ಬದಲಾವಣೆಯ ಬಗ್ಗೆಯೇ ಲಿಂಗತ್ವ ಅಲ್ಪ ಸಂಖ್ಯಾತರು ಆಕ್ಷೇಪಣೆ ಎತ್ತಿರುವುದು.
- ಸ್ವಯಂ ಗುರುತಿಸಿಕೊಳ್ಳುವಿಕೆ ರದ್ದು: ಲಿಂಗತ್ವ ಅಲ್ಪಸಂಖ್ಯಾತರು ತಮ್ಮ ಲಿಂಗತ್ಯದ ಗ್ರಹಿಕೆಯ ಆಧಾರದ ಮೇಲೆ ಲಿಂಗತ್ವ ಅಲ್ಪ ಸಂಖ್ಯಾತರೆಂದು ಸ್ವಯಂ ಗುರುತಿಸಿಕೊಳ್ಳಲು 2019ರ ಕಾಯ್ದೆಯ ಸೆಕ್ಷನ್ 4 (2) ಅವಕಾಶ ಕಲ್ಪಿಸಿತ್ತು ತಿದ್ದುಪಡಿ ಮಸೂದೆಯಲ್ಲಿ ಈ ಅಂಶವನ್ನು ಕೈಬಿಡಲಾಗಿದೆ.
- ತಿದ್ದುಪಡಿ ಮಸೂದೆಯಲ್ಲಿ 'ಲಿಂಗತ್ವ ಅಲ್ಪ ಸಂಖ್ಯಾತರು ಎಂದರೆ ಯಾರು ಎನ್ನುವುದನ್ನು ಸೀಮಿತವಾಗಿ ವ್ಯಾಖ್ಯಾನಿಸಲಾಗಿದೆ. ಲಿಂಗತ್ಯ ಅಲ್ಪಸಂಖ್ಯಾತರು ಎಂದರೆ, ಜೈವಿಕ ಕಾರಣಗಳಿಂದ ಸಾಮಾಜಿಕ ಬಹಿಷ್ಕಾರಕ್ಕೊಳಗಾಗಿರುವ ಹಿಜ್ರಾ, ಕಿನ್ನರ್, ಅರವಾಣಿ, ಜೋಗತಿ ಮೊದಲಾದ ನಿರ್ದಿಷ್ಟ ಸಾಮಾಜಿಕ-ಸಾಂಸ್ಕೃತಿಕ ಸಮುದಾಯಗಳಿಗೆ ಸೇರಿದವರು, ಅಂತರಲಿಂಗಿಗಳು, ನಿರ್ದಿಷ್ಟ ದೈಹಿಕ ಚಹರೆಗಳನ್ನು ಹೊಂದಿರುವವರು, ಶಸ್ತ್ರಚಿಕಿತ್ಸೆಗೆ ಒಳಗಾದವರು.
- ವೈದ್ಯಕೀಯ ಮಂಡಳಿ: ಸರ್ಕಾರದ ಯೋಜನೆಗಳ ನೆರವು ಪಡೆಯಲು ಲಿಂಗತ್ವ ಅಲ್ಪ ಸಂಖ್ಯಾತರು ಗುರುತಿನ ಚೀಟಿ ಹೊಂದಿರಬೇಕು. ಅದು ಅವರ ಗುರುತಿನ ಪ್ರಾಥಮಿಕ ದಾಖಲೆಯಾಗಿದೆ. ಒಬ್ಬ ವ್ಯಕ್ತಿ ತಾನು ಲಿಂಗತ್ವ ಅಲ್ಪಸಂಖ್ಯಾತ ಎಂದು ಗುರುತಿನ ಚೀಟಿ ಪಡೆಯಲು ಅರ್ಜಿ ಸಲ್ಲಿಸಿದರೆ, 2019ರ ಕಾಯ್ದೆ ಪ್ರಕಾರ, ಜಿಲ್ಲಾಧಿಕಾರಿ ಪ್ರಮಾಣ ಪತ್ರ ನೀಡುತ್ತಿದ್ದರು. ಅದಕ್ಕೆ ಯಾವುದೇ ವೈದ್ಯಕೀಯ ತಪಾಸಣೆಯ ಅಗತ್ಯವಿರಲಿಲ್ಲ ಆದರೆ, ಈ ಅಂಶವನ್ನು 2026ರ ಮಸೂದೆಯಲ್ಲಿ ತಿದ್ದುಪಡಿ ಮಾಡಲಾಗಿದೆ.
- ಲಿಂಗತ್ವ ಅಲ್ಪ ಸಂಖ್ಯಾತರ ಗುರುತಿನ ಚೀಟಿ ನೀಡಲು ವೈದ್ಯಕೀಯ ಮಂಡಳಿ'ಯು ಅವರನ್ನು ತಪಾಸಣೆ ಮಾಡುತ್ತದೆ ಮತ್ತು ಅದರ ಆಧಾರದಲ್ಲಿ ಸರ್ಕಾರಕ್ಕೆ ಶಿಫಾರಸು ಮಾಡುತ್ತದೆ, ಜತೆಗೆ, ಲಿಂಗತ್ವ ಅಲ್ಪ ಸಂಖ್ಯಾತ ವ್ಯಕ್ತಿಯು ಲಿಂಗ ಬದಲಾವಣೆ ಶಸ್ತ್ರಚಿಕಿತ್ಸೆಗೆ ಒಳಗಾಗಿರುವುದನ್ನು ದೃಢೀಕ್ಕೆಸುವ ಪ್ರಮಾಣಪತ್ರವನ್ನು ಜಿಲ್ಲಾಧಿಕಾರಿಗೆ ಸಲ್ಲಿಸಬೇಕು (ಸೆಕ್ಷನ್ 5 (1ಎ). ಅವುಗಳನ್ನು ಪರಿಶೀಲಿಸಿ ವ್ಯಕ್ತಿಗೆ ಗುರುತಿನ ಚೀಟಿ ನೀಡಬೇಕೇ ಅಥವಾ ಬೇಡವೇ ಎನ್ನುವ ಅಂತಿಮ ನಿರ್ಧಾರವನ್ನು ಜಿಲ್ಲಾಧಿಕಾರಿಗಳು ಕೈಗೊಳ್ಳುತ್ತಾರೆ.
- ಅಪರಾಧ ವ್ಯಾಪ್ತಿ ವಿಸ್ತರಣೆ: ಲಿಂಗತ್ವ ಅಲ್ಪ ಸಂಖ್ಯಾತರನ್ನು ಒಲ್ಲದ ಕೆಲಸಕ್ಕೆ ಒಲವಂತಪಡಿಸುವುದು, ಸಾರ್ವಜನಿಕ ಸ್ಥಳ ಪ್ರವೇಶಿಸುವುದಕ್ಕೆ ಅಡ್ಡಿಪಡಿಸುವುದು, ಮನೆ/ಹಳ್ಳಿ ತೊರೆಯುವಂತೆ ಮಾಡುವುದು, ದೈಹಿಕ, ಮಾನಸಿಕ, ಲೈಂಗಿಕ ಕಿರುಕುಳ ನೀಡುವುದು ಇತ್ಯಾದಿಗಳನ್ನು ಅಪರಾಧ ಎಂದು ಪರಿಗಣಿಸಿ, ಶಿಕ್ಷೆ ವಿಧಿಸುವ ನಿಬಂಧನೆಗಳನ್ನು 2019ರ ಕಾಯ್ದೆಯು (ಸೆಕ್ಷನ್ 18) ಒಳಗೊಂಡಿದೆ. ಲಿಂಗತ್ವ ಅಲ್ಪಸಂಖ್ಯಾತರಿಗೆ ಕಿರುಕುಳ ನೀಡಿದರೆ, ಅದರ ಸ್ವರೂಪವನ್ನು ಆಧರಿಸಿ ಅವರಿಗೆ 6 ತಿಂಗಳಿನಿಂದ ಎರಡು ವರ್ಷದವರೆಗೆ ಜೈಲು ಶಿಕ್ಷೆ ಮತ್ತು ದಂಡ ವಿಧಿಸಲು ಕಾಯ್ದೆ ಅವಕಾಶ ನೀಡಿದೆ.

- ತಿದ್ದುಪಡಿ ಮಸೂದೆಯಲ್ಲಿ ಸೆಕ್ಷನ್ 18ಕ್ಕೆ ನಾಲ್ಕು ಉಪನಿಯಮಗಳನ್ನು ಸೇರಿಸಿ ಅಪರಾಧದ ವ್ಯಾಪ್ತಿಯನ್ನು ವಿಸ್ತರಿಸಲಾಗಿದೆ. ಲಿಂಗತ್ವ ಅಲ್ಪಸಂಖ್ಯಾತರು ಯಾವುದೇ ವಯಸ್ಕನನ್ನು/ಮಗುವನ್ನು ಬಲವಂತ ಆಮಿಷ ಪ್ರಲೋಭನೆ, ವಂಚನೆ, ಪ್ರಭಾವದಿಂದ ಅವರ ಒಪ್ಪಿಗೆ ಇಲ್ಲದೆಯೇ ಶಸ್ತ್ರಚಿಕಿತ್ಸೆ/ಹಾರ್ಮೋನ್ ಬದಲಾವಣೆ ಮೂಲಕ ಲಿಂಗತ್ವ ಅಲ್ಪಸಂಖ್ಯಾತರ ಗುರುತನ್ನು ಆಳವಡಿಸಿಕೊಳ್ಳುವಂತೆ ಒತ್ತಾಯಿಸಿದರೆ, ಅದನ್ನು ಅಪರಾಧ ಎಂದು ವರ್ಗೀಕರಿಸಲಾಗಿದೆ ಇದಕ್ಕೆ. ಅಪರಾಧದ ಸ್ವರೂಪವನ್ನು ಆಧರಿಸಿ ₹1 ಲಕ್ಷದಿಂದ ಆರಂಭಿಸಿ ₹5 ಲಕ್ಷದವರೆಗೆ ದಂಡ ಮತ್ತು ಐದು ವರ್ಷಗಳಿಂದ ಜೀವಿತಾವಧಿವರೆಗೆ ಜೈಲು ಶಿಕ್ಷೆ ವಿಧಿಸಲು ಈ ಉಪನಿಯಮಗಳು ಅವಕಾಶ ಕಲ್ಪಿಸುತ್ತವೆ.
- ಕಾಂಗ್ರೆಸ್, ಎಡಪಕ್ಷಗಳು ಮಾನವ ಹಕ್ಕು ಸಂಘಟನೆಗಳು ಮಸೂದೆಯ ಬಗ್ಗೆ, ಕಳವಳ ವ್ಯಕ್ತಪಡಿಸಿವೆ. ದಶಕಗಳ ಹೋರಾಟದಿಂದ ತಾವು ಪಡೆದಿದ್ದ ಹಕ್ಕುಗಳನ್ನು ಕಳೆದುಕೊಳ್ಳುವ ಸ್ಥಿತಿ ಉಂಟಾಗಿದ್ದು ಮಸೂದೆಯನ್ನು ವಾಪಸ್ ಪಡೆಯಬೇಕು ಎಂದು ಲಿಂಗತ್ವ ಅಲ್ಪ ಸಂಖ್ಯಾತ ಸಂಘಟನೆಗಳು ಒತ್ತಾಯಿಸಿವೆ.

**<u>ನಲ್ಸಾ v/s ಭಾರತ ಸರ್ಕಾರ</u>**

- ಲಿಂಗತ್ವ ಅಲ್ಪ ಸಂಖ್ಯಾತರನ್ನು ಅಧಿಕೃತವಾಗಿ ಗುರುತಿಸಲು ಕಾರಣವಾಗಿದ್ದು ನಲ್ಸಾ ಮತ್ತು ಭಾರತ ಸರ್ಕಾರದ ನಡುವಿನ ಪ್ರಕರಣಕ್ಕೆ ಸಂಬಂಧಿಸಿ ಸುಪ್ರೀಂ ಕೋರ್ಟ್ 2014ರಲ್ಲಿ ನೀಡಿದ್ದ ತೀರ್ಪು ಈ ತೀರ್ಪು ಎರಡು ಮುಖ್ಯ ಅಂಶಗಳನ್ನು ಒಳಗೊಂಡಿದೆ.
- ಒಂದು, ಹೆಣ್ಣು, ಗಂಡು ಇದ್ದಂತೆ ಲಿಂಗತ್ಯ ಅಲ್ಪಸಂಖ್ಯಾತರು ತೃತೀಯ ಲಿಂಗಿಗಳಾಗಿದ್ದು, ಅವರಿಗೆ ಸಂವಿಧಾನದ ಎಲ್ಲ ಮೂಲಭೂತ ಹಕ್ಕುಗಳೂ ಇವೆ. ಎರಡು, ಒಬ್ಬ ವ್ಯಕ್ತಿ ತನ್ನನ್ನು ತಾನು ಹೆಣ್ಣು, ಗಂಡು, ಲಿಂಗತ್ವ ಅಲ್ಪಸಂಖ್ಯಾತ ಎಂದು ಸ್ವಯಂ ಗುರುತಿಸಿಕೊಳ್ಳಬಹುದು.
- ಲಿಂಗತ್ವ ಅಲ್ಪಸಂಖ್ಯಾತರ ಹಕ್ಕುಗಳನ್ನು ಖಾತರಿಪಡಿಸುವುದಕ್ಕಾಗಿ ಮತ್ತು ಅವರ ಅಭ್ಯುದಯಕ್ಕಾಗಿ ಸೂಕ್ತ ಕಾನೂನು ರೂಪಿಸುವಂತೆಯೂ ಸುಪ್ರೀಂ ಕೋರ್ಟ್ ತನ್ನ ತೀರ್ಪಿನಲ್ಲಿ ಸರ್ಕಾರಕ್ಕೆ ಸೂಚಿಸಿತ್ತು. ಲಿಂಗತ್ವ ಅಲ್ಪಸಂಖ್ಯಾತರ ಕಾಯ್ದೆ-2019 ಅಸ್ತಿತ್ವಕ್ಕೆ ಬರಲು ಇದೇ ಪ್ರಮುಖ ಕಾರಣವಾಗಿತ್ತು.


ವಿರೋಧ ಮಾಡುವವರ ವಾದವೇನು?

- ಮಸೂದೆಯು ಸುಪ್ರೀಂ ಕೋರ್ಟ್‌ನ ತೀರ್ಪನ್ನು ಉಲ್ಲಂಘಿಸುತ್ತದೆ, ಅಂತರರಾಷ್ಟ್ರೀಯ ಕಾನೂನಿನ ಮಾನದಂಡಗಳನ್ನು ನಿರ್ಲಕ್ಷಿಸುತ್ತದೆ ಮತ್ತು ಲಿಂಗತ್ವ ಅಲ್ಪಸಂಖ್ಯಾತ ಸಂಘಟನೆಗಳ ಆಶಯಕ್ಕೆ ವಿರುದ್ಧವಾಗಿದೆ
- ಸ್ವಯಂ ಗುರುತಿಸುವಿಕೆ ರದ್ದುಪಡಿಸಿರುವುದು ಲಿಂಗತ್ವ ಅಲ್ಪಸಂಖ್ಯಾತರ ಮೂಲಭೂತ ಹಕ್ಕಿನ ಉಲ್ಲಂಘನೆಯಾಗಿದೆ. ಗುರುತಿನ ಚೀಟಿ ಪಡೆಯಲು ಅವರು ಸಾಮಾಜಿಕ, ಆರ್ಥಿಕ ಸಂಕಷ್ಟ ಅನುಭವಿಸುವ ಜತೆಗೆ ದೈಹಿಕ ಪರೀಕ್ಷೆಯ ಮುಜುಗರ, ಆಡಳಿತಾತ್ಮಕ ಕಿರುಕುಳವನ್ನೂ ಎದುರಿಸಬೇಕು
- ಲಿಂಗತ್ವ ಅಲ್ಪಸಂಖ್ಯಾತರ ವ್ಯಾಖ್ಯಾನವು ಕೇವಲ ಜೈವಿಕ ಚಹರೆಗಳಿಗೆ ಸೀಮಿತವಾಗಿದೆ. ನಿರ್ದಿಷ್ಟ ಸಾಮಾಜಿಕ, ಸಾಂಸ್ಕೃತಿಕ ಗುಂಪುಗಳಿಗೆ ಹೊರತಾದವರು, ವಿಭಿನ್ನ ಸ್ವರೂಪದ ಲಿಂಗತ್ವ ಅಲ್ಪಸಂಖ್ಯಾತರನ್ನು ಮಸೂದೆ ಒಳಗೊಂಡಿಲ್ಲ. ಮಸೂದೆ ಕಾಯ್ದೆಯಾದರೆ, ಅವರೆಲ್ಲ ತಮ್ಮ ಗುರುತನ್ನು ಕಳೆದುಕೊಂಡು, ಸಮುದಾಯದಿಂದ ಹೊರಗುಳಿಯಬೇಕಾಗುತ್ತದೆ
- ಮಸೂದೆಯು ಲಿಂಗತ್ವ ಅಲ್ಪಸಂಖ್ಯಾತರಿಗೆ ಸಂವಿಧಾನವು ಖಾತರಿಪಡಿಸಿರುವ ಘನತೆ, ಸ್ವಾಯತ್ತೆ ಮತ್ತು ರಕ್ಷಣೆಯನ್ನು ಕುಗ್ಗಿಸುತ್ತದೆ. 2019ರ ಕಾಯ್ದೆಯು ಸಮುದಾಯಕ್ಕೆ ನೀಡಿದ್ದ ಕೆಲವು ಹಕ್ಕುಗಳನ್ನು ತಿದ್ದುಪಡಿ ಮಸೂದೆಯು ಕಸಿದುಕೊಳ್ಳುತ್ತದೆ ಮತ್ತು ಅದರ ಉದ್ದೇಶವನ್ನೇ ಬುಡಮೇಲು ಮಾಡುತ್ತದೆ.
- ಮಸೂದೆಯ ಉದ್ದೇಶದಲ್ಲಿ 'ನಿಜವಾದ ಸಂತ್ರಸ್ತರು ಮತ್ತು ರಕ್ಷಣೆಯ ನಿಜವಾದ ಅಗತ್ಯ ಇರುವವರು' ಎಂದಿದೆ. ಆದರೆ, ಇದು ಅಸ್ಪಷ್ಟವಾಗಿದ್ದು, ಯಾವ ಮಾನದಂಡಗಳ ಆಧಾರದಲ್ಲಿ ಲಿಂಗತ್ವ ಅಲ್ಪಸಂಖ್ಯಾತರನ್ನು ವರ್ಗೀಕರಿಸಲಾಗಿದೆ ಎಂಬುದರ ಬಗ್ಗೆ ಸ್ಪಷ್ಟತೆಯಿಲ್ಲ
- ಲಿಂಗತ್ವ ಅಲ್ಪಸಂಖ್ಯಾತರನ್ನು ಅಪರಾಧೀಕರಣಗೊಳಿಸಲಾಗಿದೆ. ಲಿಂಗತ್ವ ಅಲ್ಪಸಂಖ್ಯಾತರಾಗಲು ವ್ಯಕ್ತಿಗಳನ್ನು/ಮಕ್ಕಳನ್ನು ಬಲವಂತಪಡಿಸುವ, ಆಮಿಷ ಒಡ್ಡುವಂಥ ನಡವಳಿಕೆಗಳು ಭಾರತದಲ್ಲಿ ಒಂದು ಸಾಮಾಜಿಕ ಮಾದರಿಯಾಗಿ ಅಸ್ತಿತ್ವದಲ್ಲಿವೆ ಎನ್ನುವುದಕ್ಕೆ ಯಾವುದೇ ವಿಶ್ವಾಸಾರ್ಹ ಪುರಾವೆಗಳಿಲ್ಲ. ಈ ನಿಬಂಧನೆಗಳು ದುರುಪಯೋಗವಾಗುವ ಸಂಭವ ಹೆಚ್ಚಾಗಿದೆ
- ಭಾರತೀಯ ಕಾನೂನುಗಳನ್ನು ವಸಾಹತುಶಾಹಿ ಧೋರಣೆಗಳಿಂದ ಮುಕ್ತಗೊಳಿಸುವ ಭಾರತದ ಆಶಯಕ್ಕೆ ಈ ಮಸೂದೆ ವಿರುದ್ಧವಾಗಿದೆ



## ❖ ಪರಿಷ್ಕೃತ ಉಡಾನ್ ಯೋಜನೆ ₹28,840 ಕೋಟಿ ಎತ್ತಿಟ್ಟ ಕೇಂದ್ರ

**ಸಂದರ್ಭ: ಪ್ರಾದೇಶಿಕ ವಿಮಾನ ಸಂಪರ್ಕವನ್ನು ಬಲಪಡಿಸುವ ಸಲುವಾಗಿ 'ಪರಿಷ್ಕೃತ ಉಡಾನ್ ಯೋಜನೆ'ಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ.**

- ನಾಲ್ಕು ಕೋಟಿ ಪ್ರಯಾಣಿಕರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಒಟ್ಟು ₹28,840 ಕೋಟಿ ವೆಚ್ಚದಲ್ಲಿ 2026-27ನೇ ಹಣಕಾಸು ವರ್ಷದಿಂದ 2035-36ರವರೆಗೆ ಈ ಯೋಜನೆ ಜಾರಿಗೊಳಿಸಲಾಗುವುದು ಎಂದು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.
- ಈ ಯೋಜನೆಯಡಿ, ಪ್ರಾದೇಶಿಕ ಸಂಪರ್ಕ ಹೆಚ್ಚಿಸಲು ಪ್ರಸ್ತುತ ಬಳಕೆಯಲ್ಲಿಲ್ಲದ 100 ಏರ್ ಸ್ಟ್ರಿಪ್‌ಗಳನ್ನು ವಿಮಾನ ನಿಲ್ದಾಣಗಳನ್ನಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. ಇದಕ್ಕೆ ಮುಂದಿನ ಎಂಟು ವರ್ಷಗಳಲ್ಲಿ ₹12,159 ಕೋಟಿ ವೆಚ್ಚ ಮಾಡಲಾಗುವುದು ಎಂದು ಅವರು ಮಾಹಿತಿ ನೀಡಿದರು.

- ಕೇವಲ ಪ್ರಾದೇಶಿಕ ಸಂಪರ್ಕ ಯೋಜನೆ ಅಡಿಯಲ್ಲಿ ಬರುವ ವಿಮಾನ ನಿಲ್ದಾಣಗಳಿಗೆ ಅಧಿಕ ನಿರ್ವಹಣಾ ವೆಚ್ಚ ತಗಲುತ್ತಿದೆ ಆದರೆ, ಈ ನಿಲ್ದಾಣಗಳಿಗೆ ಸೀಮಿತ ಆದಾಯ ಇದೆ. ಹೀಗಾಗಿ ಈ ಯೋಜನೆಯಡಿ ವಿಮಾನ ನಿಲ್ದಾಣಗಳಿಗೆ ಕಾರ್ಯಾಚರಣೆ ಮತ್ತು ನಿರ್ವಹಣೆ ಬೆಂಬಲ ನೀಡಲಾಗುತ್ತದೆ ಪ್ರತಿ ವಿಮಾನ ನಿಲ್ದಾಣಕ್ಕೆ ವರ್ಷಕ್ಕೆ ಗರಿಷ್ಠ ₹3.06 ಕೋಟಿ ಮತ್ತು ಪ್ರತಿ ಹಲಿಪೋರ್ಟ್/ವಾಟರ್ ಏರೋಡೋಮ್ ಗೆ ವರ್ಷಕ್ಕೆ ₹90 ಲಕ್ಷದಂತೆ ಮೂರು ವರ್ಷ ನೆರವು ನೀಡಲಾಗುತ್ತದೆ 441 ನಿಲ್ದಾಣಗಳಿಗಾಗಿ ₹2,577 ಕೋಟಿ ಮೀಸಲಿಡಲಾಗಿದೆ ಎಂದರು.
- ಗುಡ್ಡಗಾಡು, ದೂರದ ಪ್ರದೇಶಗಳು, ದ್ವೀಪಗಳು ಮತ್ತು ಅಭಿವೃದ್ಧಿ ಆಕಾಂಕ್ಷಿ ಜಿಲ್ಲೆಗಳಲ್ಲಿ ತಲಾ ₹15 ಕೋಟಿ ವೆಚ್ಚದಲ್ಲಿ 200 ಹೆಲಿಪ್ಯಾಡ್ ಗಳನ್ನು ನಿರ್ಮಿಸಲಾಗುವುದು ಇದಕ್ಕೆ ಎಂಟು ವರ್ಷಗಳಲ್ಲಿ ₹3,661 ಕೋಟಿ ವೆಚ್ಚ ಮಾಡಲಾಗುವುದು ಎಂದು ಅವರು ತಿಳಿಸಿದರು.
- ವಿಮಾನಯಾನ ಸಂಸ್ಥೆಗಳು ನಿಗದಿತ ಮಾರ್ಗಗಳಲ್ಲಿ ಕಾರ್ಯನಿರ್ವಹಿಸಲು ಕಾರ್ಯಸಾಧ್ಯತಾ ಅಂತರ ನಿಧಿ (ವಿಜಿಎಫ್) ನೀಡಲಾಗು ವುದು ಮುಂದಿನ 10 ವರ್ಷಗಳಲ್ಲಿ ವಿಮಾನಯಾನ ಸಂಸ್ಥೆಗಳಿಗೆ ₹10.043 ಕೋಟಿ ನಿಧಿ ನೀಡಲು ಉದ್ದೇಶಿಸಲಾಗಿದೆ ಎಂದು ಅವರು ವಿವರ ನೀಡಿದರು.
- ದೂರದ ಮತ್ತು ದುರ್ಗಮ ಭೂಪ್ರದೇಶಗಳಲ್ಲಿ ಕಾರ್ಯಾಚರಣೆ ನಡೆಸಲು ಅಗತ್ಯವಿರುವ ಸಣ್ಣ ವಿಮಾನಗಳು ಮತ್ತು ಹೆಲಿಕಾಪ್ಟರ್‌ಗಳ ಕೊರತೆ ನೀಗಿಸಲು ಪವನ್ ಹನ್ಸ್ ಸಂಸ್ಥೆಗೆ ಎರಡು 'ಎಚ್‌ಎಎಲ್ ಧ್ರುವ' ಹೆಲಿಕಾಪ್ಟರ್‌ಗಳನ್ನು ಮತ್ತು ಅಲಯನ್ಸ್ ಏರ್ ಸಂಸ್ಥೆಗೆ ಎರಡು 'ಎಚ್‌ಎಎಲ್ ಡಾರ್ನಿಯರ್' ವಿಮಾನಗಳನ್ನು ಖರೀದಿಸಲು ಉದ್ದೇಶಿಸಲಾಗಿದೆ.

**ಐವಿಎಫ್‌ಆರ್‌ಟಿ ಮುಂದುವರಿಕೆ:**

- ವಲಸೆ, ವೀಸಾ, ವಿದೇಶಿಯರ ನೋಂದಣಿ ಮತ್ತು ಟ್ರ್ಯಾಕಿಂಗ್ (ಐವಿಎಫ್‌ಆರ್‌ಟಿ) ಯೋಜನೆಯನ್ನು 2031ರ ಮಾರ್ಚ್ ಅಂತ್ಯದವರೆಗೆ ಮುಂದುವರಿಸಲು ಕೇಂದ್ರ ಸಂಪುಟ ಒಪ್ಪಿಗೆ ನೀಡಲಾಗಿದೆ. ಇದಕ್ಕಾಗಿ ₹1,800 ಕೋಟಿ ಮೀಸಲಿಡಲಾಗಿದೆ ಎಂದರು.

## ❖ ಪರಮಾಣು ದುರಂತ: ಸಂಯಮದಿಂದ ಇರಲು ಸಲಹೆ: ಅಣ್ವಸ್ತ್ರ ಬಲ ಹೆಚ್ಚಿಸಿಕೊಂಡ ಇಸ್ರೇಲ್

**ಸಂದರ್ಭ: ಕ್ರೀನ್ಸ್ಲ್ಯಾಂಡ್ (ಎಪಿ) ಇರಾನ್ ಪರಮಾಣು ಕಾರ್ಯಕ್ರಮವನ್ನು ನಾಶಮಾಡುವ ನಿಟ್ಟಿನಲ್ಲಿ ಯುದ್ಧ ಮುಂದುವರಿಸಿರುವುದಾಗಿ ಇಸ್ರೇಲ್ ವಾದಿಸುತ್ತಿದೆ ಆದರೆ, ಸ್ವತಃ ಇಸ್ರೇಲ್ ತನ್ನ ಅಣ್ವಸ್ತ್ರ ಬಲವನ್ನು ಎರಡು ಪಟ್ಟು ಹೆಚ್ಚಿಸಿಕೊಂಡಿದೆ ಎಂಬ ವಿಶ್ಲೇಷಣೆಗಳು ನಡೆಯುತ್ತಿವೆ.**

- 'ಇಸ್ರೇಲ್ ಅಪಾರ ಪ್ರಮಾಣದಲ್ಲಿ ಅಣ್ವಸ್ತ್ರ ಸಂಗ್ರಹ ಹೊಂದಿದೆ. ಇದು ಪರಮಾಣು ರಾಜಕೀಯ ಜಗತ್ತಿನ ಅತಿ ಕೆಟ್ಟ ರಹಸ್ಯ, 1950ರ ದಶಕದಿಂದಲೇ ಇಸ್ರೇಲ್ ಪರಮಾಣು ಶಸ್ತ್ರಾಸ್ತ್ರಗಳ ಅಭಿವೃದ್ಧಿಯಲ್ಲಿ ತೊಡಗಿದ್ದು, 1960ರ ವೇಳೆಗಾಗಲೇ ಸಂಪೂರ್ಣ ಅಣ್ವಸ್ತ್ರ ಸಾಮರ್ಥ್ಯ ಹೊಂದಿದ ದೇಶವಾಗಿತ್ತು' ಎಂದು ಮೂಲಗಳು ಹೇಳಿವೆ.
- ಇಸ್ರೇಲ್ ತನ್ನ ಅಣ್ವಸ್ತ್ರ, ಬಲವನ್ನು ಇದುವರೆಗೆ ಖಚಿತಪಡಿಸಿಲ್ಲ. ತಳ್ಳಿಹಾಕಿಯೂ ಇಲ್ಲ. ಅಣ್ವಸ್ತ್ರ ನಿಯಂತ್ರಣ ಸಂಸ್ಥೆಗಳ ಲೆಕ್ಕಾಚಾರದಂತೆ ಇಸ್ರೇಲ್ ಬಳಿ 80ರಿಂದ 90ರಷ್ಟು ಅಣ್ವಸ್ತ್ರಗಳಿವೆ
- ಪರಮಾಣು ದುರಂತವನ್ನು ತಪ್ಪಿಸಲು ರಾಷ್ಟ್ರಗಳು ಸಂಯಮ ದಿಂದ ಇರಬೇಕು' ಎಂದು ಅಂತರರಾಷ್ಟ್ರೀಯ ಅಣುಶಕ್ತಿ ಸಂಸ್ಥೆ ಕರೆ ನೀಡಿದೆ. 2015ರಲ್ಲಿ ಇರಾನ್ ಪರಮಾಣು ಒಪ್ಪಂದಕ್ಕೆ ಸಹಿ ಹಾಕಿತು. ಅಮೆರಿಕ, ರಷ್ಯಾ, ಚೀನಾ, ಫ್ರಾನ್ಸ್, ಬ್ರಿಟನ್ ಮತ್ತು ಜರ್ಮನಿ ಜತೆಗೆ, ಪರಮಾಣು ಕಾರ್ಯಕ್ರಮದ ಜಂಟಿ ಸಮಗ್ರ ಕ್ರಿಯಾ ಯೋಜನೆಗೆ ಸಹಿ ಹಾಕಿದೆ.'

## ❖ 'ವಂದೇ ಮಾತರಂ' ಹಾಡಲೇಬೇಕು ಎಂಬ ಕಡ್ಡಾಯವಿಲ್ಲ: ಸುಪ್ರೀಂ ಕೋರ್ಟ್

**ಸಂದರ್ಭ: ಸರ್ಕಾರದ ಎಲ್ಲ ಅಧಿಕೃತ ಕಾರ್ಯಕ್ರಮಗಳಲ್ಲಿ, ಶಾಲೆಗಳಲ್ಲಿ ರಾಷ್ಟ್ರೀಯ ಗೀತೆಯಾದ 'ವಂದೇ ಮಾತರಂ' ಹಾಡುವ ಕುರಿತು ಕೇಂದ್ರ ಗೃಹ ಸಚಿವಾಲಯ ಇದೇ ಜನವರಿಯಲ್ಲಿ ಹೊರಡಿಸಿದ್ದ ಸುತ್ತೋಲೆಯ ವಿರುದ್ಧ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಬುಧವಾರ ವಜಾ ಮಾಡಿತು 'ವಂದೇ ಮಾತರಂ' ಹಾಡುವುದು ಕಡ್ಡಾಯ ಎಂದು ಹೇಳಲಾಗಿಲ್ಲ' ಎಂದು ನ್ಯಾಯಾಲಯ ಹೇಳಿತು.**

- ಭಾರತದ ಮುಖ್ಯ ನ್ಯಾಯಮೂರ್ತಿ (ಸಿಜೆಐ) ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿಗಳಾದ ಜಾಯ್ ಮಲ್ಯಾ ಬಾಗ್ಚಿ ಮತ್ತು ವಿಪುಲ್ ಎಂ. ಪಂಚೋಲಿ ಅವರ ಪೀಠವು ಅರ್ಜಿಯ ವಿಚಾರಣೆ ನಡೆಸಿತು. ಮೊಹಮ್ಮದ್ ಸೈಯದ್ ನೂರಿ ಎಂಬುವರು ಅರ್ಜಿ ಸಲ್ಲಿಸಿದ್ದರು. ಅರ್ಜಿದಾರರ ಪರ ಹಿರಿಯ ವಕೀಲ ಸಂಜಯ್ ಹೆಗಡೆ ವಾದಿಸಿದರು.
- 'ವಂದೇ ಮಾತರಂ' ಹಾಡಲೇಬೇಕು ಎನ್ನುವುದು ಕಡ್ಡಾಯ ಎಂಬಂತೆ ಸುತ್ತೋಲೆಯಲ್ಲಿ ಎಲ್ಲೂ ಇಲ್ಲ. ಒಂದು ವೇಳೆ ಹಾಡಲಿಲ್ಲ ಎಂದಾದರೆ, ಅದಕ್ಕೆ ಶಿಕ್ಷೆಯನ್ನೂ ಹೇಳಲಾಗಿಲ್ಲ ಆದ್ದರಿಂದ ಇಲ್ಲದೇ ಇರುವ ಆತಂಕವನ್ನು ಸೃಷ್ಟಿಸಿ ಕೊಂಡು ಅರ್ಜಿ ಸಲ್ಲಿಸಲಾಗಿದೆ' ಎಂದು ನ್ಯಾ ಪಂಚೋಲಿ ಅಭಿಪ್ರಾಯಪಟ್ಟರು
- ಸುತ್ತೋಲೆಯಲ್ಲಿ ಹಾಡ ಬಹುದು ಎಂದಿದೆ. ಇದು ಸಲಹೆಯಷ್ಟೆ ಹಾಡದಿದ್ದಲ್ಲಿ ಯಾರಾದರೂ ಶಿಕ್ಷೆ ನೀಡಿದರೆ ನಮ್ಮ ಬಳಿ ಬನ್ನಿ ಎಂದರು.

**<u>ತಾರತಮ್ಯಕ್ಕೆ ದಾರಿ ಮಾಡಿಕೊಡುತ್ತದೆ'</u>**

- ಸುತ್ತೋಲೆಯಲ್ಲಿ ಕಡ್ಡಾಯವಾಗಿ ವಂದೇಮಾತರಂ' ಹಾಡಬೇಕು ಎಂದಿಲ್ಲ. ಆದರೂ, ಈ ಸಲಹೆಯು ಈ ಹಾಡನ್ನು ಹಾಡಲೇಬೇಕು ಎಂಬ ಒತ್ತಡ ಸೃಷ್ಟಿಸು ತ್ತದೆ ಒಂದು ವೇಳೆ ಹಾಡು ಹಾಡಲಿಲ್ಲ ಎಂದರೆ ಹಾಡದವರಿಗೆ ಬೆದರಿಕೆ ಒಡ್ಡಲಾಗುತ್ತದೆ ತಾರತಮ್ಯದಿಂದ ನೋಡಲಾಗುತ್ತದೆ' ಎಂದು ವಕೀಲ ಸಂಜಯ್ ಹೆಗಡೆ ವಾದಿಸಿದರು.
- ರಾಷ್ಟ್ರೀಯ ಗೀತೆಯನ್ನು ಗೌರವಿಸಿ ಎಂದು ಯಾರಾದರೂ ಸಲಹೆ ನೀಡಬೇಕೇ' ಎಂದು ಬೇರೊಂದು ಪ್ರಕರಣ ಸಂಬಂಧ ಇದೇ ಕೊಠಡಿಯಲ್ಲಿದ್ದ ಹಾಜರಿದ್ದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಹೇಳಿದರು.

## ❖ 'ಪರವಾನಗಿ ರದ್ದುಗೊಂಡ ಎನ್‌ಜಿಒ ಸ್ವತ್ತು ನಿರ್ವಹಣೆಗೆ ಹೊಸ ಪ್ರಾಧಿಕಾರ'

**ಸಂದರ್ಭ: ವಿದೇಶಗಳಿಂದ ದೇಣಿಗೆ ಪಡೆಯುವ ಎನ್‌ಜಿಒಗಳ ಮೇಲಿನ ಮೇಲ್ವಿಚಾರಣೆಯನ್ನು ಮತ್ತಷ್ಟು ಬಿಗಿಗೊಳಿಸುವುದು ಹಾಗೂ ಪರವಾನಗಿ ರದ್ದುಗೊಂಡ ಎನ್‌ಜಿಒಗಳ ಸ್ವತ್ತುಗಳ ಜಪ್ತಿ ಮತ್ತು ನಿರ್ವಹಣೆಗೆ ಹೊಸ ಪ್ರಾಧಿಕಾರ ರಚನೆ ಸೇರಿ ಹಲವು ಅವಕಾಶಗಳನ್ನು ಒಳಗೊಂಡ ತಿದ್ದುಪಡಿ ಮಸೂದೆಯನ್ನು ಲೋಕಸಭೆಯಲ್ಲಿ ಬುಧವಾರ ಮಂಡಿಸಲಾಯಿತು.**

- ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರಾಯ್ ಅವರು 'ವಿದೇಶಿ ದೇಣಿಗೆ (ನಿಯಂತ್ರಣ) ತಿದ್ದುಪಡಿ ಮಸೂದೆ-2026 ಅನ್ನು ಲೋಕಸಭೆಯಲ್ಲಿ ಮಂಡಿಸಿದರು.
- ವಿದೇಶಗಳಿಂದ ಪಡೆಯುವ ದೇಣಿಗೆಗಳ ಮೇಲ್ವಿಚಾರಣೆ, ನಿರ್ವಹಣೆಗೆ 'ಉದ್ದೇಶಿತ ಪ್ರಾಧಿಕಾರ'ದ ಮೂಲಕ ಸಮಗ್ರ ಚೌಕಟ್ಟು ರೂಪಿಸುವ ಅವಕಾಶ ಗಳನ್ನು ಈ ಮಸೂದೆ ಒಳಗೊಂಡಿದೆ ಎಂದು ಸಚಿವ ರಾಯ್ ಸದನಕ್ಕೆ ತಿಳಿಸಿದರು.
- 'ಎನ್‌ಜಿಒಗಳ ನೋಂದಣಿರನ್ನು ಗೊಂಡ ಅಥವಾ ಒಪ್ಪಿಸಿದ ಸಂದರ್ಭ ಗಳಲ್ಲಿ ಅವುಗಳು ಪಡೆಯು ತ್ತಿದ್ದ ವಿದೇಶಿ ದೇಣಿಗೆಗಳು ಹಾಗೂ ಅವುಗಳಿಂದ ಸೃಜಿಸಲಾದ ಆಸ್ತಿಗಳ ನಿರ್ವಹಣೆಗೆ ಸಂಬಂಧಿಸಿ ಕೆಲ ಕಾನೂನಾತ್ಮಕ ನ್ಯೂನತೆ ಗಳಿರುವುದನ್ನು ಗುರುತಿಸ ಲಾಗಿದೆ' ಎಂದೂ ಅವರು ಹೇಳಿದರು.
- 'ಪೂರ್ವಾನುಮತಿ ಪಡೆದ ಬಳಿಕ ವಿದೇಶಿ ದೇಣಿಗೆಗಳನ್ನು ಸ್ವೀಕರಿಸಲು ಹಾಗೂ ಬಳಕೆ ಮಾಡಿಕೊಳ್ಳುವುದಕ್ಕೆ ಕಾಲಮಿತಿ ನಿಗದಿ ಮಾಡುವ ಅವಕಾಶ ಗಳನ್ನು ಈ ಮಸೂದೆ ಒಳ ಗೊಂಡಿದೆ ಪರವಾನಗಿ ಅವಧಿ ಮುಕ್ತಾಯಗೊಂಡ ಸಂದರ್ಭದಲ್ಲಿ ಎನ್‌ಜಿಒಗಳ ಕಾರ್ಯಾಚರಣೆ

Dr Rajkumar IAS/KAS Academy

ಸಮಾಪ್ತಿಗೊಳಿಸುವ ಪ್ರಕ್ರಿಯೆ ನೆರವೇರಿಸುವುದು, ನವೀಕರಣ, ದಂಡಗಳನ್ನು ತರ್ಕಬದ್ಧಗೊಳಿಸುವುದು ಹಾಗೂ ತನಿಖೆ ಆರಂಭಕ್ಕೂ ಮುನ್ನ ಕೇಂದ್ರ ಸರ್ಕಾರದ ಅನುಮೋದನೆ ಪಡೆಯಬೇಕು ಎಂಬ ಹಲವಾರು ಅವಕಾಶಗಳು ಕೂಡ ಮಸೂದೆಯಲ್ಲಿವೆ' ಎಂದು ವಿವರಿಸಿದರು.

- 'ಬಲವಂತದ ಮತಾಂತರಕ್ಕೆ ಹಾಗೂ ವೈಯಕ್ತಿಕ ಲಾಭಕ್ಕಾಗಿ ವಿದೇಶಿ ದೇಣಿಗೆಗಳನ್ನು ಬಳಸುವವರಿಗೆ ಖಂಡಿತ ವಾಗಿ ಈ ಮಸೂದೆ ಅಪಾಯಕಾರಿ' ಎಂದರು.

***ಪ್ರಮುಖ ಅಂಶಗಳು***

- ವಿದೇಶಿ ದೇಣಿ ನಿಯಂತ್ರಣ ಕಾಯ್ದೆ (ಎಫ್‌ಸಿಆರ್‌ಎ) 2010 ಅನ್ನು 2011ರ ಮೇ 1ರಂದು ಜಾರಿಗೊಳಿಸಲಾಯಿತು. 2016, 2018 ಹಾಗೂ 2020ರಲ್ಲಿ ಈ ಕಾಯ್ದೆಗೆ ತಿದ್ದುಪಡಿ ತರಲಾಗಿದೆ
- ಎಫ್‌ಸಿಆರ್‌ಎ ಅಡಿ ದೇಶದಲ್ಲಿ ಪ್ರಸ್ತುತ 16 ಸಾವಿರ ಎನ್‌ಜಿಒಗಳು ನೋಂದಣಿ ಮಾಡಿಸಿವೆ
- ಈ ಎನ್‌ಜಿಒಗಳು ವಾರ್ಷಿಕ ಅಂದಾಜು ₹22 ಸಾವಿರ ಕೋಟಿಗೂ ಅಧಿಕ ವಿದೇಶಿ ದೇಣಿಗೆ ಪಡೆಯುತ್ತಿವೆ

## ❖ ಆರ್‌ಸಿಬಿಗೆ ಕೆಎಂಎಫ್ ಪ್ರಾಯೋಜಕತ್ವ

**ಸಂದರ್ಭ: ಕರ್ನಾಟಕ ಹಾಲು ಮಹಾ ಮಂಡಳಿಯು ನಂದಿನಿ ಉತ್ಪನ್ನಗಳ ಪ್ರಚಾರದ ಭಾಗವಾಗಿ ಐಪಿಎಲ್-2026 ಲೀಗ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು(ಆರ್‌ಸಿಬಿ) ತಂಡದ ಪ್ರಾಯೋಜಕತ್ವ ವಹಿಸಲಿದೆ.**

- ಎರಡು ವರ್ಷದ ಹಿಂದೆ ಸ್ಕಾಟ್‌ಲೆಂಡ್, ಐರ್ಲೆಂಡ್ ತಂಡಗಳಿಗೆ ಕೆಎಂಎಫ್ ಪ್ರಾಯೋಜಕತ್ವ ನೀಡಿತ್ತು. ಈ ಬಾರಿ ಆರ್‌ಸಿಬಿ ತಂಡದ ಅಧಿಕೃತ ಪಾಲುದಾರರಾಗಿ ಕಾರ್ಯ ನಿರ್ವಹಿಸಲಿದ್ದು, ಇದಕ್ಕಾಗಿ ₹4.80 ಕೋಟಿ ವಿನಿಯೋಗ ಮಾಡಲಿದೆ.
- 'ಕ್ರೀಡೆ ಮತ್ತು ಯುವಜನರನ್ನು ಪ್ರೋತ್ಸಾಹಿಸುವ ಧ್ಯೇಯವನ್ನು ನಂದಿನಿ ಬ್ರ್ಯಾಂಡ್ ಹೊಂದಿದೆ. ಕರ್ನಾಟಕದ ಹೆಮ್ಮೆಯ ಎರಡು ಪ್ರತಿಷ್ಠಿತ ಬ್ರ್ಯಾಂಡ್‌ಗಳಾದ 'ನಂದಿನಿ' ಮತ್ತು 'ಆರ್‌ಸಿಬಿ' ಒಂದಾಗಿರುವುದು ಸಂತೋಷದ ವಿಷಯ. ಆರ್‌ಸಿಬಿ ಅಭಿಮಾನಿಗಳೊಂದಿಗೆ ನಂಟನ್ನು ವಿಸ್ತರಿಸಿ ಲೀಗ್‌ನಲ್ಲಿ ಸಂಭ್ರಮಿಸಲು ಎದುರು ನೋಡುತ್ತಿದ್ದೇವೆ' ಎಂದು ಕೆಎಂಎಫ್ ವ್ಯವಸ್ಥಾಪಕ ನಿರ್ದೇಶಕ ಬಿ.ಶಿವಸ್ವಾಮಿ ತಿಳಿಸಿದ್ದಾರೆ.
- 'ನಂದಿನಿ ಬ್ರ್ಯಾಂಡ್‌ನ ಯಾವುದೇ ಜಾಹೀರಾತು ಕ್ರೀಡಾಂಗಣದಲ್ಲಿ ಪ್ರಕಟವಾಗು ವುದಿಲ್ಲ. ಆಟಗಾರರ ಜರ್ಸಿಗಳ ಮೇಲೂ ನಂದಿನಿ ಲಾಂಛನ ಇರುವುದಿಲ್ಲ ಬದಲಿಗೆ ನಂದಿನಿ ಉತ್ಪನ್ನಗಳ ಜಾಹೀರಾತಿನಲ್ಲಿ ಆರ್ ಸಿಬಿ ಆಟಗಾರರಾದ ವಿರಾಟ್ ಕೊಹ್ಲಿ. ರಜತ್ ಪಾಟೀದಾರ್, ದೇವದತ್ತ ಪಡಿಕಲ್ ಅವರ ಭಾವಚಿತ್ರ ಬಳಸಿಕೊಳ್ಳಲು ಅವಕಾಶ ಇರಲಿದೆ' ಎಂದು ಹೇಳಿದ್ದಾರೆ

## ❖ ಚೊಚ್ಚಲ ಖೇಲೊ ಇಂಡಿಯಾ' ಆದಿವಾಸಿ ಕ್ರೀಡಾಕೂಟ: ಈಜು: 5 ಚಿನ್ನ ಬಾಚಿದ ಕರ್ನಾಟಕ

**ಸಂದರ್ಭ: ಈಜಿನಲ್ಲಿ 'ಪವರ್‌ಹೌಸ್' ಎನಿಸಿರುವ ಕರ್ನಾಟಕ ತಂಡದ ಸ್ಪರ್ಧಿಗಳು, ಬುಧವಾರ ಆರಂಭವಾದ ಮೊತ್ತಮೊದಲ ಖೇಲೊ ಇಂಡಿಯಾ ಆದಿವಾಸಿ ಕ್ರೀಡಾಕೂಟ ದಲ್ಲಿ ಸಂಪೂರ್ಣ ಮೇಲುಗೈ ಸಾಧಿಸಿದರು. ಪಣಕ್ಕಿದ್ದ ಆರು ಚಿನ್ನದ ಪದಕಗಳಲ್ಲಿ ಐದನ್ನು ಬಾಚಿಕೊಂಡರು. ಕರ್ನಾಟಕದ ಧೋನೀಶ್ ಎನ್ ಪುರುಷರ 200 ಮೀ ಫ್ರೀಸ್ಟೈಲ್ ಸ್ಪರ್ಧೆಯಲ್ಲಿ ಗಮನ ಸೆಳೆದರು.**

- ಕರ್ನಾಟಕದ ಮಣಿಕಂಠ ಮತ್ತು ಮೆಹಂಜಲಿ ತಲಾ ಎರಡು ಚಿನ್ನದ ಪದಕಗಳನ್ನು ಗೆದ್ದರು.
- ಧೋನೀಶ್ 32 03.55 ಸೆ.ಗಳಲ್ಲಿ ಗುರಿತಲುಪಿದರು. ಕರ್ನಾಟಕದ ಇನ್ನೊಬ್ಬ ಸ್ಪರ್ಧಿ ಕೀರ್ತನ್ ಶರತ್ (2ನಿ:1099) ಸುಮಾರು ಏಳು ಸೆಕೆಂಡುಗಳ ಅಂತರದಲ್ಲಿ ಹಿಂದೆಬಿದ್ದು ಬೆಳ್ಳಿ ಗೆದ್ದರು. ಮಹಾರಾಷ್ಟ್ರದ ಭಕ್ತಿಶ್ ಕುಮೆ (2ನಿ:14.73 ಸೆ.) ಕಂಚಿನ ಪದಕ ತಮ್ಮದಾಗಿಸಿಕೊಂಡರು.
- ಮೊದಲ ದಿನದ ಸ್ಪರ್ಧೆಗಳ ನಂತರ ಕರ್ನಾಟಕ ಪದಕ ಪಟ್ಟಿಯಲ್ಲಿ (5 ಚಿನ್ನ ಸಹಿತ 7 ಪದಕ) ಅಗ್ರಸ್ಥಾನದಲ್ಲಿದೆ.ಒಡಿಶಾ (1 ಚಿನ್ನ ಸೇರಿ 4 ಪದಕ) ಎರಡನೇ ಮತ್ತು ಆತಿಥೇಯ ಛತ್ತೀಸಗಢ (2 ಪದಕ) ನಾಲ್ಕನೇ ಸ್ಥಾನದಲ್ಲಿದೆ.

- ಒಡಿಶಾದ ಅಂಜುಲಿ ಮುಂಡಾ ಮಹಿಳೆಯರ 200 ಮೀ ಫ್ರೀಸ್ಟೈಲ್ ಸ್ಪರ್ಧೆಯನ್ನು 2ನಿ.39.02 ಸೆ.ಗಳಲ್ಲಿ ಜಯಿಸಿ ಕರ್ನಾಟಕದ ಏಕಸ್ವಾಮ್ಯ ತಡೆದರು. ಕೂದಲೆಳೆ ಅಂತರದಲ್ಲಿ ಹಿಂದೆಬಿದ್ದ ಕರ್ನಾಟಕದ ನಿಧಿ ಎಸ್. (2:39.09 ಸೆ.) ಎರಡನೇ ಸ್ಥಾನ ಮತ್ತು ಒಡಿಶಾದ ಶ್ರೀಯಾ ಪದಿಯಾಮಿ (2:49.04) ಮೂರನೇ ಸ್ಥಾನ ಗಳಿಸಿದರು.
- ಪುರುಷರ 100 ಮೀ ಬ್ರೆಸ್ಟ್‌ಸ್ಟ್ರೋಕ್‌ನಲ್ಲಿ ಮಣಿಕಂಠ 1ನಿ.07.41ಸೆ.ಗಳಲ್ಲಿ ಗುರಿತಲುಪಿದರೆ, ಮಹಾರಾಷ್ಟ್ರದ ಪಲಾಶ್ ಠಾಕೂರ್ (1.11.69 ಸೆ.) ನಾಲ್ಕು ಸೆಕೆಂಡುಗಳ ಅಂತರದಲ್ಲಿ ಎರಡನೇ ಸ್ಥಾನಕ್ಕೆ ಸರಿದರು.
- ಮಣಿಕಂಠ ಅವರು 50 ಮೀ ಬಟರ್‌ಫ್ಲೈನಲ್ಲೂ 27.60 ಸೆ.ಗಳ ಅವಧಿಯೊಡನೆ ಚಿನ್ನ ಗೆದ್ದರು ಅಸ್ಸಾಮಿನ ಫಿಮಿನೊ ಇಮೋನ್ ಲಾಲುಂಗ್ (27 69 ಸೆ) ಎರಡನೇ ಸ್ಥಾನ ಗಳಿಸಿದರು
- ಮಹಿಳೆಯರ ವಿಭಾಗದಲ್ಲಿ ಮಹಂಜಲಿ ಸಾಧನೆ ಎದ್ದುಕಂಡಿತು 100 ಮೀ ಬ್ರೆಸ್ಟ್‌ಸ್ಟ್ರೋಕ್‌ನಲ್ಲಿ 1ನಿ 25 81 ಸೆ.ಗಳಲ್ಲಿ ಗುರಿತಲುಪಿದ ಅವರು ಮೊದಲಿಗರಾದರು ಛತ್ತೀಸಗಡದ ಅನುಷ್ಕಾ ಭಗತ್ (1.29 10) ಎರಡನೇ ಸ್ಥಾನ ಗಳಿಸಿದರು. ಅವರು ನಂತರ 50 ಮೀ. ಬಟರ್‌ಫ್ಲೈ ಸ್ಪರ್ಧೆಯನ್ನು 34.67 ಸೆ.ಗಳಲ್ಲಿ ಕ್ರಮಿಸಿ ಚಿನ್ನ ಗೆದ್ದರು.



## ❖ ಐದು ಮಿತ್ರ ರಾಷ್ಟ್ರಗಳ ಹಡಗುಗಳಿಗೆ ಅವಕಾಶ ನೀಡಿದ ಇರಾನ್

**ಸಂದರ್ಭ: ಭಾರತಕ್ಕೆ ಹೊರ್ಮುಜ್ ಮುಕ್ತ: ಭಾರತ ಸೇರಿದಂತೆ ಐದು ಮಿತ್ರ ರಾಷ್ಟ್ರಗಳಿಗೆ ಹೊರ್ಮುಜ್ ಜಲಸಂಧಿಯನ್ನು ಮುಕ್ತಗೊಳಿಸಿರು ವುದಾಗಿ ಇರಾನ್ ವಿದೇಶಾಂಗ ಸಚಿವ ಸೈಯದ್ ಅಬ್ಬಾಸ್ ಅರಾಗ್ಚಿ ಹೇಳಿದ್ದಾರೆ.**

- 'ಚೀನಾ, ರಷ್ಯಾ, ಭಾರತ, ಇರಾಕ್ ಮತ್ತು ಪಾಕಿಸ್ತಾನದತ್ತ ತೆರಳುವ ಸರಕು ಸಾಗಣೆ ಹಡಗುಗಳಿಗೆ ನಾವು ಹೊರ್ಮುಜ್ ದಾಟಲು ಅವಕಾಶ ನೀಡಿದ್ದೇವೆ' ಎಂದು ಗುರುವಾರ ತಿಳಿಸಿದ್ದಾರೆ.

## ❖ ತೆರಿಗೆ ಸೋರಿಕೆ: ₹243 ಕೋಟಿ ನಷ್ಟ

**ಸಂದರ್ಭ: ತೆರಿಗೆ ವಿಧಿಸುವಲ್ಲಿ ಆಗಿರುವ ಲೋಪಗಳಿಂದ 2023-24ನೇ ಆರ್ಥಿಕ ವರ್ಷದಲ್ಲಿ ರಾಜ್ಯ ಸರ್ಕಾರಕ್ಕೆ**

- ಒಟ್ಟು ₹243.33 ಕೋಟಿ ಖೋತಾ ಆಗಿದೆ ಎಂದು ಸಿಎಜಿ ವರದಿ ಹೇಳಿದೆ.
- ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ), ನೋಂದಣಿ ಮತ್ತು ಮುದ್ರಾಂಕ ಶುಲ್ಕ ಹಾಗೂ ವಾಹನಗಳ ಮೇಲೆ ತೆರಿಗೆ ವಿಧಿಸುವಲ್ಲಿ ಆಗಿರುವ ಲೋಪಗಳ ಕಾರಣ 2023-24ನೇ ಆರ್ಥಿಕ ವರ್ಷದಲ್ಲಿ ರಾಜ್ಯ ಸರ್ಕಾರಕ್ಕೆ ಒಟ್ಟು ₹243.33 ಕೋಟಿ ಖೋತಾ ಆಗಿದೆ ಎಂದು ಮಹಾಲೇಖಪಾಲರ (ಸಿಎಜಿ) ವರದಿ ಹೇಳಿದೆ.
- ಹಿಂದಿನ ಆರ್ಥಿಕ ವರ್ಷಗಳಲ್ಲಿ ವಸೂಲಿಗೆ ಸೂಚಿಸಲಾಗಿದ್ದ ದಂಡದ ಮೊತ್ತವನ್ನೂ ಇದು ಒಳಗೊಂಡಿದೆ. ವಿಧಾನಸಭೆಯಲ್ಲಿ ಮಂಡಿಸಲಾದ, 'ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರ ರಾಜ್ಯ ರಾಜಸ್ವದ ವರದಿ 2024ರ ಮಾರ್ಚ್ ನಲ್ಲಿ ಈ ಅಂಶಗಳು ಇವೆ.
- ಜಿಎಸ್‌ಟಿ ಮರುಪಾವತಿ ಪರಿಶೀಲನೆ ಯಲ್ಲಿ ಲೋಪಗಳು ಆಗಿವೆ ಅಗತ್ಯಕ್ಕಿಂತ ಹೆಚ್ಚು ಮೊತ್ತವನ್ನು ಮರುಪಾವತಿ ಮಾಡಲಾಗಿದೆ. ಲೆಕ್ಕಪರಿಶೋಧನೆಗೆ ಒಳಪಡಿಸಿದ 24 ಪ್ರಕರಣಗಳ ಪೈಕಿ 5ರ ದಾಖಲೆಗಳನ್ನು ಮಾತ್ರವೇ ಅಧಿಕಾರಿ ಗಳು ಒದಗಿಸಿದ್ದು, ₹1.75 ಕೋಟಿಯನ್ನು ಹೆಚ್ಚುವರಿಯಾಗಿ ಮರು ಪಾವತಿ ಮಾಡ ಲಾಗಿದೆ 19 ಮರು ಪಾವತಿ ಪ್ರಕರಣಗಳ ದಾಖಲೆಗಳನ್ನು ಪರಿಶೀಲನೆಗೆ ಒಳಪಡಿಸಿಲ್ಲ ಎಂದು ಸಿಎಜಿ ವಿವರಿಸಿದೆ.
- 2020-21ರ ಅವಧಿಯಲ್ಲಿ ಇದೇ ರೀತಿ 90 ಪ್ರಕರಣಗಳಲ್ಲಿ ₹21.26 ಕೋಟಿ ಆದಾಯ ನನ್ನ ಮಾಡಲಾಗಿತ್ತು 2024ರ ಮಾರ್ಚ್ ಅಂತ್ಯದ ಹೊತ್ತಿಗೂ ಇದನ್ನು ವಸೂಲಿ ಮಾಡಿರಲಿಲ್ಲ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ.
- ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕಾಗಿ ರಾಜ್ಯದಾದ್ಯಂತ 28 ಗುತ್ತಿಗೆದಾರರು ನಡೆಸಿಕೊಟ್ಟ ವಿವಿಧ ಕಾಮಗಾರಿಗಳಲ್ಲಿ ಒಟ್ಟು ₹7.28 ಕೋಟಿ ತೆರಿಗೆ ನನ್ನವಾಗಿದೆ 2022ರ ಜನವರಿ 1ರ ನಂತರ ನಿರ್ಮಾಣ ಕಾಮಗಾರಿಗಳ ಮೊತ್ತದ ಮೇಲೆ ಶೇ 18ರಷ್ಟು ತೆರಿಗೆ ಪಾವತಿ ಮಾಡಬೇಕಿತ್ತು ಆದರೆ 2022ರ ಫೆಬ್ರುವರಿ-ಮಾರ್ಚ್ ಅವಧಿಯಲ್ಲಿ ನಡೆಸಿದ ಕಾಮಗಾರಿಗಳೂ ಶೇ 12ರಷ್ಟು ತೆರಿಗೆಯನ್ನಷ್ಟೇ ಪಾವತಿ ಮಾಡಿಸಿಕೊಳ್ಳಲಾಗಿದೆ ಉಳಿಕೆ ಮೊತ್ತವಾದ ₹7:28 ಕೋಟಿಯನ್ನು ವಸೂಲಿ ಮಾಡಿಲ್ಲ ಎಂದು ವಿವರಿಸಿದೆ.
- ವಾಹನಗಳ ಮೇಲೆ ವಿಧಿಸಲಾಗುವ ವಿವಿಧ ರೀತಿಯ ತೆರಿಗೆ ಮತ್ತು ಶುಲ್ಕಗಳ ಸಂಗ್ರಹದಲ್ಲಿ ಸೋರಿಕೆ ಆಗಿರುವ ಕಾರಣ 196.68 ಕೋಟಿಯನ್ನು ನನ್ನವಾಗಿದೆ ರಾಜ್ಯದಲ್ಲಿ ಪರವಾನಗಿ ಇಲ್ಲದೆ 7 ಲಕ್ಷಕ್ಕೂ ಹೆಚ್ಚು ವಾಹನಗಳು ಸಂಚರಿಸುತ್ತಿದ್ದು ಅವುಗಳಿಂದ ₹6 22 ಕೋಟಿ ನನ್ನವಾಗಿದೆ ಎಂದು ವಿವರಿಸಿದೆ.

ಭಾರತದಲ್ಲಿ ಅತಿ ಹೆಚ್ಚು ಮಂದಿಗೆ ಕೃಷಿಯೇ ಜೀವನಾಧಾರ. ಆದರೆ, ಕೃಷಿಗೆ ಮಹಿಳೆಯರೇ ಜೀವಾಳ. ಕೇಂದ್ರ ಸರ್ಕಾರದ ಮಾಹಿತಿಯ ಪ್ರಕಾರ, ದೇಶದ ಶೇ 80ರಷ್ಟು ಮಂದಿ ಗ್ರಾಮೀಣ ಭಾಗದ ಮಹಿಳೆಯರು ಕೃಷಿ ಮತ್ತು ಕೃಷಿ ಸಂಬಂಧಿ ಕೆಲಸಗಳಲ್ಲಿ ತೊಡಗಿಕೊಂಡಿದ್ದಾರೆ. ಹೊಲದಲ್ಲಿ ದುಡಿಯುವ ವಿಚಾರದಲ್ಲಿ ಮುಂಚೂಣಿಯಲ್ಲಿರುವ ಮಹಿಳೆಯರು, ಭೂ ಒಡೆತನದ ವಿಚಾರದಲ್ಲಿ ಹಿಂದುಳಿದಿದ್ದಾರೆ. ದೇಶದಲ್ಲಿ ಜಮೀನು ಮಾಲೀಕತ್ವ ಹೊಂದಿರುವ ಮಹಿಳೆಯರ ಪ್ರಮಾಣ ಅತ್ಯಲ್ಪವಾಗಿದೆ. ವಿಶ್ವಸಂಸ್ಥೆಯು 2026 ಅನ್ನು ಅಂತರರಾಷ್ಟ್ರೀಯ ಮಹಿಳಾ ಕೃಷಿಕರ ವರ್ಷ ಎಂದು ಘೋಷಿಸಿದೆ. ಇದು ಭಾರತದ ಕೃಷಿ ಕ್ಷೇತ್ರದಲ್ಲಿರುವ ಲಿಂಗ ಅಂತರದ ಬಗ್ಗೆ ಗಂಭೀರವಾಗಿ ಚಿಂತಿಸುವಂತೆ ಮಾಡಿದೆ

# ರೈತ ಮಹಿಳೆ

# ದುಡಿಮೆಯಲ್ಲಿ ಮುಂದೆ ಭೂ ಒಡೆತನದಲ್ಲಿ ಹಿಂದೆ

• ಬಿ.ವಿ.ಶ್ರೀನಾಥ್

ವಿಶ್ವಸಂಸ್ಥೆಯ ಆಹಾರ ಮತ್ತು ಕೃಷಿ ಸಂಸ್ಥೆಯು 2026 ಅನ್ನು ಅಂತರರಾಷ್ಟ್ರೀಯ ಮಹಿಳಾ ಕೃಷಿಕರ ವರ್ಷ ಎಂದು ಘೋಷಿಸಿದೆ. ಬೇಸಾಯ ರಂಗದಲ್ಲಿ ಮಹಿಳೆಯರು ನಿರ್ಣಾಯಕ ಪಾತ್ರ ವಹಿಸುತ್ತಿದ್ದರೂ, ಅದಕ್ಕೆ ತಕ್ಕಂತೆ ಅವರಿಗೆ ಸಮನಾದ ಹಕ್ಕುಗಳು ಲಭ್ಯವಾಗಿಲ್ಲ. ಆಹಾರ ಉತ್ಪಾದನೆಯಲ್ಲಿ ಅವರು ವಹಿಸುತ್ತಿರುವ ಪಾತ್ರವು ಬಹುತೇಕ ಯಾರ ಗಮನಕ್ಕೂ ಬರುತ್ತಿಲ್ಲ. ಕೃಷಿಗೆ, ಜಾಗತಿಕ ಆಹಾರ ಭದ್ರತೆಗೆ ಮಹಿಳೆಯರು ನೀಡುತ್ತಿರುವ ಕೊಡುಗೆಯನ್ನು ಗುರುತಿಸುತ್ತಲೇ, ಕೃಷಿರಂಗದಲ್ಲಿರುವ ಲಿಂಗ ಅಂತರವನ್ನು ತೊಡೆದುಹಾಕುವ ದಿಸೆಯಲ್ಲಿ ಕ್ರಮಗಳನ್ನು ಕೈಗೊಳ್ಳಬೇಕು ಎಂದು ವಿಶ್ವಸಂಸ್ಥೆ ಹೇಳಿದೆ. ವಿಶ್ವಸಂಸ್ಥೆಯ ಘೋಷಣೆ, ಆಶಯದ ಬೆಳಕಿನಲ್ಲಿ ನೋಡಿದರೆ, ಭಾರತದಲ್ಲಿ ಭೂ ಒಡೆತನದ ವಿಚಾರದಲ್ಲಿರುವ ಲಿಂಗ ಅಂತರವು ಎದ್ದುಕಾಣುತ್ತದೆ.

ಭಾರತದ ಕೃಷಿಗೆ ಮಹಿಳೆಯರೇ ಆಧಾರ. ರಾಷ್ಟ್ರೀಯ ಮಹಿಳಾ ಆಯೋಗವು ಕೃಷಿಯಲ್ಲಿ ಮಹಿಳೆಯರು ಮತ್ತು ಪುರುಷರು ವಹಿಸುವ ಪಾತ್ರದ ಬಗ್ಗೆ ಅಧ್ಯಯನ ನಡೆಸಿದೆ. ಹೊಲ ಉಳುವುದು, ನೀರಾವರಿ, ಮಾರುಕಟ್ಟೆ ಸೇರಿದಂತೆ ಪುರುಷರದ್ದು ಸೀಮಿತ ಪಾತ್ರವಾದರೆ, ಉಳಿದ ಬಹುತೇಕ ಎಲ್ಲ ಕೆಲಸ, ಜವಾಬ್ದಾರಿಗಳನ್ನೂ ನಿರ್ವಹಿಸುವುದು ಮಹಿಳೆಯೇ ಎಂದು ವರದಿ ಉಲ್ಲೇಖಿಸಿದೆ. ಹೊಲವನ್ನು ಹದಗೊಳಿಸುವುದರಿಂದ ಹಿಡಿದು ಬೀಜ ಬಿತ್ತನೆ, ಕಳೆ ತೆಗೆಯುವುದು, ಕೊಯ್ಲೋತ್ತರ ಕೆಲಸಗಳು ಎಲ್ಲದರಲ್ಲೂ ಮಹಿಳೆಯರು ಮುಂದಿರುತ್ತಾರೆ. ಹೊಲದಲ್ಲಿ ದುಡಿಯುವ ವಿಚಾರದಲ್ಲಿ ಮುಂಚೂಣಿಯಲ್ಲಿರುವ ಮಹಿಳೆಯರು, ಜಮೀನು ಮಾಲೀಕತ್ವದ ವಿಚಾರದಲ್ಲಿ ಹಿಂದುಳಿದಿದ್ದಾರೆ.

ಭಾರತದಲ್ಲಿ ಜೀವನದ ಬಹುತೇಕ ವಲಯಗಳಲ್ಲಿ ಇಂದಿಗೂ ಪುರುಷ ಪ್ರಧಾನ ವ್ಯವಸ್ಥೆಯೇ ಇದೆ. ಇತ್ತೀಚಿನ ದಶಕಗಳಲ್ಲಿ ಹೆಣ್ಣುಮಕ್ಕಳು ವಿದ್ಯಾಭ್ಯಾಸ ಪಡೆಯುವುದರಲ್ಲಿ ಮತ್ತು ಉದ್ಯೋಗ ಕ್ಷೇತ್ರದಲ್ಲಿ ಪುರುಷರಿಗೆ ಸಮನಾಗಿ ಮುನ್ನುಗ್ಗುತ್ತಿದ್ದಾರೆ, ಹಲವು ವಲಯಗಳಲ್ಲಿ ಹೆಚ್ಚಿನ ಸಾಧನೆ ಮಾಡಿದ್ದಾರೆ. ಜತೆಗೆ, ಹಿಂದೂ ಉತ್ತರಾಧಿಕಾರ ಕಾಯ್ದೆಯ ಪ್ರಕಾರ, ಹೆಣ್ಣುಮಕ್ಕಳಿಗೂ ಪಿತ್ರಾರ್ಜಿತ ಆಸ್ತಿಯಲ್ಲಿ ಸಮಪಾಲು ನೀಡುವುದು ಕಡ್ಡಾಯವಾಗಿದೆ. ಆದರೂ ಮಹಿಳೆಯರ ಭೂ ಒಡೆತನದ ಪ್ರಮಾಣ ಅತ್ಯಲ್ಪವಾಗಿದೆ.

**ಆರ್ಥಿಕ ಸಂಪನ್ಮೂಲ:** ಭೂಮಿ ಎನ್ನುವುದು ಇಂದು ಕೇವಲ ಜೀವನೋಪಾಯದ ಮಾರ್ಗವಾಗಿ ಉಳಿದಿಲ್ಲ. ಸಣ್ಣ ಮತ್ತು ಅತಿಸಣ್ಣ ರೈತರೇ ಹೆಚ್ಚಾಗಿರುವ ದೇಶದಲ್ಲಿ ಭೂಮಿಯು ಪ್ರಮುಖ ಆರ್ಥಿಕ ಸಂಪನ್ಮೂಲವೂ ಆಗಿದೆ. ದುಡಿಮೆಯಲ್ಲಿ ಹೆಚ್ಚಿನ ಪಾಲು ಮಹಿಳೆಯದ್ದೇ ಆದರೂ, ಆರ್ಥಿಕ ಸಂಪನ್ಮೂಲದ ಮೇಲಿನ ಹಕ್ಕಿನ ವಿಚಾರದಲ್ಲಿ ಆಕೆಯ ಪಾತ್ರ ಇಂದಿಗೂ ಅತ್ಯಂತ ಸೀಮಿತವಾಗಿದೆ.

ಭಾರತದಲ್ಲಿ ಮಹಿಳೆಯರ ಭೂಹಕ್ಕಿಗೆ ಸಂಬಂಧಿಸಿದಂತೆ ನಿಖರವಾದ, ಇತ್ತೀಚಿನ ಅಧಿಕೃತ ದತ್ತಾಂಶವೇ ಸಿಗುವುದಿಲ್ಲ. ಅದರ ಬಗ್ಗೆ ಗಂಭೀರವಾದ ಅಧ್ಯಯನ, ಮಾಹಿತಿ ಸಂಗ್ರಹಕ್ಕೆ ಸರ್ಕಾರಗಳು ಪ್ರಯತ್ನ ಮಾಡಿಲ್ಲ. ಲಭ್ಯವಿರುವ ಮಾಹಿತಿಯಂತೆ, ಭಾರತದಲ್ಲಿ ಭೂಮಿಯ ಒಡೆತನ ಹೊಂದಿರುವ ಮಹಿಳೆಯರ ಪ್ರಮಾಣವು (ಏಕಮಾಲೀಕತ್ವ ಅಥವಾ ಜಂಟಿ) ಅತ್ಯಂತ ನಿಧಾನಗತಿಯಲ್ಲಿ ಹೆಚ್ಚಾಗುತ್ತಿದೆ. ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆಯ (ಎನ್‌ಎಫ್‌ಎಚ್‌ಎಸ್) ಪ್ರಕಾರ, 15–49 ವರ್ಷದ ಮಹಿಳೆಯರಲ್ಲಿ 2015–16ರಲ್ಲಿ ಈ ಪ್ರಮಾಣವು ಶೇ 28.3ರಷ್ಟಿತ್ತು; 2019–20ರ ವೇಳೆಗೆ ಅದು ಶೇ 31.7ಕ್ಕೆ ಹೆಚ್ಚಾಗಿತ್ತು. 2005–06ರ ಕೃಷಿ ಗಣತಿಯ ಪ್ರಕಾರ, ದೇಶದಲ್ಲಿ ಭೂಒಡೆತನ ಹೊಂದಿದ್ದ ರೈತ ಮಹಿಳೆಯರ ಪ್ರಮಾಣವು ಶೇ 11ರಷ್ಟಿತ್ತು; 2010–11ರ ಹೊತ್ತಿಗೆ ಶೇ 12.8ಕ್ಕೆ ಏರಿದ ಈ ಪ್ರಮಾಣವು 2015–16ರ ಕೃಷಿ ಗಣತಿಯ ಹೊತ್ತಿಗೆ ಶೇ 13.9ರಷ್ಟಾಗಿತ್ತು.

**ಅಡ್ಡಿ ಹಲವು:** ಭೂಒಡೆತನಕ್ಕೆ ಸಂಬಂಧಪಟ್ಟ ಕಾನೂನು ಒಂದೊಂದು ರಾಜ್ಯದಲ್ಲಿ ಒಂದೊಂದು ರೀತಿ ಇದೆ. ಕರ್ನಾಟಕದಲ್ಲಿ ಪ್ರಸ್ತುತ ತಂದೆ ತಾಯಿ ಮೃತಪಟ್ಟ ನಂತರ ಹೆಣ್ಣುಮಕ್ಕಳ ಹೆಸರುಗಳೂ ಭೂ ದಾಖಲೆಯಲ್ಲಿ ನಮೂದಾಗುತ್ತಿವೆ. ಸ್ತ್ರೀಯರ ಭೂ ಒಡೆತನಕ್ಕೂ, ಅವರ ಆರ್ಥಿಕ ಸ್ವಾತಂತ್ರ್ಯ, ಕೃಷಿ ಉತ್ಪಾದ ನೆಗೂ ನೇರ ಸಂಬಂಧ ಇದೆ ಎಂದು ಹಲವು ಅಧ್ಯಯನಗಳು ಉಲ್ಲೇಖಿಸಿವೆ. ಆದರೆ, ಭೂಒಡೆತನ ಪಡೆಯುವ ವಿಚಾರದಲ್ಲಿ ಮಹಿಳೆಯರಿಗೆ ಸಾಮಾಜಿಕ ನಿಲುವುಗಳು, ಪರಾಂಪರಾಗತ ಪದ್ಧತಿಗಳು, ಕಾನೂನಿನ ತಿಳಿವಳಿಕೆಯ ಕೊರತೆ ಮತ್ತು ಪುರುಷ ಪ್ರಧಾನ ಧೋರಣೆಗಳು ಪ್ರಮುಖ ಅಡ್ಡಿಗಳಾಗಿವೆ ಎಂದು ವಿಶ್ಲೇಷಿಸಲಾಗಿದೆ. ಕೃಷಿಯು ದೇಶದಲ್ಲಿ ಅತಿಹೆಚ್ಚು ಮಂದಿಗೆ ಉದ್ಯೋಗ ಕಲ್ಪಿಸಿರುವ ಕ್ಷೇತ್ರವಾಗಿದೆ. ಇಂಥ ವಲಯದಲ್ಲಿ ಭೂಒಡೆತನ ಸಾಧಿಸುವುದು ಮಹಿಳಾ ಸಮಾನತೆಯ ಹಾದಿಯಲ್ಲಿ ಮುಖ್ಯ ಹೆಜ್ಜೆಯಾಗಲಿದೆ.

ಈ ದಿಸೆಯಲ್ಲಿ ಕೃಷಿಯಲ್ಲಿ ಮಹಿಳೆಯರ ಪಾತ್ರವನ್ನು ಗುರುತಿಸುವುದು, ಭೂಮಿಯ ಲಭ್ಯತೆ, ಅದರ ಸ್ವರೂಪ, ಆರ್ಥಿಕ ನೆರವು, ತಾಂತ್ರಿಕ ತರಬೇತಿ ಮುಂತಾಗಿ ಅವರು ಎದುರಿಸುತ್ತಿರುವ ಸವಾಲು–ಸಮಸ್ಯೆಗಳನ್ನು ಬಗೆಹರಿಸುವುದು, ಅದಕ್ಕೆ ಪೂರಕವಾಗಿ ನೀತಿ, ಕಾನೂನು ರೂಪಿಸುವುದು ಆದ್ಯತೆಯಾಗಬೇಕು ಎಂದು ವಿಶ್ವಸಂಸ್ಥೆ ಹೇಳಿದೆ. ರೈತ ಮಹಿಳೆಯರ ಉನ್ನತಿಗಾಗಿ ಅಭ್ಯುದಯಕ್ಕಾಗಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಎಂದೂ ಅದು ತಿಳಿಸಿದೆ.

**ಆಧಾರ:** ಪಿಐಬಿ, ವಿಶ್ವಸಂಸ್ಥೆಯ ಆಹಾರ ಮತ್ತು ಕೃಷಿ ಸಂಸ್ಥೆ, ಕೃಷಿ ಗಣತಿ 2015–16

## ಸಂಬಳವಿಲ್ಲದ ಕೆಲಸ

ಕೃಷಿಯಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆಗೆ ಬೇರೊಂದು ಆಯಾಮವೂ ಇದೆ. ಪ್ರಸ್ತುತ, ಕೃಷಿ ಕಡಿಮೆ ಆದಾಯದ ಮೂಲವಾಗಿರುವುದು ಮತ್ತು ಇತರ ಕಾರಣಗಳಿಂದಾಗಿ ಮಹಿಳೆಯರದ್ದು ಸಂಬಳರಹಿತ ದುಡಿಮೆಯಾಗಿದೆ. ಪೀರಿಯಾಡಿಕ್ ಲೇಬರ್ ಫೋರ್ಸ್ ಸರ್ವೆ–2024ರ (ಪಿಎಲ್‌ಎಫ್‌ಎಸ್) ಪ್ರಕಾರ, ಮಹಿಳಾ ಕಾರ್ಮಿಕರ ಪಾಲ್ಗೊಳ್ಳುವಿಕೆ ದರವು 2017ರಲ್ಲಿ ಶೇ 24.8 ಇದ್ದದ್ದು 2023ಕ್ಕೆ ಶೇ 42ಕ್ಕೆ ಹೆಚ್ಚಾಗಿದೆ. ಅಂದರೆ, ಸ್ವಯಂಉದ್ಯೋಗದಲ್ಲಿ ತೊಡಗಿರುವ ಮಹಿಳೆಯರ ಪ್ರಮಾಣ ಹೆಚ್ಚಾಗಿದೆ. ಗ್ರಾಮೀಣ ಪ್ರದೇಶದಲ್ಲಿ ಸ್ವಯಂಉದ್ಯೋಗ ಎಂದರೆ, ಕುಟುಂಬದ ಜಮೀನಿನಲ್ಲಿ ದುಡಿಯುವುದು ಮತ್ತು ತತ್ಸಂಬಂಧಿ ಕೆಲಸಗಳಲ್ಲಿ ತೊಡಗುವುದೇ ಆಗಿದೆ. ಹೆಚ್ಚಿನ ಮಹಿಳೆಯರು ಪ್ರತಿಫಲವೇ ಇಲ್ಲದ ದುಡಿಮೆಯಲ್ಲಿ ತೊಡಗಿರುವುದನ್ನು ಇದು ಸೂಚಿಸುತ್ತಿದೆ ಎಂದು ವಿಶ್ಲೇಷಿಸಲಾಗಿದೆ.

| | | | |
|---|---|---|---|
| 80% | 33% | 47% | 14% |
| ಕೃಷಿ ಕ್ಷೇತ್ರದಲ್ಲಿ ಗ್ರಾಮೀಣ ಮಹಿಳೆಯರ ಪ್ರಮಾಣ | ಮಹಿಳಾ ಕೂಲಿ ಕಾರ್ಮಿಕರ ಪ್ರಮಾಣ | ಸ್ವಂತ ಹೊಲಗಳಲ್ಲಿ ದುಡಿಯುತ್ತಿರುವ ರೈತ ಮಹಿಳೆಯರ ಪ್ರಮಾಣ | ಭೂ ಒಡೆತನ ಹೊಂದಿರುವ ರೈತ ಮಹಿಳೆಯರ ಪ್ರಮಾಣ |



ಬೆಳಗಾವಿ ತಾಲ್ಲೂಕಿನ ಕುರಿಹಾಳದ ವೈಷ್ಣವಿ ಬಾಳಾರಾಮ ಚೌಗಲೆ ಅವರು ಎತ್ತುಗಳ ಕೊರತೆಯಿಂದಾಗಿ ತಮ್ಮ ಇಬ್ಬರು ಪುತ್ರಿಯರ ನೆರವಿನಿಂದಲೇ ಎಡೆಕುಂಟೆ ಹೊಡೆದಿದ್ದರು

ಪ್ರಜಾವಾಣಿ ಸಂಗ್ರಹ ಚಿತ್ರ: ಸಂತೋಷ ಈ. ಚಿನಗುಡಿ

## ಹಿಂದೂ ಉತ್ತರಾಧಿಕಾರ ಕಾಯ್ದೆ

ಮಹಿಳೆಗೆ ಮೂರು ರೀತಿಯಲ್ಲಿ ಭೂಹಕ್ಕಿನ ಒಡೆತನ ಪ್ರಾಪ್ತವಾಗುತ್ತದೆ. ಪಿತ್ರಾರ್ಜಿತವಾಗಿ, ಸರ್ಕಾರದ ಭೂ ಮಂಜೂರಾತಿ ಮತ್ತು ಖಾಸಗಿ ಭೂಮಿಯನ್ನು ಕೊಂಡುಕೊಳ್ಳುವ ಮೂಲಕ ಮಹಿಳೆಯರು ಭೂಒಡತಿಯರಾಗಬಹುದು. ಪುರುಷರೇ ಕುಟುಂಬದ ಯಜಮಾನರಾಗಿರುವುದರಿಂದ, ಸರ್ಕಾರಗಳು ಮಂಜೂರು ಮಾಡುವಾಗಲೂ ಬಹುತೇಕ ಸಂದರ್ಭಗಳಲ್ಲಿ ಪುರುಷ ಫಲಾನುಭವಿಗಳಿಗೇ ಮಂಜೂರಾತಿ ಸಿಗುತ್ತದೆ. ಮಹಿಳೆಯರ ಭೂಒಡೆತನವನ್ನು ಪ್ರೋತ್ಸಾಹಿಸಲು ಕೆಲವು ರಾಜ್ಯ ಸರ್ಕಾರಗಳು ವಿಶೇಷ ಯೋಜನೆಗಳನ್ನೂ ರೂಪಿಸಿದ್ದವು (ಉದಾಹರಣೆಗೆ, ಆಂಧ್ರಪ್ರದೇಶದ 'ಭೂಮಿ', ಗುಜರಾತ್‌ನ 'ನಾರಿ ಗೌರವ ನೀತಿ').



ಮಹಿಳೆಯರು ಜಮೀನನ್ನು ಕೊಂಡುಕೊಳ್ಳುವ ಮೂಲಕ ಭೂಹಕ್ಕು ಪಡೆಯುವುದು ವಿರಳವಾದ ವಿದ್ಯಮಾನವಾಗಿದೆ. ಪಿತ್ರಾರ್ಜಿತ ಆಸ್ತಿಯಲ್ಲಿ ಪಾಲು ಪಡೆಯುವುದು ಅತ್ಯಂತ ಸಾಮಾನ್ಯವಾದ ವಿಧಾನವಾಗಿದೆ. ಭೂಮಿಯ ಹಕ್ಕು ಪಡೆಯುವುದು ವೈಯಕ್ತಿಕ ಕಾನೂನಿನ ಅಡಿಯಲ್ಲಿ ಬರುತ್ತದೆ. ಭಾರತದಲ್ಲಿ ಒಂದೊಂದು ಧರ್ಮದಲ್ಲಿ ಒಂದೊಂದು ರೀತಿಯಲ್ಲಿ ಹಕ್ಕುಗಳು ಲಭ್ಯವಾಗುತ್ತವೆ. ಉದಾಹರಣೆಗೆ, ಹಿಂದೂ ಉತ್ತರಾಧಿಕಾರ ಕಾಯ್ದೆ (1956) ಪ್ರಕಾರ, ಗಂಡುಮಕ್ಕಳಿಗೆ ಮಾತ್ರ ಪಿತ್ರಾರ್ಜಿತ ಆಸ್ತಿಯಲ್ಲಿ ಹಕ್ಕು ಇತ್ತು. ಈ ಕಾಯ್ದೆಗೆ 2005ರಲ್ಲಿ ತಿದ್ದುಪಡಿ ತಂದು, ಹೆಣ್ಣುಮಕ್ಕಳಿಗೂ ಸಮಾನ ಹಕ್ಕು ಕಲ್ಪಿಸಲಾಯಿತು. ಹಿಂದೂಗಳ ಜತೆಗೆ ಬೌದ್ಧ, ಸಿಖ್ ಮತ್ತು ಜೈನರಿಗೂ ಇದೇ ಕಾಯ್ದೆ ಅನ್ವಯವಾಗುತ್ತಿದೆ. ಮುಸ್ಲಿಂ ವೈಯಕ್ತಿಕ ಕಾನೂನಿನ (1937) ಪ್ರಕಾರ, ಹೆಣ್ಣುಮಕ್ಕಳಿಗೆ ಪಿತ್ರಾರ್ಜಿತ ಆಸ್ತಿಯಲ್ಲಿ ಗಂಡುಮಕ್ಕಳಿಗೆ ಸಿಗುವ ಪಾಲಿನಲ್ಲಿ ಅರ್ಧ ಪಾಲಿನ ಮೇಲೆ ಮಾತ್ರ ಹಕ್ಕು ಪ್ರಾಪ್ತವಾಗುತ್ತದೆ.

## ಜಾಗತಿಕ ಚಿತ್ರಣ ಭಿನ್ನವಲ್ಲ

ಭಾರತವಷ್ಟೇ ಅಲ್ಲ, ಬಹುತೇಕ ಅಭಿವೃದ್ಧಿಶೀಲ ರಾಷ್ಟ್ರಗಳಲ್ಲಿ ಕೃಷಿ ಕ್ಷೇತ್ರದಲ್ಲಿ ಮಹಿಳೆಯರೇ ಮುಖ್ಯ ಪಾತ್ರ ವಹಿಸುತ್ತಿದ್ದಾರೆ. ಅಲ್ಲಿಯೂ ಭೂಮಿಯ ಒಡೆತನ ಹೊಂದಿರುವ ಮಹಿಳೆಯರ ಪ್ರಮಾಣ ಕಡಿಮೆ. ಮಹಿಳೆಯರ ಒಡೆತನದಲ್ಲಿರುವ ಹೆಚ್ಚಿನ ಭೂಮಿಗಳು ಒಂದೋ ಕಿರಿದಾಗಿರುತ್ತವೆ, ಇಲ್ಲವೇ ಪುರುಷರು ಹೊಂದಿರುವ ಭೂಮಿಗಿಂತ ಕಡಿಮೆ ಗುಣಮಟ್ಟದವಾಗಿರುತ್ತವೆ. ಕೆಲವೆಡೆ, ಮಹಿಳೆಯರ ಭೂಒಡೆತನವು ಅಸುರಕ್ಷಿತವೂ ಆಗಿದೆ. ವಿಶ್ವಸಂಸ್ಥೆಯ ಲಿಂಗ ಮತ್ತು ಭೂಮಿಯ ಹಕ್ಕುಗಳ ದತ್ತಾಂಶದ (ಜಿಎಲ್‌ಆರ್‌ಡಿ) ಪ್ರಕಾರ, ಜಾಗತಿಕ ಮಟ್ಟದಲ್ಲಿ ಮಹಿಳೆಯರು ಭೂಒಡೆತನ ಹೊಂದಿರುವ ಪ್ರಮಾಣವು ಶೇ 15ರಷ್ಟು ಮಾತ್ರ. ಉತ್ತರ ಆಫ್ರಿಕಾ ಮತ್ತು ಪಶ್ಚಿಮ ಏಷ್ಯಾದಲ್ಲಿ ಈ ಪ್ರಮಾಣವೂ ಇನ್ನೂ ಕಡಿಮೆ ಇದೆ. ದಕ್ಷಿಣ ಏಷ್ಯಾದಲ್ಲಿ ಪಿತ್ರಾರ್ಜಿತ ಕಾನೂನುಗಳು ಧಾರ್ಮಿಕ ಚೌಕಟ್ಟಿಗೆ ಒಳಪಟ್ಟಿರುವುದು ಮಹಿಳೆಯರು ಭೂಒಡೆತನ ಪಡೆಯಲು ಅಡ್ಡಿಯಾಗಿದೆ.

Publication Date
27/03/2026

Presented by

## ❖ 15 ಅಂಶಗಳ ಪ್ರಶ್ನಾವಳಿ: 'ವಿ.ಆರ್.ಸಿಟಿ 2026' ವರದಿ ಪ್ರಕಟ

**ಸಂದರ್ಭ: ಬೆಂಗಳೂರು ಹಿಂದಿಕ್ಕಿದ ಹೈದರಾಬಾದ್ ದೇಶದ ಅತ್ಯಂತ ವಾಸಯೋಗ್ಯ ನಗರವಾಗಿ ಹೈದರಾಬಾದ್ ಹೊರಹೊಮ್ಮಿದ್ದು, ಬೆಂಗಳೂರು ನಗರವನ್ನು ಹಿಂದಿಕ್ಕಿದೆ. ಮಾಹಿತಿ ತಂತ್ರಜ್ಞಾನ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಈ ಎರಡೂ ನಗರಗಳು ಅತಿ ವೇಗವಾಗಿ ಬೆಳೆಯುತ್ತಿವೆ.**

- ಸುಮಾರು 15 ಅಂಶಗಳ ಪ್ರಶ್ನಾವಳಿಗಳನ್ನು ಆಧಾರವಾಗಿಟ್ಟುಕೊಂಡು ಬೆಂಗಳೂರು ಮೂಲದ ಅನ್ ಬಾಕ್ಸಿಂಗ್ ಬಿಎಲ್ಆರ್ ಸಂಸ್ಥೆ ನಡೆಸಿರುವ ಸಮೀಕ್ಷೆ- 'ವಿ.ಆರ್.ಸಿಟಿ 2026' ವರದಿಯಲ್ಲಿ ಈ ಅಂಶವನ್ನು ಉಲ್ಲೇಖಿಸಲಾಗಿದೆ.
- ಉದ್ಯೋಗ, ಬೆಳವಣಿಗೆ ಮತ್ತು ಸಂಪರ್ಕ ಕ್ಷೇತ್ರದಲ್ಲಿ ಹೊಸ ಸಾಧ್ಯತೆಗಳೊಂದಿಗೆ ದೇಶದ ಭವಿಷ್ಯದ ನಗರಗಳಾಗಿ ರೂಪುಗೊಂಡಿರುವ ಎರಡೂ ನಗರಗಳ ಮೇಲೆ ಈ ವರದಿ ಬೆಳಕು ಚೆಲ್ಲಿದೆ.
- 159 ಪುಟಗಳ ಈ ವರದಿಯಲ್ಲಿ ವಾಸಕ್ಕೆ ಯೋಗ್ಯವಾದ 8 ನಗರಗಳ ಮಾಹಿತಿ ಇದೆ. ಇದರಲ್ಲಿ ಸಂಪರ್ಕ, ವೈವಿಧ್ಯ, ಪ್ರವಾಸ, ವಸತಿ, ಮೂಲಸೌಕರ್ಯ ಹಾಗೂ ಹವಾಮಾನ ಆಧರಿಸಿ ಮಾಹಿತಿ ಸಂಗ್ರಹಿಸಲಾಗಿದೆ.
- ಈ ಪಟ್ಟಿಯಲ್ಲಿ ಹೈದರಾಬಾದ್ ಅಗ್ರಸ್ಥಾನದಲ್ಲಿದ್ದರೆ, ನಂತರದ ಸ್ಥಾನದಲ್ಲಿ ಬೆಂಗಳೂರು ಮತ್ತು ಕೋಲ್ಕತ್ತ ನಗರಗಳು ಇವೆ. ಗುಜರಾತ್‌ನ ಅಹಮದಾಬಾದ್ ಈ ಪಟ್ಟಿಯ ಕೊನೆ ಸ್ಥಾನದಲ್ಲಿದೆ. ಉಳಿದಂತೆ ಚೆನ್ನೈ ದೆಹಲಿ ಎನ್,ಆರ್. ಪುಣೆ, ಗ್ರೇಟರ್ ಮುಂಬೈ ಕ್ರಮವಾಗಿ ನಾಲ್ಕು, ಐದು, ಆರು ಮತ್ತು ಏಳನೇ ಸ್ಥಾನದಲ್ಲಿವೆ
- ಬೆಂಗಳೂರು ಹವಾಗುಣ ವೈವಿಧ್ಯದಲ್ಲಿ ಅಗ್ರ ಸ್ಥಾನದಲ್ಲಿದ್ದರೆ, ಹೈದರಾಬಾದ್ ಸಹ ಈ ಎಲ್ಲಾ ವಿಷಯಗಳಲ್ಲಿ ಸಮಾನ ಪೈಪೋಟಿ ನೀಡಿದೆ ಜತೆಗೆ ಇಲ್ಲಿನ ವಾಹನ ದಟ್ಟಣೆ ಬೆಂಗಳೂರಿನಷ್ಟೇ ಇದೆ
- ಎರಡೂ ನಗರಗಳಲ್ಲಿ ಒಂದು ದಿಕ್ಕಿನಿಂದ ಮತ್ತೊಂದು ದಿಕ್ಕಿನತ್ತ ಸಾಗಲು ಸಾಮಾನ್ಯವಾಗಿ 22 ಕಿ.ಮೀ. ಕ್ರಮಿಸಲು ಸರಾಸರಿ ಅವಧಿ 58ರಿಂದ 59 ನಿಮಿಷ ಭರಿಕು.
- ಪ್ರತಿಷ್ಠಿತ ಬಡಾವಣೆಗಳಲ್ಲಿ ಅತ್ಯಾಧುನಿಕ ಸೌಲಭ್ಯವಿರುವ ಕಚೇರಿ ಸ್ಥಳಾವಕಾಶದ ವಿಷಯದಲ್ಲಿ ಈ ಎರಡೂ ನಗರಗಳು ಶೇಕಡ 53ರಷ್ಟು ಪಾಲು ಹೊಂದಿವೆ ದಿಲ್ಲಿ-ಎನ್‌ಸಿಆರ್ ಮತ್ತು ಗ್ರೇಟರ್ ಮುಂಬೈಗಿಂತ ಕಡಿಮೆ ಜನಸಂಖ್ಯೆ ಇರುವ ನಗರಗಳಾದರೂ ತಮ್ಮ ಸಾಮರ್ಥ್ಯ ಮೀರಿ ಸಾಧನೆ ಮಾಡುತ್ತಿವೆ
- ಕಳೆದ ಎರಡು ವರ್ಷಗಳಲ್ಲಿ ದೇಶದ ಅಗ್ರ 8 ನಗರಗಳ ನಡುವೆ ಹೊಸ ದೇಶಿಯ ವಿಮಾನ ಸಂಚಾರದಲ್ಲಿ ಬೆಂಗಳೂರು ಮತ್ತು ಹೈದರಾಬಾದ್ ಶೇಕಡ ಎರಡೂ ನಗರಗಳು ತಂತ್ರಜ್ಞಾನ ಆಧರಿತ ಬೆಳವಣಿಗೆ ಸಾಧಿಸಿವೆ. ಆದರೆ, ಕಾರ್ಯನಿರ್ವಹಣಾ ರೀತಿ, ಬೆಳವಣಿಗೆಗಳಲ್ಲಿ ತುಂಬ ಅಂತರಗಳಿವೆ. ನವೋದ್ಯಮ, ಹಣಕಾಸು ನೆರವು, ನಾವೀನ್ಯ ಮತ್ತು ಹೊಸ ಉದ್ಯೋಗಗಳ ಸೃಷ್ಟಿಯಲ್ಲಿ ಬೆಂಗಳೂರು ಮುನ್ನಡೆ ಸಾಧಿಸಿದ್ದು ದೇಶದ ನವೋದ್ಯಮ ರಾಜಧಾನಿಯಾಗಿದೆ.
- ಇಲ್ಲಿ ಬ್ಯಾಂಕ್ ಠೇವಣಿ ಪ್ರಮಾಣ ಹೆಚ್ಚಿದೆ. ಹೈದರಾಬಾದ್ ಜಾಗತಿಕ ಸಾಮರ್ಥ್ಯ ಕೇಂದ್ರದ ಹಬ್ ಆಗಿ ಹೊರಹೊಮ್ಮುತ್ತಿದೆ. ಟೆಕ್ ಜಾಬ್‌ಗಳಲ್ಲಿ ಬೆಂಗಳೂರು ಮತ್ತು ಹೈದರಾಬಾದ್ ನಡುವಣ ಅಂತರ ಕಡಿಮೆಯಾಗುತ್ತಿದೆ.
- ಗ್ರಾಹಕರು ಮತ್ತು ಸಣ್ಣ ಉದ್ಯಮಿಗಳಿಗೆ ನೇರವಾಗಿ ನೀಡುವ ಸಾಲ, ಗೃಹ ಸಾಲದಲ್ಲಿ ಹೈದರಾಬಾದ್ ಮುಂದಿದೆ. ಮೂಲಸೌಕರ್ಯ ಅಭಿವೃದ್ಧಿ, ಮಹಿಳೆಯರ ಸುರಕ್ಷತೆಯಲ್ಲಿ ಹೈದರಾಬಾದ್ ಮುಂದಿದೆ. ಐಟಿ, ತಯಾರಿಕಾ ವಲಯ, ಔಷಧ ಮತ್ತು ಬಿಎಫ್ಎಸ್ಐ ವಲಯಗಳಲ್ಲಿ ಉದ್ಯೋಗಿಗಳ ನೇಮಕದಲ್ಲಿ ಎರಡೂ ನಗರಗಳು ಪ್ರಾಬಲ್ಯ ಸಾಧಿಸಿವೆ.

Dr. Rajkumar IAS/KAS Academy

## ❖ ಬಾಹ್ಯಾಕಾಶ ಕಾರ್ಯಕ್ರಮಗಳು ವಿಳಂಬ ಸಾಧ್ಯತೆ: ಸಂಸದೀಯ ಸಮಿತಿ

**ಸಂದರ್ಭ: ಬಿಡುಗಡೆಯಾದ ಅನುದಾನದ ಬಳಕೆ ಹಾಗೂ ಯೋಜನೆ ಅನುಷ್ಠಾನ ನಿರೀಕ್ಷಿತ ಮಟ್ಟದಲ್ಲಿ ಆಗದಿರುವ ಕಾರಣ, ಇಸ್ರೋದ ಮಹತ್ವಾಕಾಂಕ್ಷೆಯ ಬಾಹ್ಯಾಕಾಶ ಕಾರ್ಯಕ್ರಮಗಳು ನಿಗದಿತ ಕಾಲಮಿತಿಯಲ್ಲಿ ಕೈಗೂಡುವುದಿಲ್ಲ ಎಂದು ಸಂಸದೀಯ ಸಮಿತಿಯೊಂದು ತನ್ನ ವರದಿಯಲ್ಲಿ ಕಳವಳ ವ್ಯಕ್ತಪಡಿಸಿದೆ.**

- 'ಯೋಜನೆ ಅನುಷ್ಠಾನದಲ್ಲಿನ ಈ ವಿಳಂಬದಿಂದಾಗಿ ಉದ್ದೇಶಿತ ಬಾಹ್ಯಾಕಾಶ ಕಾರ್ಯಕ್ರಮಗಳು ಇಸ್ರೋಗೆ ಸವಾಲುಗಳಾಗಿ ಪರಿಣಮಿಸುವ ಸಾಧ್ಯತೆ ಇದೆ' ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಕುರಿತ ಸಂಸದೀಯ ಸ್ಥಾಯಿ ಸಮಿತಿ ಹೇಳಿದೆ.

- ಚಂದ್ರಯಾನ-4, ಚಂದ್ರಯಾನ-5 ಹಾಗೂ ಶುಕ್ರ ಗ್ರಹ ಕಕ್ಷೆಗಾಮಿ ಬಾಹ್ಯಾಕಾಶ ಕಾರ್ಯಕ್ರಮಗಳಿಗೆ ಬಿಡುಗಡೆಯಾದ ಅನುದಾನ, ಈ ವರೆಗೆ ಆಗಿರುವ ವೆಚ್ಚ. ಯೋಜನೆಗಾಗಿ ಸಾಧನಗಳ ಖರೀದಿ ಕುರಿತಂತೆ ಬಾಹ್ಯಾಕಾಶ ಇಲಾಖೆ ಅಧಿಕಾರಿಗಳು ನೀಡಿದ ಮಾಹಿತಿ ಆಧರಿಸಿ, ಸಮಿತಿ ಈ ವರದಿ ಸಿದ್ಧಪಡಿಸಿದೆ.
- ಈ ಬಾಹ್ಯಾಕಾಶ ಕಾರ್ಯಕ್ರಮಗಳಿಗೆ ಬಳಸುವ ಗಗನನೌಕೆಯ ವಿನ್ಯಾಸದಲ್ಲಿ ಮಾಡಿರುವ ಬದಲಾವಣೆಗಳು, ಕಚ್ಚಾ ವಸ್ತುಗಳ ಖರೀದಿ ಮುಂದೂಡಿರುವುದು ಸೇರಿ ವಿವಿಧ ಕಾರಣಗಳಿಂದಾಗಿ ಅನುದಾನ ಬಳಕೆ ನಿರೀಕ್ಷಿತ ಮಟ್ಟದಲ್ಲಿ ಆಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ.
- 2027ರ ಅಕ್ಟೋಬರ್‌ನಲ್ಲಿ ಕಾರ್ಯಗತಗೊಳಿಸುವ ಉದ್ದೇಶದ ಚಂದ್ರಯಾನ-4, ₹2,104 ಕೋಟಿ ವೆಚ್ಚದ ಯೋಜನೆ 2025-26ನೇ ಸಾಲಿನ ಬಜೆಟ್‌ನಲ್ಲಿ ₹129 ಕೋಟಿ ಹಂಚಿಕೆಯಾಗಿತ್ತು. ಈ ಪೈಕಿ ಜನವರಿ 31ರ ವರೆಗೆ ಇಸ್ರೋ ₹34 ಕೋಟಿ ಮಾತ್ರ ಖರ್ಚು ಮಾಡಿದೆ ₹982 ಕೋಟಿ ವೆಚ್ಚದ ಚಂದ್ರಯಾನ-6 ಯೋಜನೆ ಪೈಕಿ ₹58 ಲಕ್ಷ, ₹29 5 ಕೋಟಿ ವೆಚ್ಚದ ಶುಕ್ರ ಗ್ರಹ ಕಾರ್ಯಕ್ರಮದಡಿ ₹5.12 ಕೋಟಿ ಖರ್ಚು ಮಾಡಿದೆ.

IAS/KAS Academy



## ❖ ರಷ್ಯಾದಿಂದ ಎಸ್-400 ಖರೀದಿ: ಭಾರತ ಒಪ್ಪಂದ

**ಸಂದರ್ಭ: ರಷ್ಯಾದಿಂದ ಐದು ಎಸ್-400 ಕ್ಷಿಪಣಿ ರಕ್ಷಣಾ ವ್ಯವಸ್ಥೆ ಸೇರಿದಂತೆ ಅತ್ಯಾಧುನಿಕ ಶಸ್ತ್ರಾಸ್ತ್ರ ಖರೀದಿಸಲು ಭಾರತವು ಒಪ್ಪಂದಕ್ಕೆ ಸಹಿ ಹಾಕಿದೆ.**

- ದೇಶದ ವಾಯು ರಕ್ಷಣಾ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸುವುದಕ್ಕಾಗಿ ರಷ್ಯಾದಿಂದ ಐದು ಎಸ್-400 ಕ್ಷಿಪಣಿ ರಕ್ಷಣಾ ವ್ಯವಸ್ಥೆ) ಸೇರಿದಂತೆ ಅತ್ಯಾಧುನಿಕ ಶಸ್ತ್ರಾಸ್ತ್ರ ಖರೀದಿಸಲು ಭಾರತವು ಒಟ್ಟು ₹2.38 ಲಕ್ಷ ಕೋಟಿ ಮೊತ್ತದ ಒಪ್ಪಂದಕ್ಕೆ ಸಹಿ ಹಾಕಿದೆ.
- ಹಳೆಯದಾದ ಎಎನ್-32 ವಿಮಾನಗಳ ಬದಲು ಮಧ್ಯಮ ಶ್ರೇಣಿಯ 60 ಸಾರಿಗೆ ವಿಮಾನಗಳ ಖರೀದಿಯೂ ಈ ಒಪ್ಪಂದಲ್ಲಿ ಸೇರಿದೆ. ಖರೀದಿ ಒಪ್ಪಂದಗಳಿಗೆ ರಕ್ಷಣಾ ಸಚಿವ ರಾಜನಾಥ ಸಿಂಗ್ ಅಧ್ಯಕ್ಷತೆಯ ಸಮಿತಿಯು ಅನುಮೋದನೆ ನೀಡಿದೆ.
- ರಷ್ಯಾ-ಉಕ್ರೇನ್ ಯುದ್ಧದಿಂದಾಗಿ ಎಸ್-400 ಕ್ಷಿಪಣಿ ರಕ್ಷಣಾ ವ್ಯವಸ್ಥೆ ಭಾರತಕ್ಕೆ ಬರುವುದು ತಡವಾಗಿತ್ತು. ಈ ವರ್ಷಾಂತ್ಯದೊಳಗೆ ಖರೀದಿ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ರಕ್ಷಣಾ ಸಚಿವಾಲಯ ಹೇಳಿದೆ. ಎಸ್-400 ಕ್ಷಿಪಣಿ ರಕ್ಷಣಾ ವ್ಯವಸ್ಥೆಯು, ದೂರದಿಂದಲೇ ಶತ್ರು ಪಡೆಯ ಕ್ಷಿಪಣಿಯನ್ನು ಗುರುತಿಸಿ, ಹೊಡೆದುರುಳಿಸುವ ಸಾಮರ್ಥ್ಯ ಹೊಂದಿದೆ.
- ರಷ್ಯಾದಿಂದ ತಂಗುಸ್ಕಾ ಹೆಸರಿನ ವಾಯು ರಕ್ಷಣಾ ಕ್ಷಿಪಣಿ ಖರೀದಿಗೆ ₹445 ಕೋಟಿ ಮೊತ್ತದ ಒಪ್ಪಂದ ಮಾಡಿಕೊಳ್ಳಲಾಗಿದೆ ನೌಕಾಪಡೆಯ 'ಪಿಐ' ಯುದ್ಧ ವಿಮಾನಗಳ ನಿರ್ವಹಣೆಗಾಗಿ ಬೋಯಿಂಗ್ ಕಂಪನಿಯೊಂದಿಗೆ ₹413 ಕೋಟಿ ಮೊತ್ತದ ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

## ❖ ಗಿರಿಜಾಗೆ ವರನಟ ಡಾ.ರಾಜಕುಮಾರ್' ಪ್ರಶಸ್ತಿ

**ಸಂದರ್ಭ: ಕನ್ನಡ ಜನಶಕ್ತಿ ಕೇಂದ್ರ ನೀಡುವ 2026ನೇ ಸಾಲಿನ 'ವರನಟ ಡಾ.ರಾಜಕುಮಾರ್' ಪ್ರಶಸ್ತಿಗೆ ರಂಗಭೂಮಿ ಕಲಾವಿದೆ ಗಿರಿಜಾ ಲೋಕೇಶ್ ಆಯ್ಕೆ ಆಗಿದ್ದಾರೆ.**

- ಪ್ರಶಸ್ತಿಯು 225 ಸಾವಿರ ನಗದು. ಕಂಚಿನ ಫಲಕ ಹಾಗೂ ಪ್ರಶಸ್ತಿ ಗಿರಿಜಾ ಲೋಕೇಶ್ ಪತ್ರವನ್ನು ಒಳಗೊಂಡಿದೆ.
- ಜೆ.ಸಿ. ರಸ್ತೆಯಲ್ಲಿರುವ ಕನ್ನಡ ಭವನದ ನಯನ ಸಭಾಂಗಣದಲ್ಲಿ ಏಪ್ರಿಲ್ 13 ರಂದು ಸಂಜೆ 5.15ಕ್ಕೆ ನಡೆಯುವ ಸಮಾರಂಭದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ. ಬಿಳಿಮಲೆ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಕನ್ನಡಪರ ಹೋರಾಟಗಾರ ಸಾ.ರಾ. ಗೋವಿಂದು ಅಧ್ಯಕ್ಷತೆ ವಹಿಸಲಿದ್ದು, ನವ ಯುಗ ಹೋಟೆಲ್ ಮಾಲೀಕ ಕೆ.ಮೋಹನರಾವ್ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಕನ್ನಡ ಜನ ಶಕ್ತಿ ಕೇಂದ್ರದ ಅಧ್ಯಕ್ಷ ಸಿ.ಕೆ. ರಾಮೇಗೌಡ

Dr. Rajkumar's KAS Academy

### ಕಾಳಿ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಪತ್ತೆ ಮಾಡಿದ ಅರಣ್ಯಾಧಿಕಾರಿಗಳು

# ಹೊಸ ಪ್ರಭೇದದ 'ಕಾಳಿ' ನಿಶಾಚರಿ ಕಪ್ಪೆ ಪತ್ತೆ

• ಎಸ್.ರವಿಪ್ರಕಾಶ್

ಬೆಂಗಳೂರು: ಇದು ಇಬ್ಬರು ಸಾಮಾನ್ಯ ಅರಣ್ಯಾಧಿಕಾರಿಗಳು ಪತ್ತೆ ಮಾಡಿದ ಹೊಸ ಪ್ರಭೇದದ ಕಪ್ಪೆ. ಇದೀಗ ಜಾಗತಿಕ ಮಟ್ಟದಲ್ಲಿ ಮನ್ನಣೆ ಪಡೆದಿದೆ. 'ಪೀರ್ ಜೆ' ಎಂಬ ಅಂತರರಾಷ್ಟ್ರೀಯ ಜರ್ನಲ್‌ನಲ್ಲಿ ಇವರ ಶೋಧನೆ ಕಥೆ ಪ್ರಕಟವಾಗಿದೆ.

ಉಪ ವಲಯ ಅರಣ್ಯಾಧಿಕಾರಿ ಸಿ.ಆರ್.ನಾಯ್ಕ್ ಮತ್ತು ಫಾರೆಸ್ಟರ್ ರಮೇಶ್ ಬಡಿಗೇರ ಅವರೇ ಹೊಸ ಪ್ರಭೇದದ ಕಪ್ಪೆ ಹುಡುಕಿದ ಅಧಿಕಾರಿಗಳು.

2021ರಲ್ಲಿ ಕಾಳಿ ಸಂರಕ್ಷಿತ ಪ್ರದೇಶದಲ್ಲಿ ಕಾಡು ಮತ್ತು ಹುಲಿಗಳ ಮೇಲೆ ನಿಗಾ ಇಡುವ ಸಂದರ್ಭದಲ್ಲಿ ಕಪ್ಪೆಯ ವಟಗುಟ್ಟುವಿಕೆ ಇವರ ಗಮನ ಸೆಳೆಯಿತು. ಅದರ ಸದ್ದು ಇತರ ಕಪ್ಪೆಗಳಿಗಿಂತ ತೀರಾ ಭಿನ್ನವಾಗಿತ್ತು. ಮರದ ದಿಮ್ಮಿ ಕತ್ತರಿಸುವಂತಿತ್ತು.

ಕಪ್ಪೆಗಳ ಕುರಿತು ಸಂಶೋಧನೆ ನಡೆಸುವ ಡಾ. ಕೆ.ವಿ.ಗುರುರಾಜ್ ಮತ್ತು ಅವರ ತಂಡ ಕೋವಿಡ್ ಪೂರ್ವ 2021ರಲ್ಲಿ ಕ್ಯಾಸಲ್‌ರಾಕ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ ಈ ಇಬ್ಬರು ಅರಣ್ಯಾಧಿಕಾರಿಗಳು ವಿಶಿಷ್ಟ ಧ್ವನಿ ಹೊರಡಿಸುವ ಕಪ್ಪೆಗಳು ಇರುವ ಸ್ಥಳಕ್ಕೆ ಕರೆದೊಯ್ದರು. ಇದು ನೋಡಲು ಕುಂಬಾರ ಕಪ್ಪೆಯಂತೆ ಇತ್ತು. ಅವರೂ ಹಾಗೆಯೇ ನಂಬಿದ್ದರು.

> **ಅರಣ್ಯ ಇಲಾಖೆ ಸಿಬ್ಬಂದಿ ಹೊಸ ಪ್ರಭೇದ ಕಪ್ಪೆ ಪತ್ತೆ ಮಾಡಿರುವುದು ಮಹತ್ವದ ವಿಷಯ. ಸಿಬ್ಬಂದಿಯಲ್ಲಿ ವೈಜ್ಞಾನಿಕ ಮನೋಭಾವ ಮತ್ತು ಜೀವ ವೈವಿಧ್ಯತೆ ಕುರಿತು ಉತ್ಸಾಹ ಇರುವುದನ್ನು ಸೂಚಿಸುತ್ತದೆ**
> **ಕುಮಾರ್ ಪುಷ್ಕರ್,**
> ಪಿಸಿಸಿಎಫ್ (ವನ್ಯಜೀವಿ)

'ಕುಂಬಾರ ಕಪ್ಪೆ' ಎಂಬುದು ಪಶ್ಚಿಮ ಘಟ್ಟದಲ್ಲಿ ಕಂಡು ಬರುವ ಒಂದು ವಿಶಿಷ್ಟ ನಿಶಾಚರಿ ಕಪ್ಪೆ ಪ್ರಭೇದ. ಇವು ಮೊಟ್ಟೆಗಳ ಮೇಲೆ ಮಣ್ಣಿನ ಲೇಪನ ಹಾಕಿ, ಕುಂಬಾರನಂತೆ ಗೂಡು ನಿರ್ಮಿಸುವುದರಿಂದ 'ಕುಂಬಾರ ಕಪ್ಪೆ' ಎಂಬ ಹೆಸರು ಇಡಲಾಗಿತ್ತು. ಗುರುರಾಜ ನೇತೃತ್ವದ ತಂಡ ಇದನ್ನು ಪತ್ತೆ ಹಚ್ಚಿದ್ದು, ಇದು ಮೊಟ್ಟೆಗಳಿಗೆ ಪೋಷಕರ ಆರೈಕೆ (ಪೇರಂಟಲ್ ಕೇರ್) ನೀಡುವ ಅಪರೂಪದ ಕಪ್ಪೆ.

ಹೊಸ ಪ್ರಭೇದದ ಕಪ್ಪೆಯ ಕುರಿತು 'ಪ್ರಜಾವಾಣಿ'ಗೆ ಮಾಹಿತಿ ನೀಡಿದ ಗುರುರಾಜ್, 'ಅರಣ್ಯಾಧಿಕಾರಿಗಳು ತೋರಿಸಿದ ಕಪ್ಪೆ ಕುಂಬಾರ ಕಪ್ಪೆಯ ದೇಹ ರಚನೆಯನ್ನೇ ಹೋಲುತ್ತಿದ್ದರೂ ಧ್ವನಿ ಮಾತ್ರ ಭಿನ್ನವಾಗಿತ್ತು. ಪ್ರೀತಿ ಹೆಬ್ಬಾರ್ ಅವರು ಕಪ್ಪೆಯ ಸ್ವ್ಯಾಬ್ ಪರೀಕ್ಷೆ ಮಾಡಿದಾಗ ಡಿಎನ್‌ಎಯಲ್ಲಿ ಶೇ 4 ರಷ್ಟು ವ್ಯತ್ಯಾಸ ಇರುವುದು ಕಂಡುಬಂದಿತು. ಹೀಗಾಗಿ ಇದು ಹೊಸ ಪ್ರಭೇದ ಎಂಬುದು ದೃಢವಾಯಿತು. ಕಾಳಿ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಸಿಕ್ಕ ಕಾರಣ ಕಾಳಿನದಿಯ ಹೆಸರಿನಲ್ಲಿ 'ಕಾಳಿ ನೈಟ್ ಫ್ರಾಗ್' ಎಂದು ಹೆಸರಿಡಲಾಯಿತು. ಇದು ಅವಿಳಿನಂಚಿನ ಅಪರೂಪದ ನಿಶಾಚರಿ ಕಪ್ಪೆ' ಎಂದರು.

'ಸಿ.ಆರ್.ನಾಯ್ಕ್ ಮತ್ತು ರಮೇಶ್ ಬಡಿಗೇರ ಅವರು ಈ ಕಪ್ಪೆಗಳನ್ನು ಪತ್ತೆ ಮಾಡಿದ ಕಾರಣಕ್ಕೆ ಪತ್ತೆ ಮಾಡಿದ ಶ್ರೇಯಸ್ಸು ಅವರಿಗೆ ಸಲ್ಲುತ್ತದೆ. ತಮ್ಮ ನಿತ್ಯದ ಕರ್ತವ್ಯದ ಜತೆಗೆ ಜೀವ ವೈವಿಧ್ಯಗಳ ಬಗ್ಗೆಯೂ ಆಸಕ್ತಿ ಹೊಂದಿದ್ದಾರೆ. ವಿಜ್ಞಾನಿಗಳಲ್ಲದವರೂ ಇಂತಹ ಚಟುವಟಿಕೆಗಳಲ್ಲಿ ತೊಡ-ಗಿಸಿಕೊಳ್ಳಬೇಕು ಎಂಬುದು ನಮ್ಮ ಅಪೇಕ್ಷೆ. ಪಶ್ಚಿಮ ಘಟ್ಟದಲ್ಲಿ ಪತ್ತೆಯಾದ ನಿಚಾರಿ ಪ್ರಭೇದ 35 ನೇ ಕಪ್ಪೆ ಪ್ರಭೇದ ಇದಾಗಿದೆ' ಎಂದು ಅವರು ಹೇಳಿದರು.



ಕಾಳಿ ನಿಶಾಚರಿ ಕಪ್ಪೆ

**ಹೊಸ ಕಪ್ಪೆ ಪತ್ತೆ ಹಚ್ಚಿದ ಬಗೆ...**

'ಒಂದು ದಿನ ಭಾರಿ ಮಳೆ ಸುರಿಯುತ್ತಿತ್ತು. ಕಾಡಿನಲ್ಲಿ ಮೋಟಾರ್ ಬೈಕ್‌ನಲ್ಲಿ ಹೋಗುತ್ತಿದ್ದಾಗ ಸದ್ದೊಂದು ಕೇಳಿಸಿತು. ಕುತೂಹಲಗೊಂಡು ಬೈಕ್ ಹಿಂದಕ್ಕೆ ತಿರುಗಿಸಿಕೊಂಡು ಬಂದು ತುಸು ಹೊತ್ತು ಕಾದೆ. ಸ್ವಲ್ಪ ಹೊತ್ತಿನ ಬಳಿಕ ಅದೇ ರೀತಿಯ ಮತ್ತೊಂದು ಸದ್ದು ಕೇಳಿ ಬಂದಿತು. ಸುರಿಯುವ ಮಳೆಯಲ್ಲೇ ಆ ಧ್ವನಿಯನ್ನು ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿಕೊಂಡು ಗುರುರಾಜ್ ಅವರಿಗೆ ಕಳುಹಿಸಿದೆ' ಎಂದು ಉಪ ವಲಯ ಅರಣ್ಯಾಧಿಕಾರಿ ಸಿ.ಆರ್.ನಾಯ್ಕ್ ತಿಳಿಸಿದ್ದಾರೆ.

'ಮೊದಲಿಗೆ ಕುಂಬಾರ ಕಪ್ಪೆ ಇರಬಹುದು ಎಂದು ಗುರುರಾಜ್ ಅವರ ತಂಡ ಅಭಿಪ್ರಾಯಪಟ್ಟಿತ್ತು. ಅದರ ಡಿಎನ್‌ಎ ಮತ್ತು ಧ್ವನಿ ಪರೀಕ್ಷೆಗೆ ನಡೆಸಿದ ಬಳಿಕ ಹೊಸ ಬಗೆಯ ಕಪ್ಪೆ ಎಂಬುದು ಗೊತ್ತಾಯಿತು. ಇದು ಅಚ್ಚರಿ ಮತ್ತು ಸಂತೋಷಕ್ಕೆ ಕಾರಣವಾಯಿತು' ಎಂದು ಹೇಳಿದ್ದಾರೆ. ಈ ಕುರಿತು ಮಾತನಾಡಿದ ರಮೇಶ್ ಬಡಿಗೇರ, 'ನಾನು ಕೆಲಸ ಮಾಡುವ ಅರಣ್ಯದಲ್ಲಿ ಜೀವ ವೈವಿಧ್ಯದ ಜ್ಞಾನ ಪಡೆಯುವುದೂ ನನ್ನ ಆದ್ಯ ಕರ್ತವ್ಯ. ಗುರುರಾಜ್ ತಂಡ ಕ್ಯಾಸಲ್‌ರಾಕ್‌ಗೆ ಬಂದಾಗ ವಿಶಿಷ್ಟವಾಗಿ ಸದ್ದು ಹೊರಡಿಸುವ ಕಪ್ಪೆ ಇರುವ ಜಾಗಕ್ಕೆ ಕರೆದುಕೊಂಡು ಹೋದೆವು. ಅದು ಕುಂಬಾರ ಕಪ್ಪೆ ಇರಬಹುದು. ಅವುಗಳ ಮೇಲೆ ಗಮನ ಇರಿಸುವಂತೆ ಸೂಚಿಸಿದ್ದರು. ನಾಲ್ಕು ಭಿನ್ನ ಸ್ಥಳಗಳಲ್ಲಿ ಈ ಕಪ್ಪೆಗಳ ಇರುವಿಕೆ ಮತ್ತು ಅವುಗಳ ಸಂತಾನೋತ್ಪತ್ತಿ ಗಮನಿಸಲಾಯಿತು. ಬಳಿಕ ಅದು ಹೊಸ ಪ್ರಭೇದ ಕಪ್ಪೆ ಎಂದು ತಿಳಿದಾಗ ಸಂತೋಷವಾಯಿತು' ಎಂದಿದ್ದಾರೆ.

## ❖ ವಿದೇಶಿ ವಿನಿಮಯ ಸಂಗ್ರಹ ಇಳಿಕೆ

**ಸಂದರ್ಭ: ಮಾರ್ಚ್ 20ಕ್ಕೆ ಅಂತ್ಯಗೊಂಡ ವಾರದಲ್ಲಿ ದೇಶದ ವಿದೇಶಿ ವಿನಿಮಯ ಮೀಸಲು ಸಂಗ್ರಹವು ₹1.08 ಲಕ್ಷ ಕೋಟಿಯಷ್ಟು ಕಡಿಮೆ ಆಗಿದೆ.**

- ಒಟ್ಟು ಮೀಸಲು ಸಂಗ್ರಹವು ₹66.16 ಲಕ್ಷ ಕೋಟಿಗೆ ಇಳಿದಿದೆ ಎಂದು ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ (ಆರ್‌ಬಿಐ) ತಿಳಿಸಿದೆ. ಚಿನ್ನದ ಮೀಸಲು ಸಂಗ್ರಹದಲ್ಲಿನ ಇಳಿಕೆಯೇ ಒಟ್ಟಾರೆ ಮೀಸಲು ಸಂಗ್ರಹ ಕಡಿಮೆಯಾಗಲು ಕಾರಣವಾಗಿದೆ.
- ವಿದೇಶಿ ಕರೆನ್ಸಿಗಳ ಸಂಪತ್ತಿನ ಮೌಲ್ಯ ₹20.154 ಕೋಟಿಯಷ್ಟು ಹೆಚ್ಚಳವಾಗಿದ್ದು, ₹52.84 ಲಕ್ಷ ಕೋಟಿಯಾಗಿದೆ.
- ಚಿನ್ನದ ಮೀಸಲು ಸಂಗ್ರಹದಲ್ಲಿ ₹1.27 ಲಕ್ಷ ಕೋಟ ಇಳಿಕೆಯಾಗಿದ್ದು, ₹11.09 ಲಕ್ಷ ಕೋಟಿಯಾಗಿದೆ. ಸ್ಪೆಷಲ್ ಡ್ರಾಯಿಂಗ್ ರೈಟ್ (ಎಸ್‌ಡಿಆರ್) ₹1.76 ಲಕ್ಷ ಕೋಟಿ ಆಗಿದೆ. ಅಂತರರಾಷ್ಟ್ರೀಯ ಹಣಕಾಸು ನಿಧಿಯಲ್ಲಿ ಭಾರತದ ಪಾಲು ₹45,795 ಕೋಟಿಯಾಗಿದೆ ಎಂದು ತಿಳಿಸಿದೆ.

## ❖ ಏಷ್ಯಾ ಕಪ್ ಆರ್ಚರಿ: ಭಾರತಕ್ಕೆ 10 ಪದಕ

**ಸಂದರ್ಭ: ಭಾರತದ ಕಾಂಪೌಂಡ್ ಆರ್ಚರಿ ಸ್ಪರ್ಧಿಗಳು, ಏಷ್ಯಾ ಕಪ್-ವಿಶ್ವ ಬ್ಯಾಂಕಿಂಗ್ ಟೂರ್ನಿಯಲ್ಲಿ ಶುಕ್ರವಾರ ಪ್ರಾಬಲ್ಯ ಮೆರೆದರು. ಮಿಶ್ರ ತಂಡ ವಿಭಾಗದಲ್ಲಿ ಚಿನ್ನ, ಮಹಿಳಾ ತಂಡ ವಿಭಾಗದಲ್ಲಿ ಬೆಳ್ಳಿ ಜಯಿಸಿದರಲ್ಲದೇ,ಪುರುಷರ ವೈಯಕ್ತಿಕ ವಿಭಾಗದಲ್ಲಿ ಮೂರೂ ಪದಕಗಳನ್ನು ಬಾಚಿಕೊಂಡರು.**

- ರಿಕರ್ವ್ ವಿಭಾಗದಲ್ಲಿ ಭಾರತ ಎರಡು ಬೆಳ್ಳಿ ಪದಕಗಳನ್ನು ಗೆದ್ದುಕೊಂಡಿತು. ಒಟ್ಟು ಎರಡು ಚಿನ್ನ. ನಾಲ್ಕು ಬೆಳ್ಳಿ ಮತ್ತು ನಾಲ್ಕು ಕಂಚಿನ ಪದಕಗಳನ್ನು ತನ್ನದಾಗಿಸಿಕೊಂಡಿತು.
- ಆದರೆ ಚಿನ್ನದ ಲೆಕ್ಕ ತೆಗೆದು ಕೊಂಡರೆ, ಭಾರತದ ಸಾಧನೆ ಕಡಿಮೆ ಎನಿಸಿತು. ಕಳೆದ ಆವೃತ್ತಿಯಲ್ಲಿ ಭಾರತ ಐದು ಚಿನ್ನ ಗೆದ್ದುಕೊಂಡಿತ್ತು
- ರಿಕರ್ವ್ ವಿಭಾಗದ ಕಳಪೆ ಸಾಧನೆ ಇದಕ್ಕೆ, ಕಾರಣವಾಯಿತು. ಈ ವಿಭಾಗದಲ್ಲಿ ಭಾರತ ಒಂದೂ ಚಿನ್ನ ಗೆಲ್ಲಲಾಗಲಿಲ್ಲ, ಪುರುಷರ ವೈಯಕ್ತಿಕ ವಿಭಾಗ ಮತ್ತು ಮಿಶ್ರ ತಂಡ ವಿಭಾಗದಲ್ಲಿ ಭಾರತದ ಸ್ಪರ್ಧಿಗಳಿಗೆ ಪದಕ ಗಳಿಸಲು ವಿಫಲರಾದರು.

## ❖ ಏಷ್ಯಾ ಕಪ್ ಆರ್ಚರಿ: ಭಾರತಕ್ಕೆ 10 ಪದಕ

**ಸಂದರ್ಭ: ಭಾರತದ ಕಾಂಪೌಂಡ್ ಆರ್ಚರಿ ಸ್ಪರ್ಧಿಗಳು, ಏಷ್ಯಾ ಕಪ್-ವಿಶ್ವ ಬ್ಯಾಂಕಿಂಗ್ ಟೂರ್ನಿಯಲ್ಲಿ ಶುಕ್ರವಾರ ಪ್ರಾಬಲ್ಯ ಮೆರೆದರು. ಮಿಶ್ರ ತಂಡ ವಿಭಾಗದಲ್ಲಿ ಚಿನ್ನ, ಮಹಿಳಾ ತಂಡ ವಿಭಾಗದಲ್ಲಿ ಬೆಳ್ಳಿ ಜಯಿಸಿದರಲ್ಲದೇ,ಪುರುಷರ ವೈಯಕ್ತಿಕ ವಿಭಾಗದಲ್ಲಿ ಮೂರೂ ಪದಕಗಳನ್ನು ಬಾಚಿಕೊಂಡರು.**

- ರಿಕರ್ವ್ ವಿಭಾಗದಲ್ಲಿ ಭಾರತ ಎರಡು ಬೆಳ್ಳಿ ಪದಕಗಳನ್ನು ಗೆದ್ದುಕೊಂಡಿತು. ಒಟ್ಟು ಎರಡು ಚಿನ್ನ. ನಾಲ್ಕು ಬೆಳ್ಳಿ ಮತ್ತು ನಾಲ್ಕು ಕಂಚಿನ ಪದಕಗಳನ್ನು ತನ್ನದಾಗಿಸಿಕೊಂಡಿತು.
- ಆದರೆ ಚಿನ್ನದ ಲೆಕ್ಕ ತೆಗೆದು ಕೊಂಡರೆ, ಭಾರತದ ಸಾಧನೆ ಕಡಿಮೆ ಎನಿಸಿತು ಕಳೆದ ಆವೃತ್ತಿಯಲ್ಲಿ ಭಾರತ ಐದು ಚಿನ್ನ ಗೆದ್ದುಕೊಂಡಿತ್ತು
- ರಿಕರ್ವ್ ವಿಭಾಗದ ಕಳಪೆ ಸಾಧನೆ ಇದಕ್ಕೆ, ಕಾರಣವಾಯಿತು. ಈ ವಿಭಾಗದಲ್ಲಿ ಭಾರತ ಒಂದೂ ಚಿನ್ನ ಗೆಲ್ಲಲಾಗಲಿಲ್ಲ, ಪುರುಷರ ವೈಯಕ್ತಿಕ ವಿಭಾಗ ಮತ್ತು ಮಿಶ್ರ ತಂಡ ವಿಭಾಗದಲ್ಲಿ ಭಾರತದ ಸ್ಪರ್ಧಿಗಳಿಗೆ ಪದಕ ಗಳಿಸಲು ವಿಫಲರಾದರು.

**-----------------------------------------ಶುಭವಂದನೆಗಳು-----------------------------------------**